ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 100, ಪುಟಗಳು: 8, ಶನಿವಾರ, 20 ಜನವರಿ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ನೇರ ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶನಿವಾರ 20, ಜನವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ತಿಥಿ: ದಶಮಿ
- ನಕ್ಷತ್ರ: ರೇವತಿ,
- ರಾಹುಕಾಲ - 09:04AM 10:40 AM
- ಗುಳಿಕಕಾಲ - 05:52 AM 07:28 AM
- ಯಮಗಂಡಕಾಲ - 1:52 PM 3:28 PM


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines


## ವೈರಲ್ ಆಗುತ್ತಿರುವ ರಾಮ ಲಲ್ಲಾ ಮೂರ್ತಿ ನಿಜವಾದುದ್ದಲ್ಲ

# ಸತ್ಯೇಂದ್ರ ದಾಸ್ ಸ್ಪಷ್ಟೀಕರಣ

**ಅಯೋಧ್ಯೆ:** ಅಯೋಧ್ಯೆಯ ರಾಮ ಮಂದಿರದ ಗರ್ಭಗುಡಿಯಲ್ಲಿ ಸ್ಥಾಪಿಸಿರುವ ಬಾಲ ರಾಮ ಅಥವಾ ರಾಮ ಲಲ್ಲಾನ ಮೂರ್ತಿಯದ್ದು ಎನ್ನಲಾದ, ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗುತ್ತಿರುವ ಫೋಟೊ ನಿಜವಾದುದಲ್ಲ ಎಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರದ ಪ್ರಧಾನ ಅರ್ಚಕ ಆಚಾರ್ಯ ಸತ್ಯೇಂದ್ರ ದಾಸ್ ಹೇಳಿದರು. ರಾಮ ಲಲ್ಲಾ ಮೂರ್ತಿಯದ್ದು ಎನ್ನಲಾದ ಫೋಟೊ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗುತ್ತಿರುವ ಬೆನ್ನಲ್ಲೇ ಅವರು ಈ ಸ್ಪಷ್ಟೀಕರಣ ನೀಡಿದರು. ರಾಮ ಲಲ್ಲಾ ಮೂರ್ತಿಯ ಚಿತ್ರ ಹೇಗೆ ಸೋರಿಕೆಯಾಯಿತು ಎಂಬುದರ ಕುರಿತು ತನಿಖೆ ನಡೆಸಬೇಕೆಂದು ಅವರು ಆಗ್ರಹಿಸಿದ್ದಾರೆ.



ಪ್ರಾಣ ಪ್ರತಿಷ್ಠೆ ಪೂರ್ಣಗೊಳ್ಳುವ ಮುನ್ನ ಮುಚ್ಚಿರುವ ಬಾಲ ರಾಮ ಮೂರ್ತಿಯ ಕಣ್ಣುಗಳನ್ನು ತೆರೆಯುವುದಿಲ್ಲ. ಶ್ರೀರಾಮನ ಕಣ್ಣುಗಳು ಕಾಣುವ, ವೈರಲ್ ಆಗಿರುವ ವಿಗ್ರಹವು ನಿಜವಾದುಲ್ಲ. ಮೂರ್ತಿಯ ಕಣ್ಣುಗಳು ಕಾಣುವಂಥ ಫೋಟೊ ಬಹಿರಂಗವಾಗಿದ್ದೇ ಹೌದಾದರೆ ಯಾರಿಂದ ಆಯಿತು ಎಂಬುದರ ಕುರಿತು ತನಿಖೆಯಾಗಬೇಕು. ವಿಗ್ರಹದ ಚಿತ್ರಗಳು ಹೇಗೆ ವೈರಲ್ ಆಗುತ್ತಿವೆ ಎಂಬುದನ್ನು ಪತ್ತೆಮಾಡಬೇಕು ಎಂದು ಆಚಾರ್ಯ ಸತ್ಯೇಂದ್ರ ದಾಸ್ ಆಗ್ರಹಿಸಿದ್ದಾರೆ.

ಬಾಲ ರಾಮನ ಮೂರ್ತಿಯನ್ನು ಬಟ್ಟೆಯಿಂದ ಮುಚ್ಚಲಾಗಿದೆ. ವಿಗ್ರಹವನ್ನು ಇನ್ನೂ ಬಹಿರಂಗಪಡಿಸಿಲ್ಲ. ಅಂತಿಮಗೊಳಿಸಲಾಗಿರುವ ಬಾಲ ರಾಮನ ಮೂರ್ತಿಯನ್ನು ಬಟ್ಟೆಯಿಂದ ಮುಚ್ಚಲಾಗಿದೆ ಎಂದು ಅವರು ಹೇಳಿದ್ದಾರೆ.

ಪುಟ 2



## ಯುಕೆ ಸಂಸತ್ತಿನಲ್ಲಿಯೂ ಶ್ರೀರಾಮನ ಜಪ

**ಲಂಡನ್:** ಯುಕೆ ಸಂಸತ್ತಿನ ಆವರದಲ್ಲಿ 'ಜೈ ಶ್ರೀ ರಾಮ್' ಘೋಷಣೆ ಮೊಳಗಿದೆ. ಎಲ್ಲೆಡೆ ರಾಮ ನಾಮ ಪ್ರತಿಧ್ವನಿಸುತ್ತಿದ್ದಂತೆ ಅಯೋಧ್ಯೆಯ ರಾಮಜನ್ಮಭೂಮಿಯಲ್ಲಿರುವ ರಾಮಮಂದಿರದ ಉದ್ಘಾಟನಾ ಸಮಾರಂಭದ ಉತ್ಸಾಹವು ಭೌಗೋಳಿಕ ಮತ್ತು ಸಾಂಸ್ಕೃತಿಕ ಗಡಿಗಳನ್ನು ದಾಟಿದೆ ಎಂಬುದನ್ನು ಇಲ್ಲಿ ಕಾಣಬಹುದು. ಪ್ರಾಣ-ಪ್ರತಿಷ್ಠಾ ಸಮಾರಂಭದ ಆಚರಣೆಗಳನ್ನು ಯುಕೆಯ ಸನಾತನ ಸಂಸ್ಥೆ ಪ್ರಾರಂಭಿಸಿದ್ದು ಶ್ರೀರಾಮನ ಜಪ ಮತ್ತು ಶಂಖದ ಧ್ವನಿಯೊಂದಿಗೆ ಹೌಸ್ ಆಫ್ ಕಾಮನ್ಸ್‌ನಲ್ಲಿ ಮೊಳಗಿತು.

ಪುಟ 2

## ಇಂದಿನಿಂದ ಬೆಂಗಳೂರು ಬನಶಂಕರಿ ದೇವಿ ಜಾತ್ರಾ ಮಹೋತ್ಸವ ಆರಂಭ



**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿರುವ ಬನಶಂಕರಿ ದೇವಸ್ಥಾನದಲ್ಲಿಇಂದಿನಿಂದ (ಜ.20) ಬನಶಂಕರಿ ಅಮ್ಮನವರ 108ನೇ ಜಾತ್ರಾ ಮಹೋತ್ಸವ ಆರಂಭವಾಗಿದೆ. ಜನವರಿ 29ರ ವರೆಗೆ ಬನಶಂಕರಿ ಅಮ್ಮನವರ ಜಾತ್ರಾ ಮಹೋತ್ಸವ ನಡೆಯಲಿದೆ. ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಆಡಳಿತ ಮಂಡಳಿ ಹಲವು ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಇದಕ್ಕಾಗಿ ಎಲ್ಲ ಸಿದ್ಧತೆಗಳು ಪೂರ್ಣಗೊಂಡಿವೆ. ಪ್ರತಿ ದಿನ ಮುಂಜಾನೆ 5 ಗಂಟೆಗೆ ಅಮ್ಮನವರಿಗೆ ಸುಪ್ರಭಾತ ಸೇವೆ, ವಿಶೇಷ ಪಂಚಾಮೃತ ಅಭಿಷೇಕ ನಡೆಯುತ್ತದೆ.

ಪುಟ 2

**ಸಂಕ್ಷಿಪ್ತ ಸುದ್ದಿ**

## ಮಲ್ಲಿಕಾರ್ಜುನ ಖರ್ಗೆಗೆ ನಿಂದನೆ ಆರೋಪ; ಸೂಲಿಬೆಲೆ ವಿರುದ್ಧ ದೂರು ದಾಖಲು



**ಕಲಬುರಗಿ:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ನಿಂದನೆ ಆರೋಪದ ಮೇಲೆ ನಮೋ ಬ್ರಿಗೇಡ್ ಮುಖ್ಯಸ್ಥ ಚಕ್ರವರ್ತಿ ಸೂಲಿಬೆಲೆ ವಿರುದ್ಧ ದೂರು ದಾಖಲಾಗಿದೆ. ಕಲಬುರಗಿ ಜಿಲ್ಲಾ ಘಟಕದ ಕಾಂಗ್ರೆಸ್ ಅಧ್ಯಕ್ಷ ಜಗದೇವ ಗುತ್ತೇದಾರ್ ಅವರು ಕಲಬುರಗಿ ಪೊಲೀಸ್ ಆಯುಕ್ತ ಆರ್ .ಚೇತನ್ ಗೆ ದೂರು ಸಲ್ಲಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆರನ್ನು ಚಕ್ರವರ್ತಿ ಸೂಲಿಬೆಲೆ ಅವಾಚ್ಯ ಶಬ್ದದಿಂದ ನಿಂದಿಸಿದ್ದಾರೆ.

ಪುಟ 2



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು
ಸಮಾಜ ಸುಧಾರಣೆಯ ಮಹಾನಾಯಕರ ಶ್ರೇಷ್ಠ ಮೌಲ್ಯಗಳ ಮರುಸ್ಥಾಪನೆ
ಶತ ಶತಮಾನಗಳ ಹಿಂದೆ ಜಾತಿ ರಹಿತ, ತಾರತಮ್ಯ ರಹಿತ ಸಮಾಜ ರಚನೆಗಾಗಿ ಶ್ರಮಿಸಿದ ದಾರ್ಶನಿಕರಾದ ಬಸವಣ್ಣನವರು ಮತ್ತು ಅಲ್ಲಮ ಪ್ರಭುಗಳು ಹಾಗೂ ಬ್ರಿಟೀಷರ ವಿರುದ್ಧ ವಿರೋಚಿತ ಹೋರಾಟ ನಡೆಸಿದ ವೀರ ವನಿತೆ ರಾಣಿ ಚನ್ನಮ್ಮ ಅವರ ಮೌಲ್ಯಾದರ್ಶಗಳನ್ನು ಮರು ಸ್ಥಾಪಿಸುವ ದಿಶೆಯತ್ತ ನಮ್ಮ ಸರ್ಕಾರವು ಮುನ್ನಡೆಯುತ್ತಿದೆ.
– ಶ್ರೀ ಸಿದ್ದರಾಮಯ್ಯ, ಸನ್ಮಾನ್ಯ ಮುಖ್ಯಮಂತ್ರಿಗಳು
ಸಚಿವ ಸಂಪುಟದ ಐತಿಹಾಸಿಕ ನಿರ್ಣಯಗಳು
ಇಡೀ ಜಗತ್ತಿಗೆ ಸಾಂಸ್ಕೃತಿಕ, ಸಾಮಾಜಿಕ ಹಾಗೂ ರಾಜಕೀಯ ಚಿಂತನೆಗಳಿಗೆ ಹೊಸ ದಿಕ್ಕನ್ನು ತೋರಿಸಿದ, ವಚನ ಚಳವಳಿಯ ನಾಯಕತ್ವವನ್ನು ವಹಿಸಿದ್ದ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರೆಂದು ಘೋಷಣೆ
ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮೊಟ್ಟ ಮೊದಲ ಬಾರಿಗೆ ಸ್ಥಾಪಿಸಿದ ಅಲ್ಲಮ ಪ್ರಭುಗಳ ಹೆಸರನ್ನು ಶಿವಮೊಗ್ಗದ ಹಳೆ ಜೈಲು ಆವರಣಕ್ಕೆ ನಾಮಕರಣ
ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕನ್ನು ಚನ್ನಮ್ಮನ ಕಿತ್ತೂರು ಎಂದು ಮರು ನಾಮಕರಣ
ಶಕ್ತಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಗೃಹ ಜ್ಯೋತಿ ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಅನ್ನಭಾಗ್ಯ ಬಡವರಿಗೆ ಪ್ರತಿ ತಿಂಗಳು 10 kg 5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಗೃಹಲಕ್ಷ್ಮಿ ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000
ಯುವನಿಧಿ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ಪದವೀಧರರಿಗೆ | ₹1500 ಡಿಪ್ಲೋಮಾ ಪದವೀಧರರಿಗೆ
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka https://dipr.karnataka.gov.in/
ಕರ್ನಾಟಕ ವಾರ್ತೆ

## ಯುವತಿ ನೇಣಿಗೆ ಶರಣು- ಕಾರಣ ನಿಗೂಢ

**ಶಿವಮೊಗ್ಗ:** ಯುವತಿಯೊಬ್ಬಳು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ತೀರ್ಥಹಳ್ಳಿಯ ಬಿಳುಕೊಪ್ಪ ಗ್ರಾಮದಲ್ಲಿ ನಡೆದಿದೆ. ಮೃತ ವಿದ್ಯಾರ್ಥಿನಿಯನ್ನು ಅಧೀಕ್ಷಾ (20) ಎಂದು ಗುರುತಿಸಲಾಗಿದೆ. ಯುವತಿ ಬಾಳೆಬೈಲು



ಕಾಲೇಜಿನಲ್ಲಿ ಅಂತಿಮ ವರ್ಷದ ಪದವಿ ವ್ಯಾಸಂಗ ಮಾಡ್ತಿದ್ದಳು. ಗುರುವಾರ ರಾತ್ರಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣಿಗೆ ಶರಣಾಗಿದ್ದಾಳೆ. ಬೆಳಗ್ಗೆ ಯುವತಿ ಹೊರಗೆ ಬರದೇ ಇದ್ದಿದ್ದರಿಂದ ಅನುಮಾನಗೊಂಡು ಬಾಗಿಲು ತೆರೆದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಈ ಸಂಬಂಧ ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ತೀರ್ಥಹಳ್ಳಿ ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಸಂಬಂಧ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಟೆಕ್ವಾಂಡೋ ಚಾಂಪಿಯನ್‌ಶಿಪ್



**ತಿಪಟೂರು:** ಬೆಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ಪ್ರಿನ್ಸ್ ಕಪ್ ಓಪನ್ ಟೆಕ್ವಾಂಡೋ ಚಾಂಪಿಯನ್‌ಶಿಪ್ 2024 ರಲ್ಲಿ ದೀಕ್ಷಾ ಹೇರಿಟೇಜ್ ವಿದ್ಯಾ ಸಂಸ್ಥೆಯ ಶಾಲೆಯ ಮಕ್ಕಳು ಭಾಗವಹಿಸಿ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪಡೆದು ಶಾಲೆಗೆ ಕೀರ್ತಿ ತಂದಿರುತ್ತಾರೆ. ವಿದ್ಯಾರ್ಥಿಗಳಾದ 1ನೇ ತರಗತಿ ವಿಧ್ಯಾರ್ಥಿನಿ ಪೂಜಿತಾ, 5ನೇ ತರಗತಿ ವಿದ್ಯಾರ್ಥಿ ಕು.ಪ್ರಣವ್ ಲೋಕೇಶ್, ಪುನೀಶ್ ಗೌಡ, 6ನೇ ತರಗತಿ ವಿಧ್ಯಾರ್ಥಿನಿ ದೀಕ್ಷಿತಾ ಎನ್.ಆರ್. 8ನೇ ತರಗತಿ ವಿದ್ಯಾರ್ಥಿಗಳಾದ ಅಕ್ಷಯ್ ಹೆಚ್.ಎಸ್, ಕೇಜನ್ ಎಸ್.ವಿ . ಚಿರಾಗ್ ಡಿ ಕಿಶನ್ ವಿ. ಕಿಶೋರ್ ವಿ. ಸಂಸ್ಥೆ ಕಾರ್ಯದರ್ಶಿ ನವೀನ್ ಬಿ ಹೆಚ್. ರವರು ಪ್ರಾಂಶುಪಾಲರಾದ ಶ್ರೀಮತಿ ಗೀತಾ ಆರ್. ಎಸ್. ತರಬೇತುದಾರರಾದ ವಿನಯ್ ಕುಮಾರ್ ಟಿ.ಆರ್. ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀ ಪ್ರವೀಣ್ ಹೆಚ್.ಎಸ್. ಕು. ಸಂಧ್ಯಾ ಹಾಗೂ ಶಾಲಾ ಆಡಳಿತ ಮಂಡಳಿ ಸಿಂಬ್ಬಂದಿ ವರ್ಗ ಮತ್ತು ಪೋಷಕರು, ವಿದ್ಯಾರ್ಥಿಗಳು ಅಭಿನಂದಿಸಿದರು.

## ಬ್ಯಾಡಗಿ ಪಟ್ಟಣದಲ್ಲಿ ನೈತಿಕ ಪೊಲೀಸ್ ಗಿರಿ 7 ಮಂದಿ ಮುಸ್ಲಿಂ ಯುವಕರು ಅರೆಸ್ಟ್




**ಹಾವೇರಿ:** ಹಾನಗಲ್ ನೈತಿಕ ಪೊಲೀಸ್ ಗಿರಿ ಹಾಗೂ ಗ್ಯಾಂಗ್ ರೇಪ್ ಪ್ರಕರಣ ಮುನ್ನೆಲೆಯಲ್ಲಿರುವಾಗಲೇ ಬ್ಯಾಡಗಿ ಪಟ್ಟಣದಲ್ಲಿ ಮತ್ತೊಂದು ನೈತಿಕ ಪೊಲೀಸ್ ಗಿರಿ ನಡೆದಿದೆ. ಹಿಂದೂ ವ್ಯಕ್ತಿಯೊಬ್ಬನ ಜೊತೆ ಕಾಣಿಸಿಕೊಂಡಿದ್ದರು ಎಂಬ ಕಾರಣಕ್ಕೆ ಮುಸ್ಲಿಂ ಯುವತಿಯ ಮೇಲೆ ಮುಸ್ಲಿಂ ಯುವಕರ ಗುಂಪು ಹಲ್ಲೆ ನಡೆಸಿದೆ. ಹಲ್ಲೆಗೊಳಗಾದ ಮುಸ್ಲಿಂ ಯುವತಿ ಬ್ಯಾಡಗಿ ತಾಲೂಕು ಅಗಸನಹಳ್ಳಿ ಗ್ರಾಮದಲ್ಲಿರುವ ಸಂಬಂಧಿಕರ ಮನೆಗೆ ಹೊರಟಿದ್ದರು. ತಮ್ಮ ಜೊತೆ ಕೆಲಸ ಮಾಡ್ತಿದ್ದ ಜಗದೀಶ್ ಎಂಬ ವ್ಯಕ್ತಿ ಜೊತೆ ಬೈಕ್ ನಲ್ಲಿ ತೆರಳುತ್ತಿದ್ದ ವೇಳೆ ಘಟನೆ ನಡೆದಿದೆ. ಬ್ಯಾಡಗಿ ಪಟ್ಟಣದ ಪುರಸಭೆಯ ಬಳಿಯ ಶಿವನ ದೇವಸ್ಥಾನದ ಬಳಿ ಮುಸ್ಲಿಂ ಯುವಕರ ಗುಂಪು ಹಲ್ಲೆ ಮಾಡಿದೆ. ನೀನು ಯಾಕೆ ಇವನ ಜೊತೆ ಬೈಕ್ ನಲ್ಲಿ ಬಂದೆ? ಎಂದು ಪ್ರಶ್ನಿಸಿ ಮುಸ್ಲಿಂ ಯುವಕರ ಗುಂಪು ಹಲ್ಲೆ ನಡೆಸಿದ ಆರೋಪ ಕೇಳಿ ಬಂದಿದೆ. ಯುವತಿಯನ್ನ ಎಳೆದಾಡಿ ಕಪಾಳಕ್ಕೆ ಹೊಡೆದು ಸಾರ್ವಜನಿಕ ಸ್ಥಳದಲ್ಲಿ ಅವಮಾನ ಮಾಡಿದ್ದಾರೆ. ಜೀವ ಬೆದರಿಕೆಯನ್ನೂ ಹಾಕಿದ್ದಾರೆಂದು ಆಕೆ ಪ್ರಕರಣ ದಾಖಲಿಸಿದ್ದಾರೆ. ಬ್ಯಾಡಗಿ ಪೊಲೀಸ್ ಠಾಣೆಯಲ್ಲಿ 9 ಮಂದಿ ವಿರುದ್ಧ ಪ್ರಕರಣ ದಾಖಲಾಗುತ್ತಿದ್ದಂತೆ, 7 ಜನ ಆರೋಪಿಗಳನ್ನ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನ ಅಬ್ದುಲ್ ಖಾದರ್ ಮುದಗಲ್, ಮನ್ಸೂರ್ ತಾಂಡೂರು, ಮೆಹಬೂಬಖಾನ್ ಬಡಿಗೇರ, ರೀಯಾಜ್ ,ಅಲ್ಪಾಜ್ ಬಳಿಗಾರ, ಅಬ್ದುಲ್ ದೇಸೂರ, ಖಾದರ್ ಕಣಕೆ, ಸಲೀಂ ಸಾಬ್ ಖಾಜಿ, ಮಹಬೂಬ್ ಅಲಿ ಹಲಗೇರಿ ಆರೋಪಿಗಳು ಎಂದು ಗುರುತಿಸಲಾಗಿದೆ. ಡಿವೈಎಸ್ಪಿ ಪಾಟೀಲ ನೇತೃತ್ವದಲ್ಲಿ ತನಿಖೆ ನಡೆಸಿದ್ದಾರೆ.

# ಮೋದಿ ಅಧಿಕಾರಕ್ಕೆ ಬರುವ ಮುನ್ನ ಎಸ್‌ಟಿ ಪಂಗಡದ ಕಲ್ಯಾಣಕ್ಕೆ ಶ್ರಮಿಸದ ಕಾಂಗ್ರೆಸ್

**ಬೆಂಗಳೂರು:** ನರೇಂದ್ರ ಮೋದಿ ಅಧಿಕಾರಕ್ಕೆ ಬರುವ ಮುನ್ನ ಪರಿಶಿಷ್ಟ ಜಾತಿ ಪಂಗಡದ ಕಲ್ಯಾಣಕ್ಕೆ ಕಾಂಗ್ರೆಸ್ ಯಾವುದೇ ಕ್ರಮ ಕೈಗೊಂಡಿರಲ್ಲಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ಬಿಜೆಪಿ ಎಸ್‌ಟಿ ಸಮಾವೇಶದಲ್ಲಿ ಮಾತನಾಡಿದ ಅವರು, ಬಿರ್ಸಾ ಮುಂಡಾ ಯಾರು ಅಂತಾ ಮರೆತೇ ಹೋಗಿತ್ತು. ಅವರನ್ನು ಮರೆತು ಹೋಗುವಂತೆ ಮಾಡಿದ್ದ ನೀಚ ಪಾರ್ಟಿ ಕಾಂಗ್ರೆಸ್ ಎಂದು ವಾಗ್ದಾಳಿ ನಡೆಸಿದರು.

ಎಲ್ಲಿ ತಪ್ಪಿದೆ ಅದನ್ನ ಸರಿಪಡಿಸಿಕೊಂಡು ಹೋಗಿ. ಜನರಿಗೆ ಮಾಹಿತಿ ಕೊಡಲು ನಾವು ಇಲ್ಲಿ ಸೇರಿದ್ದೇವೆ ಎಂದು ಹೇಳಿದ ಪ್ರಲ್ಹಾದ್ ಜೋಶಿ, ಭಗವಾನ್ ಬಿರ್ಸಾ ಮುಂಡಾ ಅವರು ಬ್ರಿಟಿಷರ ನಿದ್ದೆಗೆಡಿಸಿದ್ದ ಪರಿಶಿಷ್ಟ ಪಂಗಡದವರು, ಆದಿವಾಸಿಗಳ ನೇತೃತ್ವ ವಹಿಸಿದ್ದರು ಎಂದು ಸ್ಮರಿಸಿದರು. ಎಲ್ಲಾ ಜನರನ್ನ ಗುರುತಿಸಿ ದೇಶದಲ್ಲಿ ಮೊಟ್ಟಮೊದಲ ಬಾರಿಗೆ ಎಸ್‌ಟಿ ಪಂಗಡಕ್ಕೆ ಸೇರಿದ ಹಿಂದುಳಿದ ಪ್ರದೇಶದಲ್ಲಿದ್ದ ದ್ರೌಪದಿ ಮುರ್ಮು ಅವರನ್ನು ರಾಷ್ಟ್ರಪತಿಯನ್ನಾಗಿ ಮಾಡಿದ್ದೇವೆ ಎಂದರು. ಮೀಸಲಾತಿ ವಿಚಾರವಾಗಿ ಮಾತನಾಡಿದ ಅವರು, ಬಸವರಾಜ ಬೊಮ್ಮಾಯಿ ಸರ್ಕಾರ ಇದ್ದಾಗ ಯಡಿಯೂರಪ್ಪ ಅವರ ಆಶೀರ್ವಾದದಿಂದ ಶೇ.3ರಿಂದ ಶೇ.7ಕ್ಕೆ ಏರಿಸಿದ್ದೇವೆ.

ಎಲ್ಲಿ ತಪ್ಪಾಗಿದೆ ಅಂತಾ ಆತ್ಮವಿಮರ್ಶೆ ಮಾಡಿಕೊಳ್ಳಬೇಕು. ಪಕ್ಷದಲ್ಲಿ ಎಸ್‌ಟಿ



ಸಮುದಾಯದವರು ಯಾರು ಗೆದ್ದಿಲ್ಲ. ಪರಿಶಿಷ್ಟ ಪಂಗಡದ ಆಕ್ಷನ್ ಕಮಿಟಿಗೆ 1.8 ಲಕ್ಷ ಭೂಮಿಯನ್ನ ವಿತರಿಸಿದ್ದೇವೆ. ಮುದ್ರಾ ಯೋಜನೆಯಡಿ ಎಸ್‌ಟಿ ಎಸ್‌ಸಿ ಸಮುದಾಯದವರಿಗೆ ಶೇ.50ರಷ್ಟು ಸಾಲ ಸಿಕ್ಕಿದೆ. ಏಕಲವ್ಯ ಶಾಲೆಯನ್ನ ನಿರ್ಲಕ್ಷ್ಯ ಮಾಡಲಾಗಿತ್ತು. 38 ಸಾವಿರ ಶಿಕ್ಷಕರನ್ನು ನೇಮಿಸಿದ್ದು ನರೇಂದ್ರ ಮೋದಿ ಸರ್ಕಾರ ಎಂದರು.

ಪ್ರಧಾನಿ ಜನ್ ಮನ್ ಯೋಜನೆಯಲ್ಲಿ 24 ಸಾವಿರ ಕೊಟ್ಟು ಸ್ಕೂಲ್, ನೀರು ಮೂಲ ಭೂತ ಸೌಕರ್ಯ ಕೊಟ್ಟು ನ್ಯಾಯ ನೀಡಿದ್ದು ಪ್ರಧಾನಿ ಮೋದಿಯವರು. ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ನಡೆಯುವ ಸಮಯದಲ್ಲಿ ಅಪಹಾಸ್ಯ ಮಾಡುವವರಿಗೆ ತಕ್ಕಪಾಠ ಕಲಿಸಬೇಕಿದೆ ಎಂದರು.

ದೇಶದಲ್ಲಿ ಬಹುದೊಡ್ಡ ಬೆಳವಣಿಗೆ ನಡೆಯುತ್ತಿದೆ. ಆರ್ಥಿಕವಾಗಿ ಬಹುದೊಡ್ಡ ಹೆಜ್ಜೆ ಇಡುತ್ತಿದ್ದೇವೆ. ನೂರು ಲಕ್ಷ ಕೋಟಿಯನ್ನ ಇನ್‌ಫ್ರಾಸ್ಟಕ್ಚರ್‌ಗೆ ಅನುದಾನ ಕೊಟ್ಟು ಕೆಲಸ ಮಾಡಿದೆ. 10 ವರ್ಷಗಳಲ್ಲಿ ಏನಾಗಿದೆ ಅಂತ ಪ್ರಶ್ನೆ ಕೇಳುವವರಿಗೆ ಇಂತಹ ಸಾಕಷ್ಟು ಉದಾಹರಣೆಗಳು ಇವೆ ಎಂದರು. ಅಂದು ದುರ್ಬಲ ರಾಷ್ಟ್ರ ಅಂತ ಭಾರತವನ್ನು ಪರಿಗಣಿಸಲಾಗಿತ್ತು. ಆದರೆ, ಇಂದು ಜಗತ್ತಿನ ಪ್ರಬಲ 5ನೇ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದ ಪ್ರಲ್ಹಾದ್ ಜೋಶಿ, 21 ನೇ ಶತಮಾನ ಭಾರತದ ಶತಮಾನವಾಗಲಿದೆ. ವಿಕಸಿತ ಭಾರತ ಆಗಲು ರೋಡ್ ಮ್ಯಾಪ್ ಪ್ರಧಾನಿ ಮೋದಿ ಬಳಿ ಇದೆ. ಜನರಲ್ಲಿ ಕಮ್ಯುನಿಕೇಷನ್ ಗ್ಯಾಪ್ ಆಗಿದೆ. ಅದನ್ನ ಸರಿಪಡಿಸಿಕೊಳ್ಳಬೇಕಿದೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಒಳ ಮೀಸಲಾತಿ ಸಂಬಂಧ ಕೇಂದ್ರಕ್ಕೆ ಶಿಫಾರಸು ಮಾಡಿದ ವಿಚಾರವಾಗಿ ಮಾತನಾಡಿದ ಜೋಶಿ, ಕಾನೂನು ಸಂವಿಧಾನ ಪ್ರಕಾರವಾಗಿ ಬೊಮ್ಮಾಯಿ ಸರ್ಕಾರ ಏನು ಮಾಡಬೇಕೋ ಅದನ್ನು ಮಾಡಿದೆ. ಮುಂದೆ ಏನಾದರೂ ನಮ್ಮದು ಜವಾಬ್ದಾರಿ ಇದ್ದರೆ ಮಾಡುತ್ತೇವೆ. ಸರ್ಕಾರ ಏನು ಪ್ರಸ್ತಾವನೆ ಕೊಟ್ಟಿದೆ ಎಂದು ಪರಿಶೀಲಿಸಿ ತೀರ್ಮಾನ ಮಾಡುತ್ತೇವೆ ಎಂದರು.

## ರಾಜ್ಯದಲ್ಲಿ ಗೋಧ್ರಾ ರೀತಿ ಘಟನೆ ಹೇಳಿಕೆ ಬಿಕೆ ಹರಿಪ್ರಸಾದ್ ವಿಚಾರಣೆ ನಡೆಸಿದ ಸಿಸಿಬಿ

**ಬೆಂಗಳೂರು:** ಕರ್ನಾಟಕದಲ್ಲಿ ಗೋಧ್ರಾ ರೀತಿಯ ಘಟನೆ ಸಂಭವಿಸುವ ಸಾಧ್ಯತೆ ಇದೆ ಎಂದು ಹೇಳಿರುವ ಕಾಂಗ್ರೆಸ್ ಎಂಎಲ್‌ಸಿ ಬಿಕೆ ಹರಿಪ್ರಸಾದ್ ಅವರನ್ನು ಶುಕ್ರವಾರ ಸಿಸಿಬಿ ಪೊಲೀಸರು ವಿಚಾರಣೆ ನಡೆಸಿದರು. ಕೆಕೆ ಗೆಸ್ಟ್‌ಹೌಸ್‌ನಲ್ಲಿ ಹರಿಪ್ರಸಾದ್ ವಿಚಾರಣೆ ನಡೆಸಲಾಯಿತು. ಇದೇ ವೇಳೆ, ಪೊಲೀಸರ ವಿರುದ್ಧ ಅಸಮಾಧಾನ ಹೊರಹಾಕಿದ ಹರಿಪ್ರಸಾದ್, ನನಗೆ ವಿವಿಐಪಿ ಟ್ರೀಟ್‌ಮೆಂಟ್ ಬೇಡ, ಬೇಕಿದ್ದರೆ ಅರೆಸ್ಟ್ ಮಾಡಿ ಎಂದರು.

ಸಿಸಿಬಿ ವಿಚಾರಣೆ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಹರಿಪ್ರಸಾದ್, ಇದು ಕಾಂಗ್ರೆಸ್ ಸರ್ಕಾರವೇ ಅಥವಾ ಆರ್‌ಎಸ್‌ಎಸ್ ಸರ್ಕಾರವೇ ಎಂದು



ಪ್ರಶ್ನಿಸಿದ್ದಾರೆ. ನಾನು ಯಾವ ಸರ್ಕಾರದಲ್ಲಿ ಇದ್ದೇನೆ ಎಂದು ಅರ್ಥವಾಗುತ್ತಿಲ್ಲ. ಬೇಕಿದ್ದರೆ ಮಂಪರು ಪರೀಕ್ಷೆ ಮಾಡಿ ಎಂದು ಪೊಲೀಸರಿಗೆ ಹೇಳಿದ್ದೇನೆ. ಸ್ಟೇಷನ್‌ಗೆ ಕರೆದುಕೊಂಡು ಹೋಗಿ ವಿಚಾರಣೆ ನಡೆಸಲಿ. ನನ್ನ ಜತೆಗೆ ವಿಜಯೇಂದ್ರ ಅವರನ್ನು ಕೂಡ ಮಂಪರು ಪರೀಕ್ಷೆಗೆ ಒಳಪಡಿಸಲಿ. ನನ್ನ ಪರಿಸ್ಥಿತಿಯೇ ಹೀಗಾದರೆ ಕಾಂಗ್ರೆಸ್ ಕಾರ್ಯಕರ್ತರ ಕಥೆ ಏನು ಎಂದು ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿಕೆ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿಲ್ಲ. ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ವಿರುದ್ಧ ಯಾವುದೇ ಕ್ರಮ ಆಗಿಲ್ಲ. ನಾನು ಇವರ ಬೆದರಿಕೆಗಳಿಗೆಲ್ಲ ಜಗ್ಗಲ್ಲ. ಅಂದು ಕೊಟ್ಟ ಹೇಳಿಕೆಗೆ ನಾನು ಬದ್ಧನಾಗಿದ್ದೇನೆ. ರಾಮ ಮಂದಿರಕ್ಕೆ ಹೋಗುವವರಿಗೆ ಸೂಕ್ತ ರಕ್ಷಣೆ ನೀಡಬೇಕು ಎಂದು ಹರಿಪ್ರಸಾದ್ ಹೇಳಿದರು.

**ಏನು ಹೇಳಿದ್ದರು ಹರಿಪ್ರಸಾದ್?:** ಜನವರಿ 22ರಂದು ಅಯೋಧ್ಯೆಗೆ ತೆರಳುವವರಿಗೆ ಸರ್ಕಾರ ರಕ್ಷಣೆ ನೀಡಬೇಕು. ರಾಜ್ಯದಲ್ಲಿ ಗೋಧ್ರಾ ರೀತಿ ಮತ್ತೆ ದುರಂತ ಸಂಭವಿಸುವ ಮಾಹಿತಿ ಇದೆ. ಹೀಗಾಗಿ ಅಯೋಧ್ಯೆಗೆ ತೆರಳುವವರಿಗೆ ರಕ್ಷಣೆ ಒದಗಿಸುವ ಕೆಲಸ ಆಗಬೇಕು ಎಂದು ಬೆಂಗಳೂರಿನಲ್ಲಿ ಇತ್ತೀಚೆಗೆ ಹರಿಪ್ರಸಾದ್ ಹೇಳಿದ್ದರು. ಈ ಹೇಳಿಕೆಗೆ ಪ್ರತಿಪಕ್ಷ ಬಿಜೆಪಿ, ಜೆಡಿಎಸ್ ನಾಯಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು. ಹರಿಪ್ರಸಾದ್ ಅವರನ್ನು ವಿಚಾರಣೆಗೆ ಒಳಪಡಿಸಬೇಕು ಎಂಬ ಆಗ್ರಹವೂ ವ್ಯಕ್ತವಾಗಿತ್ತು.

# ಬೋಯಿಂಗ್ ಸುಕನ್ಯಾ ಯೋಜನೆ ಲೋಕಾರ್ಪಣೆ

**ಬೆಂಗಳೂರು:** ಜಿಲ್ಲೆಯ ದೇವನಹಳ್ಳಿ ತಾಲೂಕಿನ ಬಿ.ಮಾರೇನಹಳ್ಳಿ ಗ್ರಾಮದಲ್ಲಿ ಬೋಯಿಂಗ್ ಇಂಡಿಯಾ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕೇಂದ್ರ ಕ್ಯಾಂಪಸ್‌ನ್ನು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಉದ್ಘಾಟಿಸಿದರು. ಈ ಕ್ಯಾಂಪಸ್ ಬೋಯಿಂಗ್ ಕಂಪನಿಯ ಅತಿ ದೊಡ್ಡ ಹೂಡಿಕೆಯಾಗಿದೆ. 43 ಎಕರೆ ಪ್ರದೇಶದಲ್ಲಿ 1,600 ಕೋಟಿ ರೂ. ವೆಚ್ಚದಲ್ಲಿ ಕ್ಯಾಂಪಸ್ ನಿರ್ಮಾಣ ಮಾಡಲಾಗಿದೆ. ಈ ವೇಳೆ ಬೋಯಿಂಗ್ ಸುಕನ್ಯಾ ಯೋಜನೆಯನ್ನು ಲೋಕಾರ್ಪಣೆಗೊಳಿಸಿದ್ದು,



ದೇಶದ ಹೆಣ್ಣುಮಕ್ಕಳನ್ನು ಏವಿಯೇಷನ್ ಸೆಕ್ಟರ್‌ನತ್ತ ಆಕರ್ಷಿಸುವ ಮತ್ತು ಮಹಿಳೆಯರಿಗೆ ತರಬೇತಿ ನೀಡಲು ಉತ್ತೇಜಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಸಿಎಂ ಸಿದ್ದರಾಮಯ್ಯ ಮತ್ತು ವಿಪಕ್ಷ ನಾಯಕ ಆರ್. ಅಶೋಕ್ ಉಪಸ್ಥಿತರಿದ್ದರು.

ಬಿಐಇಟಿಸಿ ಕೇಂದ್ರದಿಂದ ಜಾಗತಿಕ ಏರೋಸ್ಪೇಸ್ ಉದ್ಯಮದ ಪ್ರಗತಿಗೆ ನೆರವು ನೀಡಲಾಗುತ್ತಿದೆ. 3,000ಕ್ಕೂ ಹೆಚ್ಚು ಇಂಜಿನಿಯರ್‌ಗಳನ್ನು ಹೊಂದುವ ಗುರಿಯನ್ನು ಬಿಐಇಟಿಸಿ ಹಾಕಿಕೊಂಡಿದೆ. ಸಂಶೋಧನೆ ಮತ್ತು ಅಭಿವೃದ್ಧಿ, ಕೃತಕ ಬುದ್ಧಿಮತ್ತೆ, ಮೆಷಿನ್ ಲರ್ನಿಂಗ್, ಇಂಡಸ್ಟ್ರಿಯಲ್ ಇಂಟರ್ನೆಟ್ ಆಫ್ ಥಿಂಗ್ಸ್, ಕ್ಲೌಡ್ ಕಂಪ್ಯೂಟಿಂಗ್, ಮಾಡೆಲ್ ಆಧಾರಿತ ಇಂಜಿನಿಯರಿಂಗ್ ಮತ್ತು ಅಡ್ಡಿಟಿವ್ ಉತ್ಪಾದನೆಯತ್ತ ಗಮನ ಕೇಂದ್ರೀಕರಿಸಲಿದೆ.

**ಏನಿದು ಬೋಯಿಂಗ್ ಸುಕನ್ಯಾ ಯೋಜನೆ?:** ದೇಶಾದ್ಯಂತ ಹೆಚ್ಚು ಹೆಣ್ಣು ಮಕ್ಕಳು ವೈಮಾನಿಕ ವಲಯಕ್ಕೆ ಸೇರಲು ನೆರವಾಗುವ ಉದ್ದೇಶ ಹೊಂದಿರುವ ಬೋಯಿಂಗ್ ಸುಕನ್ಯಾ ಯೋಜನೆ. ಈ ಕಾರ್ಯಕ್ರಮ ಹೆಣ್ಣು ಮಕ್ಕಳಿಗೆ ಪ್ರಮುಖ ವಿಜ್ಞಾನ, ತಂತ್ರಜ್ಞಾನ, ಇಂಜಿನಿಯರಿಂಗ್ ಮತ್ತು ಗಣಿತ ಕೌಶಲಗಳನ್ನು ಸಂಪಾದಿಸಲು ಅವಕಾಶ ಕಲ್ಪಿಸಲಿದೆ. ಹೆಣ್ಣುಮಕ್ಕಳನ್ನು ವೈಮಾನಿಕ ಉದ್ಯೋಗಗಳಿಗೆ ಸಿದ್ಧಗೊಳಿಸಲಿದೆ. ಬಾಲಕಿಯರಿಗಾಗಿ ಬೋಯಿಂಗ್ ಸುಕನ್ಯಾ ಯೋಜನೆ 150 ಸ್ಥಳಗಳಲ್ಲಿ ಕೌಶಲ್ಯ ತರಬೇತಿ ಪ್ರಯೋಗಾಲಯಗಳನ್ನು ತೆರೆಯಲಿದೆ. ವೈಮಾನಿಕ ಕ್ಷೇತ್ರದಲ್ಲಿ ಉದ್ಯೋಗಾವಕಾಶ ಪಡೆಯಲು ಉತ್ತೇಜನ ನೀಡಲಿರುವ ಯೋಜನೆ. ಈ ಯೋಜನೆಯಡಿ ಪೈಲಟ್ ಆಗಲು ತರಬೇತಿ ಪಡೆಯುತ್ತಿರುವ ಬಾಲಕಿಯರಿಗೂ ವಿದ್ಯಾರ್ಥಿ ವೇತನ ಸಿಗಲಿದೆ.

## ಸೌಭಾಗ್ಯ ಲಕ್ಷ್ಮೀ ಶುಗರ್ಸ್ ಲೋನ್ ಪ್ರಕರಣ ಸಿಐಡಿ ತನಿಖೆ

**ಬೆಂಗಳೂರು:** ಬೆಳಗಾವಿಯ ಸೌಭಾಗ್ಯ ಲಕ್ಷ್ಮೀ ಶುಗರ್ಸ್ ಲೋನ್ ಪ್ರಕರಣದ ತನಿಖೆಯನ್ನು ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದೆ. ಬೆಳಗಾವಿ ಜಿಲ್ಲೆ ಗೋಕಾಕ್ ತಾಲೂಕಿನಲ್ಲಿರುವ ಸೌಭಾಗ್ಯ ಲಕ್ಷ್ಮೀ ಶುಗರ್ಸ್ ಹೆಸರಿನಲ್ಲಿ ಅಪೆಕ್ಸ್ ಬ್ಯಾಂಕ್‌ನಿಂದ ಕೋಟ್ಯಾಂತರ ರೂಪಾಯಿ ಸಾಲ ಪಡೆದು ಮರುಪಾವತಿಸದ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಸೇರಿದಂತೆ ಇತರರ ವಿರುದ್ಧ ದೂರು ದಾಖಲಾಗಿದೆ. ಇದೀಗ ರಾಜ್ಯ ಸರ್ಕಾರ, ಈ ಪ್ರಕರಣದ ತನಿಖೆಯನ್ನು ಸಿಐಡಿಗೆ ನೀಡಿ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿಗೆ ಸಂಕಷ್ಟ ಎದುರಾಗಿದೆ.

ಮಾಜಿ ಸಚಿವ, ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ವಿವಿಪುರಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್‌ನಲ್ಲಿ ಸಾಲ ಪಡೆದು ಪಾವತಿಸದೇ ಮೋಸ ಮಾಡುವ ಉದ್ದೇಶ ಹೊಂದಿದ್ದಾರೆ ಎಂದು ಬ್ಯಾಂಕ್ ಮ್ಯಾನೇಜರ್ ರಾಜಣ್ಣ ವಿವಿಪುರಂ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಆರೋಪಿಗಳು ತಾವು ಪಡೆದ ಸಾಲವನ್ನು ಬ್ಯಾಂಕ್‌ಗೆ ಮರುಪಾವತಿ ಮಾಡುವುದರಿಂದ ತಪ್ಪಿಸಿಕೊಂಡು ಬ್ಯಾಂಕ್‌ಗೆ ಮೋಸ ಮಾಡಬೇಕೆಂಬ ಉದ್ದೇಶದಿಂದ ಬ್ಯಾಂಕ್‌ನವರಿಗೆ ಯಾವುದೇ ಮಾಹಿತಿ ನೀಡದೆ ಸೌಭಾಗ್ಯ ಲಕ್ಷ್ಮೀ ಶುಗರ್ಸ್ ಲಿಮಿಟೆಡ್ ಕಂಪನಿಯ ಆಡಳಿತ ಮಂಡಳಿಯಲಿದ ತಮ್ಮ ಹುದ್ದೆಗಳಿಂದ ಹೊರಬಂದು ಸಂಬಂಧವಿಲ್ಲದ ವ್ಯಕ್ತಿಗಳನ್ನು ಕಂಪನಿಗೆ ನಿರ್ದೇಶಕರನ್ನಾಗಿ ನೇಮಿಸಿ ಬ್ಯಾಂಕ್‌ನವರಿಗೆ ನಂಬಿಕೆ ದ್ರೋಹವೆಸಗಿ ಮೋಸ ಮಾಡಿದ್ದಾರೆ ಎಂದು ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಐಪಿಸಿ ಸೆಕ್ಷನ್ 420 (ವಂಚನೆ) ಪ್ರಕರಣದ 01 ಶಾಸಕ ರಮೇಶ್ ಜಾರಕಿಹೊಳಿ, ವಸಂತ್ ವಿ ಪಾಟೀಲ್, ಶಂಕರ್ ಪವಾಡೆ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಸೌಭಾಗ್ಯ ಲಕ್ಷ್ಮೀ ಶುಗರ್ಸ್ ಲಿಮಿಟೆಡ್ ಕಂಪನಿ ಹೆಸರಿನಲ್ಲಿ ಚಾಮರಾಜಪೇಟೆಯ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್‌ನಿಂದ 2013ರಿಂದ 2017ರವರೆಗೆ ಒಟ್ಟು 232 ಕೋಟಿ 88 ಲಕ್ಷ ರೂಪಾಯಿ ಸಾಲ ಪಡೆದಿದ್ದರು. ಬಳಿಕ 2023ರ ವೇಳೆಗೆ 439 ಕೋಟಿ 7 ಲಕ್ಷ ರೂ. ಸಾಲ ಬಾಕಿ ಉಳಿದಿತ್ತು. ಆದ್ರೆ, ಸಾಲ ಮರುಪಾವತಿಸದ ಹಿನ್ನೆಲೆಯಲ್ಲಿ ಬ್ಯಾಂಕ್ ಮ್ಯಾನೇಜರ್ ರಾಜಣ್ಣ ಅವರು ವಿವಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

# ಅಯೋಧ್ಯೆ ತಲುಪಿದ 1,265 ಕೆಜಿ ತೂಕದ ಪ್ರಸಾದದ ಲಡ್ಡು




**ಅಯೋಧ್ಯೆ (ರಾಮಮಂದಿರ):** ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠೆಗಾಗಿ ಅಯೋಧ್ಯೆಯಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿದೆ. ದೇಶ-ವಿದೇಶಗಳಿಂದ ಅಯೋಧ್ಯೆಗೆ ಉಡುಗೊರೆ, ಪ್ರಸಾದದ ಮಹಾಪೂರವೇ ಹರಿದುಬರುತ್ತಿದೆ. ಭಕ್ತರೊಬ್ಬರು ತಯಾರಿಸಿದ್ದ 1265 ಕೆಜಿ ತೂಕದ ಪ್ರಸಾದದ ಲಡ್ಡು ಕೂಡ ಅಯೋಧ್ಯೆ ತಲುಪಿದೆ.

ಈ ಬೃಹತ್ ಪ್ರಮಾಣದ ಲಡ್ಡನ್ನು ಹೊತ್ತು ಹೈದರಾಬಾದ್‌ನಿಂದ ಹೊರಟಿದ್ದ ವಾಹನವು ಅಯೋಧ್ಯೆಯ ಕರಸೇವಕಪುರ ತಲುಪಿದೆ. ಈ ಲಡ್ಡನ್ನು ತಯಾರಿಸಿದ್ದು ಶ್ರೀರಾಮ ಕ್ಯಾಟರಿಂಗ್ ಸರ್ವಿಸಸ್.

ಶ್ರೀರಾಮ ಕ್ಯಾಟರಿಂಗ್ ಸರ್ವಿಸಸ್ ಮಾಲೀಕ ಎನ್.ನಾಗಭೂಷಣ ರೆಡ್ಡಿ ಮಾತನಾಡಿ, ದೇವರು ನನ್ನ ವ್ಯಾಪಾರ ಮತ್ತು ನನ್ನ ಕುಟುಂಬವನ್ನು ಆಶೀರ್ವದಿಸಿದ್ದಾನೆ. ನಾನು ಬದುಕಿರುವವರೆಗೆ ಪ್ರತಿದಿನ ರಾಮಮಂದಿರಕ್ಕಾಗಿ 1 ಕೆಜಿ ಲಡ್ಡು ತಯಾರಿಸುತ್ತೇನೆ ಎಂದು ವಾಗ್ದಾನ ಮಾಡಿದ್ದೇನೆ. ಅಯೋಧ್ಯೆಗೆ ಆಹಾರ ಪ್ರಮಾಣ ಪತ್ರವನ್ನೂ ತಂದಿದ್ದೇನೆ. ಈ ಲಡ್ಡುಗಳು ಒಂದು ತಿಂಗಳು ಬಾಳಿಕೆ ಬರುತ್ತವೆ. 25 ಮಂದಿ 3 ದಿನಗಳವರೆಗೆ ಲಡ್ಡುಗಳನ್ನು ತಯಾರಿಸಿದ್ದಾರೆ ಎಂದು ತಿಳಿಸಿದ್ದಾರೆ.

ಅಯೋಧ್ಯೆ ರಾಮಮಂದಿರದ ಪ್ರತಿಷ್ಠಾಪನೆಯ ದಿನಾಂಕವು ಹತ್ತಿರವಾಗುತ್ತಿದ್ದಂತೆ, ಧಾರ್ಮಿಕ ಉತ್ಸಾಹವು ಭಾರತದಾದ್ಯಂತ ಭಕ್ತರನ್ನು ಆವರಿಸಿದೆ. ಜನರು ಭಗವಾನ್ ರಾಮನಿಗೆ ವಿವಿಧ ವಸ್ತುಗಳನ್ನು ನೀಡಲು ಪ್ರಯತ್ನಿಸುತ್ತಿದ್ದಾರೆ. ಹೈದರಾಬಾದ್‌ನ ನಾಗಭೂಷಣ ರೆಡ್ಡಿ ಎಂಬವರು 1,265 ಕೆಜಿ ತೂಕದ ಲಡ್ಡು ತಯಾರಿಸಿ ಅಯೋಧ್ಯೆಗೆ ನೀಡಿದ್ದಾರೆ.

ಲಡ್ಡು ಪ್ರಸಾದವನ್ನು ಹೈದರಾಬಾದ್‌ನಿಂದ ರಸ್ತೆ ಮೂಲಕ ಭವ್ಯ ಮೆರವಣಿಗೆಯೊಂದಿಗೆ ಅಯೋಧ್ಯೆಗೆ ಕೊಂಡೊಯ್ಯಲಾಯಿತು. ಪ್ರಸಾದವನ್ನು ರೆಫ್ರಿಜರೇಟೆಡ್ ಬಾಕ್ಸ್‌ನಲ್ಲಿ ತೆಗೆದುಕೊಂಡು ಹೋಗಲಾಗಿತ್ತು. ಐದು ವಾಹನಗಳಲ್ಲಿ 18 ಮಂದಿ ಮೆರವಣಿಗೆಯೊಂದಿಗೆ ಸಾಗಿದ್ದರು. ಉದ್ಘಾಟನೆಯ ದಿನವಾದ ಜನವರಿ 22 ರಂದು ಭಕ್ತರಿಗೆ ಲಡ್ಡು ಪ್ರಸಾದ ವಿತರಿಸಲಾಗುವುದು.

# ಮೈಸೂರು ಬ್ಯಾಂಕ್ ಸರ್ಕಲ್‌ನಲ್ಲಿ 15 ಅಡಿ ರಾಮನ ಮೂರ್ತಿ!

**ಬೆಂಗಳೂರು:** ಇಡೀ ದೇಶವೇ ರಾಮನ ಪ್ರಾಣಪ್ರತಿಷ್ಠೆ ಕಾರ್ಯಕ್ರಮಕ್ಕಾಗಿ ಕಾದು ಕುಳಿತಿದೆ. ರಾಮನಾಮದ ಜಪ ಎಲ್ಲ ಕಡೆ ಜೋರಾಗಿದೆ. ರಾಮ ಎಂಬ ಎರಡಕ್ಷರ ಹೊಸದೊಂದು ಅನುಭವ ನೀಡುತ್ತಿದೆ. ಅಯೋಧ್ಯೆಯಲ್ಲಿ ರಾಮಲಲ್ಲಾನ ಪ್ರಾಣಪ್ರತಿಷ್ಠೆಗೆ ಸಕಲ ಸಿದ್ಧತೆ ನಡೆಯುತ್ತಿದ್ದರೆ ಇತ್ತ ಬೆಂಗಳೂರಿನಲ್ಲಿ ಬೃಹತ್ ರಾಮನ ಮೂರ್ತಿ ಜನರನ್ನ ಆಕರ್ಷಿಸುತ್ತಿದೆ.

ಸೋಮವಾರ ಐತಿಹಾಸಿಕ ಬಾಲರಾಮನ ಪ್ರತಿಷ್ಠಾಪನೆಗೆ ಸಕಲ ಸಿದ್ಧತೆಗಳು ನಡೆಯುತ್ತಿವೆ. ಈಗಾಗಲೇ ಕನ್ನಡಿಗ ಅರುಣ್ ಯೋಗಿರಾಜ್ ಕೆತ್ತಿರೋ ಬಾಲರಾಮನ ವಿಗ್ರಹ ಮಂದಿರ ಸೇರಿದ್ದು, ಪ್ರಾಣಪ್ರತಿಷ್ಠಾಪನೆಯ ಕಾರ್ಯ ಸೋಮವಾರ ನಡೆಯಲಿದೆ. ಅಂದಿನ ಈ ವಿಜೃಂಭಣೆಯ ಐತಿಹಾಸಿಕ



ಕ್ಷಣಕ್ಕಾಗಿ ಇಡೀ ಭಾರತವೇ ಕಾತುರದಿಂದ ಕಾಯುತ್ತಿದೆ.

ಇನ್ನು ಸಿಲಿಕಾನ್ ಸಿಟಿಯ ಹೃದಯ ಭಾಗದಲ್ಲಿ 15 ಅಡಿಯ ಬೃಹತ್ ರಾಮನ ಫೈಬರ್ ಮೂರ್ತಿ ನೆಲೆ ನಿಂತಿದ್ದಾನೆ. ಹೌದು, ನೀಲಾಕಾರನಾಗಿ ಕಲಾವಿದರ ಕೈಯಲ್ಲಿ ಮೂಡಿರುವ ರಾಮನ ಮೂರ್ತಿ ಮೈಸೂರು ಬ್ಯಾಂಕ್ ಸರ್ಕಲ್‌ನಲ್ಲಿರುವ ಆಂಜನೇಯ ದೇವಾಲಯದ ಹೊರಗೆ ಬರುವ ಜನರಿಗೆ ದರ್ಶನ ನೀಡುತ್ತಿದ್ದಾನೆ.

ಬೃಹತ್ ರಾಮನ ವಿಗ್ರಹ ನೋಡಿದ ಜನ ಭಕ್ತಿಯಿಂದ ರಾಮನಿಗೆ ವಂದಿಸಿ, ಫೋಟೋ ತೆಗೆದುಕೊಂಡು ಹೋಗುತ್ತಿದ್ದಾರೆ. ನಗರದ ಕೇಂದ್ರಭಾಗದಲ್ಲಿ ನೆಲೆಸಿರುವ ಈ ರಾಮನ ವಿಗ್ರಹ ಜನವರಿ 23 ರವರೆಗೆ ಇರಲಿದ್ದು, ಬರುವ ಭಕ್ತರು ದರ್ಶನ ಪಡೆಯಬಹುದಾಗಿದೆ. ಇನ್ನು ಬೆಂಗಳೂರಿನ ನಾನಾ ಭಾಗಗಳಲ್ಲೂ ಇಂತಹದ್ದೇ ಮೂರ್ತಿ ಪ್ರತಿಷ್ಠಾಪಿಸಲು ತಯಾರಿ ಕೂಡ ನಡೆದಿದೆ.

## 4 ಕೋಟಿ ವೆಚ್ಚದಲ್ಲಿ ಮರಗಳ ಸರ್ವೇಗೆ ಬಿಬಿಎಂಪಿ ಪ್ಲಾನ್

**ಬೆಂಗಳೂರು:** ಸಿಲಿಕಾನ್ ಸಿಟಿ, ಐಟಿಬಿಟಿ ಸಿಟಿ ಅಂತೆಲ್ಲ ಕರೆಯಲ್ಪಡುವ ರಾಜ್ಯ ರಾಜಧಾನಿ ಬೆಂಗಳೂರನ್ನ ಗ್ರೀನ್ ಸಿಟಿ ಮಾಡೋಕೆ ಬಿಬಿಎಂಪಿ ಪಣತೊಟ್ಟಿದೆ. ಇಷ್ಟು ದಿನ ಕದ್ದುಮುಚ್ಚಿ ಮರ ಕಡಿಯುತ್ತಿದ್ದವರಿಗೆ ಲಗಾಮು ಹಾಕಲು ಸಜ್ಜಾಗಿರೋ ಪಾಲಿಕೆ, ಬೆಂಗಳೂರಿನ ಎಂಟು ವಲಯಗಳಲ್ಲಿ ಎಲ್ಲಾ ಮರಗಳ ಸರ್ವೇಗೆ ಮುಂದಾಗಿದೆ. ಸರ್ವೇ ಮೂಲಕ ಅನುಮತಿ ಇಲ್ಲದೇ ಮರ ಕಡಿಯುವವರಿಗೆ ಬಿಸಿ ಮುಟ್ಟಿಸೋಕೆ ಸಜ್ಜಾಗಿದೆ. ಅಭಿವೃದ್ಧಿಯ ಹೆಸರಲ್ಲಿ ಮರ-ಗಿಡಗಳನ್ನ ಕಳೆದುಕೊಂಡು ಕಾಂಕ್ರಿಟ್ ಕಾಡಾಗಿ ಬದಲಾಗ್ತಿರೋ ಬೆಂಗಳೂರಿನ ಹಸಿರು ಉಳಿಸೋಕೆ ಪಾಲಿಕೆ ಸಜ್ಜಾಗಿದೆ. ಇದ್ರೂ ಕದ್ದು ಮುಚ್ಚಿ ಮರ ಕಡಿಯುತ್ತಿದ್ದವರಿಗೆ ಬ್ರೇಕ್ ಹಾಕೋಕೆ ಹೊಸ ಪ್ಲಾನ್ ಗೆ ಮುಂದಾಗಿದೆ. ಬೆಂಗಳೂರಿನ 8 ವಲಯಗಳಲ್ಲಿ ಮರಗಳ ಸರ್ವೇಗೆ ಸಜ್ಜಾಗಿರೋ ಪಾಲಿಕೆ, ಈಗಾಗಲೇ 4 ಕೋಟಿ ವೆಚ್ಚದಲ್ಲಿ ಟೆಂಡರ್ ಕರೆದಿದೆ. ಇನ್ನು ಬೆಂಗಳೂರಿನ ಎಲ್ಲಾ ರಸ್ತೆಗಳು, ಸಾರ್ವಜನಿಕ ಸ್ಥಳಗಳು, ಹಾಗೂ 50ಕ್ಕಿಂತ ಕಡಿಮೆ ಮರಗಳಿರೋ ಖಾಸಗಿ ಜಾಗಗಳಲ್ಲಿ ಮರಗಳ ಸರ್ವೇ ಮಾಡೋಕೆ ಪಾಲಿಕೆ ಚಿಂತನೆ ನಡೆಸಿದೆ ಎಂದು ಬಿಬಿಎಂಪಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಿ.ಎಲ್.ಜಿ. ಸ್ವಾಮಿ ಮಾಹಿತಿ ನೀಡಿದರು.

## ಸತ್ಯೇಂದ್ರ ದಾಸ್ ಸ್ಪಷ್ಟೀಕರಣ

ಅಯೋಧ್ಯೆಯ ಬಾಲ ರಾಮನದ್ದು ಎನ್ನಲಾದ ಚಿತ್ರಗಳು ಶುಕ್ರವಾರ ಸಂಜೆಯಿಂದ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಹಲವು ವಿಐಪಿಗಳು ಹಂಚಿಕೊಂಡಿದ್ದಾರೆ. ವಿಶ್ವ ಹಿಂದೂ ಪರಿಷತ್ ಮತ್ತು ಟ್ರಸ್ಟ್‌ನ ಪದಾಧಿಕಾರಿಗಳು ಚಿತ್ರ ಬಿಡುಗಡೆ ಮಾಡಲು ನಿರಾಕರಿಸಿದ್ದರು. ಆದಾಗ್ಯೂ, ಚಿತ್ರ ವೈರಲ್ ಆಗಿದೆ.

ಮತ್ತೊಂದೆಡೆ, ದೇವಾಲಯದೊಳಗೆ ವಿಗ್ರಹವನ್ನು ಇರಿಸುವ ಕೆಲವು ದಿನಗಳ ಮೊದಲು ಚಿತ್ರಗಳನ್ನು ತೆಗೆದಿರಬಹುದು ಮತ್ತು ಅದನ್ನು ಈಗ ಪ್ರಸಾರ ಮಾಡಲಾಗುತ್ತಿದೆ ಎಂದು ವಿಎಚ್‌ಪಿ ನಾಯಕರು ಅನುಮಾನ ವ್ಯಕ್ತಪಡಿಸಿದ್ದಾರೆ. ಸಂಪೂರ್ಣ ಮೂರ್ತಿಯ ಮೊದಲ ಚಿತ್ರ ಜನವರಿ 22 ರಂದು ಮಾತ್ರ ಲಭ್ಯವಾಗುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

ಜನವರಿ 22 ರಂದು ಪ್ರಧಾನಿ ನರೇಂದ್ರ ಮೋದಿಯವರು ಪ್ರಾಣ ಪ್ರತಿಷ್ಠಾ ಪೂಜೆ ನೆರವೇರಿಸಲಿದ್ದಾರೆ. ಲಕ್ಷ್ಮೀಕಾಂತ್ ದೀಕ್ಷಿತ್ ನೇತೃತ್ವದ ಅರ್ಚಕರ ತಂಡವು ಪ್ರಾಣ ಪ್ರತಿಷ್ಠೆಯ ಮುಖ್ಯ ವಿಧಿವಿಧಾನಗಳನ್ನು ನೆರವೇರಿಸಲಿದೆ. ಇದಕ್ಕಾಗಿ ಪ್ರಧಾನಿ ಅವರು ಸದ್ಯ ಕೆಲವು ಕಠಿಣ ವ್ರತ ಅನುಸರಿಸುತ್ತಿದ್ದಾರೆ ಎನ್ನಲಾಗಿದೆ.

## ಶ್ರೀರಾಮನ ಜಪ

ಸಾಮಾಜಿಕ ಮಾಧ್ಯಮದಲ್ಲಿ ಶೇರ್ ಆಗಿರುವ ವಿಡಿಯೊ ಪ್ರಕಾರ, ಭಗವಾನ್ ರಾಮನನ್ನು 'ಯುಗ ಪುರುಷ' ಎಂದು ಶ್ಲಾಘಿಸುವ ಕಾರ್ಯಕ್ರಮವು ಭಜನೆಯೊಂದಿಗೆ ಪ್ರಾರಂಭವಾಯಿತು. ಖಖಗಏ ಸದಸ್ಯರು ಕಾಕಭೂಶುಂಡಿ ಸಂವಾದದ ಪ್ರಸ್ತುತಿಯೊಂದಿಗೆ ಆರಂಭವಾದ ಈ ಕಾರ್ಯಕ್ರಮ ಭಗವದ್ಗೀತೆಯ 12 ನೇ ಅಧ್ಯಾಯವನ್ನು ಪಠಿಸುವ ಮೂಲಕ ಭಗವಾನ್ ವಿಷ್ಣುವಿನ 10 ನೇ ಅವತಾರವಾದ ಭಗವಾನ್ ಕೃಷ್ಣನಿಗೆ ಗೌರವ ಸಲ್ಲಿಸಿದರು.

ಹಾರೋ ಸಂಸದ ಬಾಬ್ ಬ್ಲ್ಯಾಕ್‌ಮನ್, ರಾಜ್ ರಾಜೇಶ್ವರ್ ಗುರು ಮತ್ತು ಹನ್ಸ್ಲೋ ಬ್ರಹ್ಮಋಷಿ ಆಶ್ರಮದ ಸ್ವಾಮಿ ಸೂರ್ಯ ಪ್ರಭಾ ದೀದಿ ಆಧ್ಯಾತ್ಮಿಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಏತನ್ಮಧ್ಯೆ, ದೇಶಾದ್ಯಂತ 200 ಕ್ಕೂ ಹೆಚ್ಚು



ದೇವಾಲಯಗಳು, ಸಮುದಾಯ ಸಂಘಟನೆಗಳು ಮತ್ತು ಸಂಘಗಳು ಸಹಿ ಮಾಡಿದ ಯುಕೆ ಘೋಷಣೆಯನ್ನು ಜನವರಿ 22 ರಂದು ಪ್ರಾಣ-ಪ್ರತಿಷ್ಠಾ ಸಮಾರಂಭದ ಮೊದಲು ದೇವಾಲಯದ ಪಟ್ಟಣದಲ್ಲಿರುವ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ ಪ್ರಸ್ತುತಪಡಿಸಲಾಗುತ್ತದೆ.

ಬ್ರಿಟನ್‌ನಲ್ಲಿರುವ ಧಾರ್ಮಿಕ ಸಮುದಾಯಗಳು ಅಯೋಧ್ಯೆಯ ರಾಮಜನ್ಮಭೂಮಿ ಮಂದಿರದ ಪ್ರತಿಷ್ಠಾಪನೆ ಸಮಾರಂಭವನ್ನು ಸ್ವಾಗತಿಸಲು ಸಂತೋಷವನ್ನು ವ್ಯಕ್ತಪಡಿಸಿವೆ. ಪ್ರಾಣ ಪ್ರತಿಷ್ಠಾ ಸಮಾರಂಭದ ಮೊದಲು, ಏಕತೆಗೆ ಸಾಕ್ಷಿಯಾದ ಯುಕೆ ಘೋಷಣೆಯನ್ನು ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ ನೀಡಲಾಗುವುದು'' ಎಂದು ಹೇಳಿಕೆ ತಿಳಿಸಿದೆ.

ಏತನ್ಮಧ್ಯೆ, ಅಯೋಧ್ಯೆಯಲ್ಲಿ ಸಿದ್ಧತೆಗಳು ಭರದಿಂದ ಸಾಗಿವೆ. ಪ್ರಾಣ ಪ್ರತಿಷ್ಠೆಗೂ ಮುನ್ನ ಶುಕ್ರವಾರ ರಾಮ್ ಲಲ್ಲಾ ಮುಖದ ಮೊದಲ ನೋಟವನ್ನು ಹಂಚಿಕೊಳ್ಳಲಾಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ಫೋಟೋಗಳಲ್ಲಿ, ಐದು ವರ್ಷದ ಭಗವಾನ್ ರಾಮನು ಕೈಯಲ್ಲಿ ಚಿನ್ನದ ಬಿಲ್ಲು ಮತ್ತು ಬಾಣದೊಂದಿಗೆ ನಿಂತಿರುವುದನ್ನು ಕಾಣಬಹುದು.

## ಮೊದಲನೆ ಪುಟದಿಂದ...

ರಾಮ ಲಲ್ಲಾ ಪ್ರಾಣ-ಪ್ರತಿಷ್ಠಾ ಸಮಾರಂಭಕ್ಕಾಗಿ ವಾರದ ವೈದಿಕ ಆಚರಣೆಗಳು ಶುಕ್ರವಾರ ನಾಲ್ಕನೇ ದಿನಕ್ಕೆ ಕಾಲಿಟ್ಟಿದ್ದು, ನಂತರ 'ನವಗ್ರಹ' ಮತ್ತು 'ಹವನ' ಸ್ಥಾಪನೆಯ ನಂತರ ಪವಿತ್ರ ಅಗ್ನಿಯನ್ನು ಬೆಳಗಿಸಲಾಯಿತು. ವಿಧಿವಿಧಾನಗಳು ಮಂಗಳವಾರ ಆರಂಭಗೊಂಡಿದ್ದು, ಜನವರಿ 22 ರಂದು ಪ್ರಾಣ-ಪ್ರತಿಷ್ಠಾ ಸಮಾರಂಭದೊಂದಿಗೆ ಮುಕ್ತಾಯಗೊಳ್ಳಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ರಾಮ್ ಲಲ್ಲಾ ಅವರ ಪ್ರತಿಷ್ಠಾಪನೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಜನವರಿ 23 ರಿಂದ ಸಾರ್ವಜನಿಕರಿಗೆ 'ದರ್ಶನ'ಕ್ಕಾಗಿ ದೇವಾಲಯವು ತೆರೆದಿರುತ್ತದೆ.

### ದಾಖಲು

ಸೂಲಿಬೆಲೆ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ರಾಯಚೂರಿನ ಶಿರವಾದಲ್ಲಿ ನಡೆದ 'ನಮೋ ಭಾರತ' ಎಂಬ ಕಾರ್ಯಕ್ರಮದಲ್ಲಿ ಚಕ್ರವರ್ತಿ ಸೂಲಿಬೆಲೆ ಅವರು ಖರ್ಗೆ ಫ್ಯಾಮಿಲಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದರು. ಕಲಬುರಗಿಯ ESI ಆಸ್ಪತ್ರೆ ನಿರ್ಮಾಣದ ವಿಚಾರವಾಗಿ ಖರ್ಗೆ ಕುಟುಂಬದ ವಿರುದ್ಧ ಏಕವಚನದಲ್ಲಿಯೇ ವಾಗ್ದಾಳಿ ನಡೆಸಿದ್ದರು. ಖರ್ಗೆ ಸಾಹೇಬರ ಕಾಲದಲ್ಲಿ ಇಖಖ ಆಸ್ಪತ್ರೆ ನಿರ್ಮಾಣ ಮಾಡಲಾಯಿತು. ಆಸ್ಪತ್ರೆ ಮೇಲ್ಭಾಗದಲ್ಲಿ ಡ್ರೋನ್ ಕ್ಯಾಮರಾದಿಂದ ನೋಡಿದರೆ ಈ ಚಿತ್ರ ಕಾಣುತ್ತದೆ. ಮೊದಲ ಅಕ್ಷರ ಖ, ಎರಡನೇ ಅಕ್ಷರ ಗೆ, ಆ ಮೇಲೆ ಅರ್ಧ ಅಕ್ಷರ ಖರ್ಗೆ ಅಂತಾ. ಅವರು ಕಟ್ಟಿದ ಬಿಲ್ಡಿಂಗ್ ಮೇಲೆ ಖರ್ಗೆ ಅಂತಾ ಕಾಣಬೇಕು. ಕಟ್ಟಡ ಇರೋವರೆಗೆ ಅವರ ಹೆಸರು ಉಳಿಬೇಕು ಅಂತಾ ಈ ರೀತಿ ಮಾಡಲಾಗಿದೆ. ಇದು ಅವರ ಸ್ವಂತ ದುಡ್ಡಲ್ಲ, ಪಾರ್ಟಿ ದುಡ್ಡಲ್ಲ ಜನರ ತೆರಿಗೆ ದುಡ್ಡಲ್ಲಿ ತಮ್ಮ ಹೆಸರು ಶಾಶ್ವತಗೊಳಿಸುವಂತ ಅಯೋಗ್ಯರಿದ್ದಾರೆ ಎಂದು ಕಿಡಿಕಾರಿದ್ದರು. ಸದ್ಯ ಈ ಸಂಬಂದ ದೂರು ದಾಖಲಾಗಿದೆ.

**ಸೂಲಿಬೆಲೆ ಗಡಿಪಾರಿಗೆ ಕಾಂಗ್ರೆಸ್ ಆಗ್ರಹ:** ಮತ್ತೊಂದೆಡೆ ಚಕ್ರವರ್ತಿ ಸೂಲಿಬೆಲೆ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ ಎಂದು ಆರೋಪಿಸಿ ಕರ್ನಾಟಕ ಕಾಂಗ್ರೆಸ್ ಟ್ವೀಟ್ ಮಾಡಿ ಗಡಿಪಾರು ಮಾಡಲು ಆಗ್ರಹಿಸಿದೆ.

ಅಯೋಗ್ಯ ಎನ್ನುವ ಸಮಾಜದ ಕೊಳಕು ಕ್ರಿಮಿಯೊಂದು ಎಐಸಿಸಿ ಅಧ್ಯಕ್ಷರಾದ ಖರ್ಗೆ ಅವರ ಬಗ್ಗೆ ಹಗುರವಾಗಿ ಮಾತನಾಡಿರುವುದು ಖಂಡನೀಯ. ಬಾಡಿಗೆ ಭಾಷಣ ಮಾಡಿಕೊಂಡು ಬದುಕುವ ಪರಾವಲಂಬಿ ಜೀವಿಗಳಿಗೆ ಶೋಷಿತ ಸಮುದಾಯದ ನಾಯಕರೊಬ್ಬರು ಅತ್ಯುನ್ನತ ಸ್ಥಾನಕ್ಕೆ ಏರುವುದನ್ನು ಸಹಿಸಲು ಸಾಧ್ಯವಾಗುತ್ತಿಲ್ಲ ಎನ್ನುವುದು ಇದರಿಂದ ಸ್ಪಷ್ಟವಾಗುತ್ತದೆ. ಸುಳ್ಳುಗಳನ್ನು ಹಬ್ಬಿಸುತ್ತಾ ಸಮಾಜದ ಸ್ವಾಸ್ಥ್ಯ ಕೆಡಿಸುತ್ತಿರುವ ಇಂತಹ ಕ್ರಿಮಿಗಳನ್ನು ಗಡಿಪಾರು ಮಾಡಲು ಕ್ರಮ ಕೈಗೊಳ್ಳಬೇಕೆಂದು ಗೃಹಸಚಿವರಿಗೆ ಮನವಿ ಮಾಡುತ್ತೇವೆ ಎಂದು ಕಾಂಗ್ರೆಸ್ ಟ್ವೀಟ್ ಮಾಡಿದೆ.

### ಮಹೋತ್ಸವ ಆರಂಭ

**ಜಾತ್ರಾಮಹೋತ್ಸವ ವಿವರ:** ಜ.21ರಂದು ಶ್ರೀ ಲಕ್ಷ್ಮೀನಾರಾಯಣ ಹೃದಯ ಹೋಮ, ಶ್ರೀ ಧನ್ವಂತರಿ ಹೋಮ ಆಯೋಜಿಸಲಾಗಿದೆ.

ಜ.22ರಂದು ರುದ್ರಹೋಮ, ಸಂಜೆ 5 ಗಂಟೆಗೆ ಶ್ರೀ ಪರ್ವತ ಮಲ್ಲಿಕಾರ್ಜುನ ಸ್ವಾಮಿಗೆ ಬಿಲ್ವಾರ್ಚನೆ ನಡೆಯುತ್ತದೆ.

ಜ.23ರಂದು ಶ್ರೀ ದುರ್ಗಾ ಹೋಮ, ಶ್ರೀ ಸೂಕ್ತ ಹೋಮ, ಶ್ರೀ ಸಾರಸ್ವತ ಹೋಮ ನೆರವೇರುತ್ತದೆ.

ಜ.24ರಂದು ನವಚಂಡಿಕಾ ಹೋಮ, ಮೂಲ ದೇವರ ಸನ್ನಿಧಿಯಲ್ಲಿ ವಿಶೇಷ ಪಲ್ಯದ ಪೂಜೆ ನಡೆಯುತ್ತದೆ.

ಜ.25ರಂದು ಬನದ ಹುಣ್ಣಿಮೆ ಅಂಗವಾಗಿ ಬೆಳಗ್ಗೆ 11.50 ರಿಂದ 12.50ರವರೆಗೆ ರಥಾರೋಹಣ ಜರಗುತ್ತದೆ. ಅಂದು ಸಂಜೆ 6ಕ್ಕೆ ಶಾಕಾಂಬರಿ ದೇವಿಯವರಿಗೆ ಮುತ್ತಿನ ಪಲ್ಲಕ್ಕಿ ಉತ್ಸವ ನಡೆಯಲಿದ್ದು ಭಕ್ತಾದಿಗಳು ಪಾಲ್ಗೊಳ್ಳಲು ಆಡಳಿತ ಮಂಡಳಿಯಿಂದ ಮನವಿ ಮಾಡಿದೆ.

ಇನ್ನು ಇಂದು (ಶನಿವಾರ) ಬನಶಂಕರಿ ಅಮ್ಮನವರಿಗೆ ವಿಶೇಷ ಅಲಂಕಾರ ಮಾಡಲಾಗಿದೆ. ಅಮ್ಮನವರ ದರ್ಶನಕ್ಕೆ ಭಕ್ತಸಾಗರ ಹರಿದುಬರುತ್ತಿದೆ. ಇಂದು ಬೆಳ್ಗಗ್ಗೆ ಅಮ್ಮನವರಿಗೆ ಪಂಚಾಭಿಷೇಕ ಮಾಡಲಾಗಿದೆ.

## ಅಂಬಿಗರ ಚೌಡಯ್ಯ ಜಯಂತಿ

**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೋಲಾರ ಇವರ ಸಹಯೋಗದೊಂದಿಗೆ ನಡೆಯಲಿರುವ ಅಂಬಿಗರ ಚೌಡಯ್ಯ ಜಯಂತಿಯನ್ನು ಜನವರಿ 21 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಕೊತ್ತೂರು ಜಿ.ಮಂಜುನಾಥ್ ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರು ಮತ್ತು ಸನ್ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಸ್.ಮುನಿಸ್ವಾಮಿ, ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಎನ್ ನಾರಾಯಣಸ್ವಾಮಿ ಕೆ.ಎಂ, ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ವೈ.ನಂಜೇಗೌಡ, ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ರೂಪಕಲಾ ಎಂ.ಶಶಿಧರ್, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಮುಳಬಾಗಿಲು ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮೃದ್ಧಿ ಮಂಜುನಾಥ್, ವಿಧಾನ ಪರಿಷತ್ ಶಾಸಕರಾದ ಡಾ.ವೈ.ಎ ನಾರಾಯಣಸ್ವಾಮಿ, ಇಂಚರ ಗೋವಿಂದರಾಜು, ಚಿದಾನಂದ ಎಂ.ಗೌಡ, ಎಂ.ಎಲ್ ಅನಿಲ್ ಕುಮಾರ್, ಅವರು ಭಾಗವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಪಾಲನಾ ಸಂಸ್ಥೆಗಳ ನೋಂದಣಿ ಕಡ್ಡಾಯ

**ರಾಮನಗರ:** ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳು ಕಡ್ಡಾಯವಾಗಿ ಬಾಲನ್ಯಾಯ ಕಾಯ್ದೆ-2015ರ ಸೆಕ್ಷನ್ 41 ರಡಿಯಲ್ಲಿ ನೋಂದಣಿಯಾಗಬೇಕು ಹಾಗೂ ನೋಂದಣಿಯಾಗಿರುವ ಸಂಸ್ಥೆಗಳು ಪ್ರತಿ 5 ವರ್ಷಕ್ಕೊಮ್ಮೆ ನವೀಕರಣಗೊಳ್ಳಬೇಕಾಗಿರುತ್ತದೆ ಹಾಗೂ ಕೆಲವು ಸಂಸ್ಥೆಗಳು ನೊಂದಣಿಯಾಗದೆ 18 ವರ್ಷದೊಳಗಿನ ಅನಾಥ, ನಿರ್ಗತಿಕ, ಏಕಪೋಷಕ, ಪರಿತ್ಯಕ್ತ ಹಾಗೂ ಇನ್ನಿತರೆ ಸಮಸ್ಯೆಗಳಿಂದ ರಕ್ಷಣೆ- ಪೋಷಣೆಗೆ ಅವಶ್ಯಕತೆ ಇರುವ ಮಕ್ಕಳನ್ನು ಸಂಸ್ಥೆಗಳಲ್ಲಿ ದಾಖಲಿಸಿಕೊಂಡಿದ್ದು, ಅಂತಹ ಸಂಸ್ಥೆಗಳು ಬಾಲನ್ಯಾಯ ಕಾಯ್ದೆ-2015ರ ಸೆಕ್ಷನ್ 41 ರಡಿಯಲ್ಲಿ ನೊಂದಣಿಯಾಗಬೇಕಾಗಿರುವುದರಿಂದ ಜನವರಿ-2024ರ ಅಂತ್ಯದ ಒಳಗೆ ನೊಂದಣಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕು. ಒಂದು ವೇಳೆ ಇಂತಹ ಸಂಸ್ಥೆಗಳು ನೊಂದಣಿಗೆ ಪ್ರಸ್ತಾವನೆಯನ್ನು ಸಲ್ಲಿಸದಿದ್ದಲ್ಲಿ ನೋಂದಣಿಯಾಗದ ಸಂಸ್ಥೆಗಳ ವಿರುದ್ಧ ಸೆಕ್ಷನ್ (42) ರಂತೆ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಆದ್ದರಿಂದ ಇಂತಹ ಸಂಸ್ಥೆಗಳು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೊಠಡಿ ಸಂಖ್ಯೆ-307, 2ನೇ ಮಹಡಿ, ಜಿಲ್ಲಾಡಳಿತ ಭವನ, ಬಿ.ಎಂ ರೋಡ್, ರಾಮನಗರ, ದೂ. ಸಂಖ್ಯೆ:- 080-29655500 ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 25 ರಂದು ರಾಜ್ಯ ಮಟ್ಟದ ಜನಪದ ಗೀತ ಗಾಯನ ಸ್ಪರ್ಧೆ

**ರಾಮನಗರ:** ಕರ್ನಾಟಕ ಜಾನಪದ ಪರಿಷತ್ತು, ಬೆಂಗಳೂರು ಜಾನಪದ ಸಿರಿ ಭುವನ ಹಾಗೂ ಜಾನಪದ ಲೋಕದ ವತಿಯಿಂದ ರಾಮನಗರ ಜಾನಪದ ಲೋಕದಲ್ಲಿ ರಾಜ್ಯ ಮಟ್ಟದ ಜನಪದ ಗೀತ ಗಾಯನ ಸ್ಪರ್ಧೆ-2024 ಕಾರ್ಯಕ್ರಮವನ್ನು ಜ. 25ರ ಗುರುವಾರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಗೀತಗಾಯನ ಸ್ಪರ್ಧೆಯಲ್ಲಿ ವಿಜೇತರಾದವರಿಗೆ : ಪ್ರಥಮ ಬಹುಮಾನ ರೂ. 5000, ದ್ವಿತೀಯ ಬಹುಮಾನ :ರೂ 3000, ತೃತಿಯ ಬಹುಮಾನ :ರೂ 2000, ಎರಡು ಸಮಾಧಾನಕರ ತಲಾ : ರೂ 1000 ನಗದು ಬಹುಮಾನಗಳಿರುತ್ತದೆ. ಆಸಕ್ತರು ಜ. 25ರಂದು ಬೆಳಿಗ್ಗೆ 9 ಗಂಟೆಯೊಳಗೆ ಜಾನಪದ ಲೋಕದಲ್ಲಿ ಹೆಸರು ನೊಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ಜಾನಪದ ಸಿರಿಭುವನ (ಕೇಂದ್ರ ಕಚೇರಿ) ಬೆಂಗಳೂರು, ದೂ. ಸಂಖ್ಯೆ: 080-23605033, 7795632294, 7975661363, 8197037299 ಅನ್ನು ಸಂಪರ್ಕಿಸಬಹುದಾಗಿದೆ.

## ವಿದ್ಯುತ್ ವ್ಯತ್ಯಯ

**ರಾಮನಗರ:** 66 ಕೆ.ವಿ ಸೋಮನಹಳ್ಳಿ-ಟಿ.ಕೆ. ಹಳ್ಳಿ ಲೈನ್-2 ಹಾಗೂ 66/11ಕೆವಿ ರಂಗನದೊಡ್ಡಿ ಉಪವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕಾ ನಿರ್ವಹಣಾ ಕಾಮಗಾರಿ ಕೈಗೊಂಡಿರುವ ಕಾರಣ ಇದೇ ಜ. 21ರ ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ ಫೇಸ್-1 ಮತ್ತು ಫೇಸ್-2 ಹಾಗೂ ಕೊಳ್ಳಿಗನಹಳ್ಳಿ ಮತ್ತು ಹಾರೋಹಳ್ಳಿ ಪಟ್ಟಣ ಪಂಚಾಯಿತಿ, ಟಿ. ಬನ್ನಿಕುಪ್ಪೆ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಂಗಳೂರು ವಿದ್ಯುತ್ ಕಂಪನಿಯ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಹಕರ ಕುಂದು ಕೊರತೆ ಸಭೆ

**ರಾಮನಗರ:** ಬೆಸ್ಕಾಂ ವತಿಯಿಂದ ಜ. 20ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಕುಂದು ಕೊರತೆ ಸಭೆಯನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಕಚೇರಿಯಲ್ಲಿ ಏರ್ಪಡಿಸಲಾಗಿದೆ. ರಾಮನಗರ ನಗರ ಗ್ರಾಹಕರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಂದಾರಗುಪ್ಪೆಗೆ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ್ ಭೇಟಿ

**ಚನ್ನಪಟ್ಟಣ:** ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ್ ಶುಕ್ರವಾರ ತಾಲೂಕಿನ ವಂದಾರಗುಪ್ಪೆ ಬಳಿಯ ಬಾಲಮಂದಿರ, ಸಾತನೂರು ರಸ್ತೆಯಲ್ಲಿರುವ ಕ್ರಾಫ್ಟ್ ಪಾರ್ಕ್, ಹೊಡಿಕೆಹೊಸಹಳ್ಳಿಯ ಚಾಕಿ ಸೆಂಟರ್ ಗೆ ಭೇಟಿ ನೀಡಿದರು.



ಶುಕ್ರವಾರ ಬೆಳಗ್ಗೆ ತಾಲೂಕಿನ ವಂದಾರಗುಪ್ಪೆ ಬಳಿ ಇರುವ ಸರ್ಕಾರಿ ಬಾಲ ಮಂದಿರಕ್ಕೆ ಭೇಟಿ ನೀಡಿದ ಅವರು, ಬಾಲಮಂದಿರದಲ್ಲಿ ಕಲ್ಪಿಸಿರುವ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿದರು. ಬಾಲಮಂದಿರದಲ್ಲಿನ ಅಡುಗೆ ಕೋಣೆ, ಶೌಚಾಯಲ, ರೂಮ್‌ಗಳನ್ನು ಪರಿಶೀಲಿಸಿದ ಅವರು ಬಾಲಮಂದಿರದಲ್ಲಿರುವ ಮಕ್ಕಳಿಂದ ಅಲ್ಲಿ ಕಲ್ಪಿಸುತ್ತಿರುವ ಊಟ, ಮತ್ತಿತರ ವ್ಯವಸ್ಥೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಕ್ರಾಫ್ಟ್ ಪಾರ್ಕ್‌ಗೆ ಭೇಟಿ: ನಗರದ ಸಾತನೂರು ರಸ್ತೆಯಲ್ಲಿರುವ ಕ್ರಾಫ್ಟ್ ಪಾರ್ಕ್‌ಗೆ ಭೇಟಿ ನೀಡಿದ ಅವರು ಅಲ್ಲಿನ ಅಲ್ಲಿ ತಯಾರಿಸುವ ಬೊಂಬೆಗಳನ್ನು ವೀಕ್ಷಿಸಿದರು. ಇದೇ ವೇಳೆ ಅಲ್ಲಿನ ಕುಶಲಕರ್ಮಿಗಳೊಂದಿಗೆ ಮಾತಕತೆ ನಡೆಸಿ, ಮಾಹಿತಿ ಪಡೆದುಕೊಂಡರು.

ತಾಲೂಕಿನ ಹೊಡಿಕೆಹೊಸಹಳ್ಳಿಯ ರೇಷ್ಮೆ ಚಾಕಿ ಸೆಂಟರ್ ಗೆ ಭೇಟಿ ನೀಡಿದ ಅವರು, ರೇಷ್ಮೆ ಬೆಳೆಗಾರರು ಅನುಭವಿಸುತ್ತಿರುವ ಸಮಸ್ಯೆಗಳು ಕುರಿತು ಚರ್ಚಿಸಿದರು. ಇದೇ ವೇಳೆ ಅವರು ಶ್ರೀ ಕೆಂಗಲ್ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದುಕೊಂಡರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ತಾಲೂಕು ಅಧ್ಯಕ್ಷ ಕೆ.ಟಿ.ಜಯರಾಮು, ನಗರ ಘಟಕದ ಅಧ್ಯಕ್ಷ ಶಿವು, ಮಾಜಿ ಜಿಲ್ಲಾಧ್ಯಕ್ಷ ಹುಲುವಾಡಿ ದೇವರಾಜು, ಮುಖಂಡರಾದ ಎಲೇಕೇರಿ ರವೀಶ್, ಕುಳ್ಳಪ್ಪ ಉಪಸ್ಥಿತರಿದ್ದರು

## ಪ್ರವಾಸಿ ಟ್ಯಾಕ್ಸಿ ಯೋಜನೆಯಡಿ ಅರ್ಜಿ

**ಮಂಡ್ಯ:** ಪ್ರವಾಸೋದ್ಯಮ ಇಲಾಖೆಯಲ್ಲಿ ಬಾಕಿ ಉಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ಪ್ರವಾಸಿ ಟ್ಯಾಕ್ಸಿಯೋಜನೆಯಡಿ 2013-14 ರಿಂದ 2019-20 ನೇ ಸಾಲಿನವರೆಗೆ ಬಾಕಿ ಉಳಿದಿರುವ 32 ಬ್ಯಾಕ್ ಲಾಗ್ ಪ್ರವಾಸಿ ಟ್ಯಾಕ್ಸಿ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಜನವರಿ 22 ರಿಂದ ವಿತರಣೆ ಮಾಡಲಿದ್ದು ಅರ್ಜಿ ಸಲ್ಲಿಸಲು ಫೆಬ್ರವರಿ 21 ರಂದು ಕೊನೆಯ ದಿನಾಂಕವಾಗಿರುತ್ತದೆ. ಅರ್ಜಿದಾರರು ಪರಿಶಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು, 20 ರಿಂದ 40 ವರ್ಷದೊಳಗಿರಬೇಕು, 10 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು, ಲಘು ವಾಹನ ಚಾಲನಾ ಪರವಾನಗಿ ಪಡೆದು ಕನಿಷ್ಟ ಒಂದು ವರ್ಷವಾಗಿರಬೇಕು, ವಾಹನ ಚಾಲನಾ ಪರವಾನಗಿ ಬ್ಯಾಡ್ಜ್ ಹೊಂದಿರಬೇಕು, ಯಾವ ಜಿಲ್ಲೆ ನಿವಾಸಿಯಾಗಿರುತ್ತಾರೋ ಅದೇ ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಬೇಕು, ಲಘು ವಾಹನ ಚಾಲನಾ ಪರವಾನಗಿ(ಬ್ಯಾಡ್ಜ್) ಹೊಂದಿರುವ ವಿದ್ಯಾವಂತ ನಿರುದ್ಯೋಗಿ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ . ಮಹಿಳೆಯರಿಗೆ ಶೇ.10 ಮೀಸಲಾತಿಯಿರುತ್ತದೆ. 08232-238377 ಸಂಪರ್ಕಿಸಬಹುದು.

## ಇಂದು ಬೆವಿಕಂ ಗ್ರಾಹಕರ ಸಂವಾದ ಸಭೆ

**ಕೋಲಾರ:** ಬೇತಮಂಗಲ ಬೆವಿಕಂ ಉಪ-ವಿಭಾಗದ ಕಛೇರಿಯಲ್ಲಿ ಜನವರಿ 20 ರಂದು ಮಧ್ಯಾಹ್ನ 3.00 ರಿಂದ 5.30 ಗಂಟೆಯವರೆಗೆ ಬೆವಿಕಂ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಂಡಿದ್ದು, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಲು ಬೇತಮಂಗಲ ಬೆವಿಕಂ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ತಿಳಿಸಿದ್ದಾರೆ.

### ವೀರ ಸನ್ಯಾಸಿಯ ಆದರ್ಶ ಅನುಸರಿಸಲು ಕರೆ

# ಸ್ವಾಮಿ ವಿವೇಕಾನಂದ ಜಯಂತಿ

**ರಾಮನಗರ:** ವಿವೇಕಾನಂದರು ಯುವ ಜನರಿಗೆ ಮಾದರಿಯಾಗಿದ್ದು, ಎಲ್ಲರೂ ಅವರ ಸಿದ್ಧಾಂತಗಳನ್ನು ಪಾಲಿಸಬೇಕು. ಜೀವನದಲ್ಲಿ ಗುರಿ ಮುಖ್ಯ. ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ಗುರಿ ಸಾಧಿಸುವತ್ತ ಗಮನಹರಿಸಬೇಕು ಎಂದು ಪೊಲೀಸ್ ಉಪ ಅಧೀಕ್ಷಕರಾದ ದಿನಕರ ಶೆಟ್ಟಿ ಅವರು ತಿಳಿಸಿದರು.



ನಗರದ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ 161ನೇ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರ ತತ್ವ ಮತ್ತು ಆದರ್ಶಗಳು ಸದಾ ಪ್ರಸ್ತುತವಾಗಿದ್ದು, ಯುವಜನರು ಅರ್ಥೈಸಿಕೊಂಡು ಪಾಲಿಸಿದಾಗ ದೇಶ ಅಭಿವೃದ್ಧಿ ಪಥದಲ್ಲಿ ಸಾಗಲಿದೆ. ವಿವೇಕಾನಂದರ ಚಿಂತನೆಗಳು ಸಾರ್ವಕಾಲಿಕ ಮೌಲ್ಯಗಳನ್ನು ಹೊಂದಿವೆ. ವಿವೇಕಾನಂದರ ಅಧ್ಯಾತ್ಮ, ನಿಷ್ಠೆ, ದೇಶಭಕ್ತಿ ಹಾಗೂ ಮಾನವೀಯತೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಂಸ್ಕೃತ ವಿದ್ವಾನ್ ಚಂದ್ರಶೇಖರಯ್ಯ ಮಾತನಾಡಿ, ಸಂವಿಧಾನದ ಮೌಲ್ಯಗಳನ್ನು ವಿವೇಕಾನಂದರ ಚಿಂತನೆಯಲ್ಲಿ ಕಾಣಬಹುದಾಗಿದೆ. ವಿವೇಕಾನಂದ, ಗಾಂಧೀಜಿ ಮತ್ತು ಅಂಬೇಡ್ಕರ್ ಅವರು ಆಧುನಿಕ ಭಾರತದ ಚಿಂತನೆಯ ಪ್ರತಿಪಾದಕರಾಗಿದ್ದರು. ಧರ್ಮವು ದೇಹ ಹಾಗೂ ಆತ್ಮದಂತೆ ಸಮ್ಮಿಲನಗೊಂಡಿದ್ದು ಎಲ್ಲರೂ ಒಗ್ಗೂಡಿ ಬದುಕಬೇಕು ಎಂಬುದು ವಿವೇಕಾನಂದರ ಆಶಯವಾಗಿತ್ತು ಎಂದರು.

ವಿವೇಕಾನಂದರು ಅಸಮಾನತೆ, ಸಾಮಾಜಿಕ ಮೌಢ್ಯಗಳ ವಿರುದ್ಧ ಧ್ವನಿ ಎತ್ತಿದರು. ಜಾತಿ ವ್ಯವಸ್ಥೆಯಲ್ಲಿ ಹುಳುಕುಗಳ ವಿರುದ್ಧ ಅವರ ವಿವೇಕ ವಿವೇಚನಾ ಉಪನ್ಯಾಸಗಳು ಇಂದಿಗೂ ಮೌಢ್ಯ ನಿರ್ಮೂಲನೆಗೆ ಸಹಕಾರಿಯಾಗಿವೆ ಎಂದು ತಿಳಿಸಿದರು.

ಸ್ವಾಮಿ ವಿವೇಕಾನಂದರು ಭಾರತದ ಧಾರ್ಮಿಕತೆಯ ಅಸ್ಮಿತೆಯ ಪ್ರತೀಕ. ಕಡಿಮೆ ವಯಸ್ಸಿನಲ್ಲಿಯೇ ಜಗ ಮೆಚ್ಚುವ ಸಾಧನೆ ಮಾಡಿ ಪ್ರಪಂಚದಲ್ಲಿಯೇ ಗುರುತಿಸಿಕೊಂಡಿದ್ದಾರೆ. ರಾಮಕೃಷ್ಣ ಪರಮಹಂಸರ ಶಿಷ್ಯರಾಗಿ ಬೆಳೆದ ಪರಿ ಗುರುಶಿಷ್ಯ ಪರಂಪರೆಗೆ ಆದರ್ಶವಾಗಿದೆ ಎಂದು ತಿಳಿಸಿದರು.

ಹಿರಿಯ ಜನಪದ ಗಾಯಕ ಆಲೂರು ನಾಗಪ್ಪ ಮಾತನಾಡಿ, ದೇಶ ಕಟ್ಟಲು ಜೀವನ ಮುಡಿಪಾಗಿಟ್ಟ ಆದರ್ಶ ವ್ಯಕ್ತಿ ವಿವೇಕಾನಂದರ ವಿಚಾರಧಾರೆ ಸಮೃದ್ಧ, ಸದೃಢ ರಾಷ್ಟ್ರ ನಿರ್ಮಾಣಕ್ಕೆ ಸಹಕಾರಿಯಾಗಿದೆ ಎಂದರು.

ಯುವ ಶಕ್ತಿ ಸಮೃದ್ಧ ಭವಿಷ್ಯದ ಸಂಕೇತವಾಗಿದ್ದು ಯುವ ಸಂಪತ್ತು ಸನ್ಮಾರ್ಗದಲ್ಲಿ ಸಾಗುವಂತೆ ನೋಡಿಕೊಳ್ಳಬೇಕಾದ ಜವಾಬ್ದಾರಿ ನಮ್ಮೆಲ್ಲರದ್ದು. ಯುವಜನರನ್ನು ದೇಶದ ಆಸ್ತಿಯನ್ನಾಗಿಸಬೇಕು. ಸ್ವಾರ್ಥ ಮನೋಭಾವ ಬಿಟ್ಟು ನಿಸ್ವಾರ್ಥದಿಂದ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಎಸ್. ಗಂಗಾಧರ್ ಮಾತನಾಡಿ, ಸ್ವಾಮಿ ವಿವೇಕಾನಂದರ ತ್ಯಾಗ ಮತ್ತು ಸಾಧನೆ ಯುವಕರಿಗೆ ಆದರ್ಶವಾಗಿದ್ದು, ಇಂದಿನ ಯುವ ಶಕ್ತಿ ಸಂಶೋಧನೆಯತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ತಿಳಿಸಿದರು.

ದೇಶದ ಅಭಿವೃದ್ಧಿಯಲ್ಲಿ ಯುವ ಜನತೆಯ ಪಾತ್ರ ಮುಖ್ಯವಾಗಿದ್ದು, ಸ್ವಯಂ ಪ್ರೇರಣೆಯಿಂದ ದೇಶದ ಪ್ರಗತಿಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಎಚ್.ವಿ. ಶೇಷಾದ್ರಿ ಅಯ್ಯರ್, ಉಪಸಭಾಪತಿ ವಿ. ಬಾಲಕೃಷ್ಣ, ಖಜಾಂಚಿ ಎಂ. ಪರಮಶಿವಯ್ಯ, ಕಾರ್ಯದರ್ಶಿ ಎಸ್. ರುದ್ರೇಶ್ವರ, ಕಾರ್ಯಕಾರಿ ಸಮಿತಿ ಸದಸ್ಯರಾದ ವಿ. ನರೇಂದ್ರ, ಸಿಖ್ ಬತ್ ಉಲ್ಲಾ ಖಾನ್, ರಾಮಕೃಷ್ಣನ್, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನ ಉಪನ್ಯಾಸಕರಾದ ಬಿ. ಶಿವಮ್ಮ, ಸುಜಾತಾ ರತ್ನಾಕರ, ಎ.ಆರ್. ತ್ರಿವೇಣಿ ಇತರರು ಇದ್ದರು.

# ಮಾ.9ಕ್ಕೆ ಜನತಾ ನ್ಯಾಯಾಲಯ

**ಕೋಲಾರ:** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಇವರ ನಿರ್ದೇನದಂತೆ ಕೋಲಾರ ಜಿಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಬಂಗಾರಪೇಟೆ, ಶ್ರೀನಿವಾಸಪುರ, ಮಾಲೂರು, ಮುಳಬಾಗಿಲು ಮತ್ತು ಕೆ.ಜಿ.ಎಫ್ ತಾಲ್ಲೂಕು ನ್ಯಾಯಾಲಯಗಳಲ್ಲಿ ದಿನಾಂಕ:09-03-2024 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ರಾಷ್ಟ್ರೀಯ ಜನತಾ ನ್ಯಾಯಾಲಯ ಹಮ್ಮಿಕೊಳ್ಳಲಾಗುತ್ತಿದೆ. ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಅವಕಾಶವಿರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಜಿ.ಎ. ಮಂಜುನಾಥ ಅವರು ತಿಳಿಸಿದರು.

ತಮ್ಮ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಉಭಯ ಪಕ್ಷಗಾರರು ಹಾಗೂ ಅವರ ವಕೀಲರು ಪೂರ್ವ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ಪ್ರಕರಣಗಳನ್ನು ಸಂಧಾನ ಮೂಲಕ ಬಗೆಹರಿಸಿಕೊಳ್ಳುವ ಅವಕಾಶವಿರುತ್ತದೆ. ಪರ್ಯಾಯ ನ್ಯಾಯ ವಿತರಣೆ ಜನ ಮನ್ನಣೆ ಪಡೆದುಕೊಂಡಿದ್ದು, ಅದರಲ್ಲಿ ಉಭಯ ಪಕ್ಷಗಾರರು ತಮ್ಮ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಲು ಮುಕ್ತ ಅವಕಾಶವಿರುತ್ತದೆ. ಸದರಿ ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಇಚ್ಚಿಸುವ ಪಕ್ಷಗಾರರು ಮುಂಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಹೇಳಿದರು. ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ, ಪ್ರಕರಣ ರಾಜಿ ಮಾಡಿಕೊಳ್ಳುವ ಕುರಿತು ತಿಳಿಸುವ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣವನ್ನು ಇತ್ಯರ್ಥ ಮಾಡಿಕೊಳ್ಳಬಹುದು ಎಂದರು. ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಿವಿಲ್ ಪ್ರಕರಣಗಳು, ರಾಜಿಯಾಗುವ ಕ್ರಿಮಿನಲ್ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವೈವಾಹಿಕ-ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇದನೆಯನ್ನು ಹೊರತುಪಡಿಸಿ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧಿಕರಣದ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು, ರಾಜಿಯಾಗಬಲ್ಲ ಸಿವಿಲ್ ಪ್ರಕರಣಗಳು ಮತ್ತು ಜೀವನಾಂಶ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳುವ ಅವಕಾಶವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯಗಳಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ ಎಂದು ಹೇಳಿದರು.ಈ ಹಿಂದೆ ಜನತಾ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿದ್ದ ಒಟ್ಟು 7068 ಪ್ರಕರಣಗಳು ಹಾಗೂ 6454 ವ್ಯಾಜ್ಯ ಪೂರ್ವ ಬ್ಯಾಂಕ್ ಪ್ರಕರಣಗಳು ಸೇರಿ ಒಟ್ಟು 13522 ಪ್ರಕರಣಗಳು ರಾಜಿ ಮೂಲಕ ಮುಕ್ತಾಯಗೊಂಡಿರುತ್ತವೆ. ಈ ಜನತಾ ನ್ಯಾಯಾಲಯದಲ್ಲಿ ಒಟ್ಟು ರೂ.29,58,49,742-00 ಪರಿಹಾರದ ಹಣ ರಾಜಿ ಮೂಲಕ ಪಾವತಿಯಾಗಿರುತ್ತದೆ ಎಂದು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಸುನಿಲ ಎಸ್ ಹೊಸಮನಿ ಅವರು ಉಪಸ್ಥಿತರಿದ್ದರು.

# ಜನಸಂದಣಿ ಸ್ಥಳಗಳಲ್ಲಿ ಕೊಟ್ಪಾ ಕಾಯ್ದೆಯ ಬಗ್ಗೆ ಅರಿವು ಮೂಡಿಸಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿರುವ ಬಸ್ ನಿಲ್ದಾಣಗಳು,ಕೈಗಾರಿಕೆಗಳು, ಕಟ್ಟಡ ನಿರ್ಮಾಣ ಸ್ಥಳಗಳು, ಕಲ್ಲು ಕ್ವಾರಿ, ಗಣಿಗಾರಿಕೆ ಸ್ಥಳಗಳು ಸೇರಿದಂತೆ ಜನಸಂದಣಿ ಪ್ರದೇಶಗಳಲ್ಲಿನ ಶ್ರಮಿಕ ವರ್ಗದವರಿಗೆ ತಂಬಾಕು ಉತ್ಪನ್ನಗಳ ಬಳಕೆಯ ದುಷ್ಪರಿಣಾಮಗಳ ಕುರಿತು ತಿಳಿಸಿಕೊಡಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ|| ಎನ್.ತಿಪ್ಪೇಸ್ವಾಮಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ತಂಬಾಕು ನಿಯಂತ್ರಣ ಕಾರ್ಯಕ್ರಮ ಕಾಯ್ದೆಯ ತ್ರೈಮಾಸಿಕ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೊಟ್ಪಾ ಕಾಯ್ದೆಯನ್ನು ಯಶಸ್ವಿಯಾಗಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುವ ಸಂಬಂಧ ಎಲ್ಲಾ ಇಲಾಖೆಗಳು ಸಾಂಘಿಕವಾಗಿ ಕಾರ್ಯ ಪ್ರವೃತ್ತರಾಗಬೇಕು.ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ತಹಸೀಲ್ದಾರ್ ರವರ ನೇತೃತ್ವದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಯಬೇಕು. ಕೊಟ್ಪಾ ಕಾಯ್ದೆ ಸೆಕ್ಷನ್ 6ಬಿ, 7, 8 9 ರಡಿ ಪ್ರಕರಣ ದಾಖಲಿಸಲು ಹೆಚ್ಚೆಚ್ಚು ದಾಳಿಗಳನ್ನು ಮಾಡಿ ದಂಡ ವಸೂಲಿ ಮಾಡಬೇಕು. ಕಾಲೇಜುಗಳಲ್ಲಿ, ಬಸ್ ನಿಲ್ದಾಣಗಳು, ಕಾರ್ಮಿಕರು ಸೇರುವ ಸ್ಥಳಗಳು, ಮಾರುಕಟ್ಟೆಗಳು ಇನ್ನಿತರ ಜನಸಂದಣಿ ಸ್ಥಳಗಳಲ್ಲಿ ಹೆಚ್ಚು ಐ.ಇ.ಸಿ ಕಾರ್ಯಕ್ರಮಗಳನ್ನು ಏರ್ಪಡಿಸಿ ಅರಿವು ಮೂಡಿಸಬೇಕು. ಕಾರ್ಮಿಕ ಇಲಾಖೆ, ಅಬಕಾರಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸ್ಥಳೀಯಾಡಳಿತ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಬೇಕು. ಆ ಮೂಲಕ ಜಿಲ್ಲೆಯನ್ನು ತಂಬಾಕು ಮುಕ್ತವಾಗಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ಸೂಚನೆಗಳನ್ನು ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್.ಮಹೇಶ್ ರವರು ಮಾತನಾಡಿ 2023ರ ಏಪ್ರಿಲ್ ಮಾಹೆಯಿಂದ ಡಿಸೆಂಬರ್ ವರೆಗೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜಿಲ್ಲೆಯಲ್ಲಿ 56 ದಾಳಿಗಳನ್ನು ನಡೆಸಿ 1053 ಪ್ರಕರಣಗಳನ್ನು ದಾಖಲು ಮಾಡಿ 73,380 ರೂಗಳ ದಂಡವನ್ನು ವಸೂಲಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಈ ನಿಟ್ಟಿನಲ್ಲಿ ಹೆಚ್ಚಿನ ದಾಳಿಗಳನ್ನು ನಡೆಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್.ಮಹೇಶ್ ಕುಮಾರ್, ಸಹಾಯಕ ಪೊಲೀಸ್ ವರಿಷ್ಠಾಧಿಕಾರಿ ರಾಜಾ ಇಮಾಮ್ ಖಾತಿಮ್,ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.ಈ ಸಂದರ್ಭದಲ್ಲಿ ತಂಬಾಕು ಉತ್ಪನ್ನ ನಿಯಂತ್ರಣಕುರಿತ ಜಾಗೃತಿ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಮಹಾಯೋಗಿ ಶ್ರೀ ವೇಮನ ಜಯಂತಿ ಕಾರ್ಯಕ್ರಮವು ಇಂದು ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿತ್ತು. ರೆಡ್ಡಿ ಸಮುದಾಯದ ಅಧ್ಯಕ್ಷ ರಾಘವೇಂದ್ರ ರೆಡ್ಡಿ, ಮುಳಬಾಗಿಲು ತಾಲ್ಲೂಕು ಬೆಳಪನಹಳ್ಳಿಯ ಸುಬ್ಬಾರೆಡ್ಡಿ ಇವರಿಂದ ಉಪನ್ಯಾಸ ಜರುಗಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಗೀತಾ ಉಪಸ್ಥಿತರಿದ್ದರು.

## ಪರೀಕ್ಷಾ ಕೇಂದ್ರದ ಸುತ್ತಾ ನಿಷೇಧ

**ಮಂಡ್ಯ:** ಕರ್ನಾಟಕ ಲೋಕಸೇವಾ ಆಯೋಗವು ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿನ ವಾಣಿಜ್ಯ ತೆರಿಗೆ ಪರಿವೀಕ್ಷಕರ ಹುದ್ದೆಗಳ ನೇಮಕಾತಿಗೆ ಕನ್ನಡ ಭಾಷೆ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯು ಜನವರಿ 20 ಮತ್ತು 21 ರಂದು ಜಿಲ್ಲೆಯ ವ್ಯಾಪ್ತಿಯ 8 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಪರೀಕ್ಷೆ ನಡೆಯುವ ದಿನದಂದು ಜಿಲ್ಲಾ ವ್ಯಾಪ್ತಿಯ 8 ಪರೀಕ್ಷಾ ಕೇಂದ್ರಗಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶಿಸಿದ್ದಾರೆ.

## ಇಂದು ಮನೆ ಅಂಗಳದಲ್ಲಿ ಮಾತುಕತೆ ಕಾರ್ಯಕ್ರಮ

**ಕೋಲಾರ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಬೆಂಗಳೂರಿನ ಕನ್ನಡ ಭವನದ ನಯನ ಸಭಾಂಗಣದಲ್ಲಿ ಜನವರಿ 20 ರಂದು ಶನಿವಾರ ಸಂಜೆ 4.00 ಗಂಟೆಗೆ ಮನೆ ಅಂಗಳದಲ್ಲಿ ಮಾತುಕತೆ ಕಾರ್ಯಕ್ರಮ ಆಯೋಜಿಸಿದೆ. ಈ ಕಾರ್ಯಕ್ರಮಕ್ಕೆ ಅತಿಥಿಯಾಗಿ ಜಾನಪದ ಅಕಾಡೆಮಿಯ ಮಾಜಿ ಅಧ್ಯಕ್ಷರಾದ ಪಿಚ್ಚಳ್ಳಿ ಶ್ರೀನಿವಾಸ್ ಅವರು ಭಾಗವಹಿಸಲಿದ್ದು, ಅವರೊಂದಿಗೆ ಹಾಡು, ಹರಟೆ, ಮಾತುಕತೆ, ಚರ್ಚೆ, ಸಂವಾದ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ದಲಿತ ಸಂಘಟನೆಗಳ ಒಕ್ಕೂಟ ಆಗ್ರಹ

# ಕೊತ್ತೂರು ಮಂಜುನಾಥ್ ಶಾಸಕ ಸ್ಥಾನ ರದ್ದು ಮಾಡಿ

ಕೋಲಾರ: 2013ರ ವಿಧಾನಸಭಾ ಚುನವಣೆಯಲ್ಲಿ ಸುಳ್ಳು ಜಾತಿ ಪ್ರಮಾಣಪತ್ರ ಸಲ್ಲಿಸಿ ಸ್ಪರ್ಧಿಸಿದ್ದ ಮುಳಬಾಗಿಲು ಎಸ್ಸಿ ಮೀಸಲು ಕ್ಷೇತ್ರದ ಮಾಜಿ ಶಾಸಕ ಜಿ ಮಂಜುನಾಥ್ (ಕೊತ್ತೂರು ಮಂಜುನಾಥ್) ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಆದೇಶ ನೀಡಿರುವುದುಶೋಷಿತ ಸಮುದಾಯಗಳ ಹೋರಾಟಕ್ಕೆ ಸಂದ ಗೌರವವಾಗಿದೆ. ಹೈಕೋರ್ಟ್ ಆದೇಶದ ಪ್ರಕಾರ ಸರ್ಕಾರ ತಕ್ಷಣ ಕೊತ್ತೂರು ಮಂಜುನಾಥ್ ಶಾಸಕ ಸ್ಥಾನ ರದ್ದು ಪಡಿಸಬೇಕೆಂದು ಕೋಲಾರ ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟದಿಂದ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.



ನಗರದ ಮೆಕ್ಕೆ ವೃತ್ತದಲ್ಲಿ ಹೈಕೋರ್ಟ್ ಆದೇಶಕ್ಕೆ ಸಂತಸ ವ್ಯಕ್ತಪಡಿಸಿ, ಶೋಷಿತ ಸಮುದಾಯಗಳ ಹೋರಾಟಕ್ಕೆ ಜಯ ಲಭಿಸಿದೆ ಎಂದು ಮಾನವ ಸರಪಳಿ ರಚಿಸಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ನಂತರ ಹಿರಿಯ ದಲಿತ ಮುಖಂಡ ದಲಿತ್ ನಾರಾಯಣ ಸ್ವಾಮಿ ಮಾತನಾಡಿ ಕೊತ್ತೂರು ಮಂಜುನಾಥ್ ಸುಳ್ಳು ಜಾತಿ ಪ್ರಮಾಣಪತ್ರ ಸಲ್ಲಿಸಿ, ಸ್ಪರ್ಧಿಸಿ ಗೆಲುವು ಸಾಧಿಸಿದ್ದು, ಪರಿಶಿಷ್ಟ ಜಾತಿಗಳಿಗೆ ವಂಚಿಸಿದ್ದಾರೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಮಂಜುನಾಥ್ ಅವರು ಬುಡಗ ಜಂಗಮ (ಎಸ್ಸಿ) ಸಮುದಾಯಕ್ಕೆ ಸೇರಿದವರಲ್ಲ. ಅವರು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಭೈರಾಗಿ ಜಾತಿಗೆ ಸೇರಿದವರು ಎಂದು ಜಿಲ್ಲಾ ಜಾತಿ ಪರಿಶೀಲನಾ ಸಮಿತಿ ವರದಿ ನೀಡಿದೆ. ಆ ವರದಿಯ ವಿರುದ್ಧ ಮಂಜುನಾಥ್ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿರುವ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠ, ''ಮಂಜುನಾಥ್ ಅವರು ಪರಿಶಿಷ್ಟ ಜಾತಿಗೆ ಮೀಸಲಿಟ್ಟಿದ್ದ ಕ್ಷೇತ್ರವನ್ನು ಸುಳ್ಳು ಜಾತಿ ಪ್ರಮಾಣಪತ್ರ ನೀಡಿದ್ದಾರೆ. ಇದು ಸಂವಿಧಾನಕ್ಕೆ ಎಸಗಿದ ಮೋಸವಾಗಿದೆ'' ಎಂದು ಹೇಳಿದೆ. ''ಮಂಜುನಾಥ್ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು. ಯಾವ ಕ್ರಮ ಕೈಗೊಳ್ಳಬೇಕು ಎಂಬುದು ಸರ್ಕಾರದ ವಿವೇಚನೆಗೆ ಬಿಟ್ಟಿದ್ದು. ಜಿಲ್ಲಾ ಜಾತಿ ಪರಿಶೀಲನಾ ಸಮಿತಿಯ ವರದಿಯಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯವಿಲ್ಲ'' ಎಂದು ಪೀಠವು ಹೇಳಿದೆ. ಈ ಹಿನ್ನೆಲೆಯಲ್ಲಿ ಶಾಸಕ ಕೊತ್ತೂರು ಮಂಜುನಾಥ್ ಅವರನ್ನು ಶಾಸಕ ಸ್ಥಾನದಿಂದ ರದ್ದುಗೊಳಿಸಿ, ಶೋಷಿತರನ್ನು ಅವಕಾಶಗಳಿಂದ ವಂಚಿಸಿರುವ ಕಾರಣಕ್ಕೆ ಅವರ ವಿರುದ್ಧ ಅಟ್ರಾಸಿಟಿ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತರನ್ನು ಲೇಲೆಕರ್ ಶೂಗೆ ಹೋಲಿಕೆ ಮಾಡಿದ ಕೊತ್ತೂರು ಮಂಜುನಾಥ್ ದಲಿತರ ಸ್ಥಾನಕ್ಕೆ ಕೈ ಹಾಕಿ ಆಡಳಿತ ಅನುಭವಿಸಿದ್ದಾರೆ , ಜೊತೆಗೆ ಸಂವಿಧಾನದ ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾರೆ, ದಲಿತರಿಗೆ ಮೀಸಲಿದ್ದ ಸ್ಥಾನವನ್ನು ಕಬಳಿಸಿದ್ದಾರೆ. ಇಂತಹವರಿಂದ ಶೋಷಿತ ವರ್ಗದ ಜನ ಏನನ್ನು ನಿರೀಕ್ಷೆ ಮಾಡಬಹುದು. ದಲಿತರಪರ ನಮ್ಮ ಸರ್ಕಾರ ಎನ್ನುವ ಕಾಂಗ್ರೆಸ್ ಸರ್ಕಾರ ಇವರಿಗೆ ಸೂಕ್ತ ಶಿಕ್ಷೆ ನೀಡಬೇಕು . ಮುಂದಿನ ದಿನಗಳಲ್ಲಿ ಕೋಲಾರದಿಂದ ವಿಧಾನಸೌಧವರೆಗೂ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳುತ್ತೇವೆ ಎಂದರು.

ಈ ಸಂದರ್ಭದಲ್ಲಿ ಸಾಹುಕಾರ್ ಶಂಕರಪ್ಪ, ಅರಹಳ್ಳಿ ನಾರಾಯಣಸ್ವಾಮಿ, ವೀರಾಪುರ ನಾರಾಯಣಸ್ವಾಮಿ, ಕವಿ ಚಿಕ್ಕನಹಳ್ಳಿ, ಮೂರಂಡಹಳ್ಳಿ ವೈ ಹರೀಶ್, ಹನುಮಂತಪ್ಪ ಸೇರಿದಂತೆ ಇತರೆ ದಲಿತ ಮುಖಂಡರು ಉಪಸ್ಥಿತರಿದ್ದರು.

# ಬೆಳೆ ಪರಿಹಾರ ಬಿಡುಗಡೆ

**ರಾಮನಗರ:** ಕೇಂದ್ರ ಸರ್ಕಾರದ ಎಸ್‌ಡಿಆರ್‌ಎಫ್/ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಬರ ಪರಿಸ್ಥಿತಿಯಿಂದ ಶೇ.33 ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಉಂಟಾದ ಬೆಳೆ ಹಾನಿಗೆ ಗರಿಷ್ಠ 02 ಹೆಕ್ಟೇರ್‌ಗಳಿಗೆ ಸೀಮಿತಗೊಳಿಸಿ ಮಳೆಯಾಶ್ರಿತ ಬೆಳೆಗೆ ಪ್ರತಿ ಹೆಕ್ಟೇರ್‌ಗೆ 8,500 ರೂ.ಗಳು, ನೀರಾವರಿ ಬೆಳೆಗೆ ಪ್ರತಿ ಹೆಕ್ಟೇರ್‌ಗೆ 17,000 ರೂ.ಗಳು ಮತ್ತು ಬಹುವಾರ್ಷಿಕ ಬೆಳೆಗೆ ಪ್ರತಿ ಹೆಕ್ಟೇರ್‌ಗೆ 22,500 ರೂ.ಗಳನ್ನು ನಿಗಧಿಪಡಿಸಲಾಗಿರುತ್ತದೆ. ರಾಜ್ಯ ಸರ್ಕಾರದಿಂದ 2023ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ರೈತರಿಗೆ ಬೆಳೆಹಾನಿ ಪರಿಹಾರದ ಮೊದಲನೇ ಕಂತಾಗಿ ಅಥವಾ ಎಸ್‌ಡಿಆರ್‌ಎಫ್/ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಬೆಳೆಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಪ್ರತಿ ರೈತರಿಗೆ ಗರಿಷ್ಠ 2,000 ರೂ.ಗಳವರೆಗೆ ರೈತರಿಗೆ ಪಾವತಿಸಲು ಸರ್ಕಾರವು ಅನುಮತಿಯನ್ನು ನೀಡಲಾಗಿರುತ್ತದೆ ಮತ್ತು ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರದಿಂದ ಎನ್‌ಡಿಆರ್‌ಎಫ್ ಅನುದಾನ ಬಿಡುಗಡೆಯಾದ ನಂತರ ಎಸ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಹೆಚ್ಚುವರಿ ಮೊತ್ತಕ್ಕೆ ಅರ್ಹತೆಯಿರುವ ರೈತರಿಗೆ ಹೆಚ್ಚುವರಿ ಬೆಳೆಹಾನಿ ಪರಿಹಾರ ಬಿಡುಗಡೆಗೊಳಿಸಲಾಗುವುದು ಎಂದು ತಿಳಿಸಿರುತ್ತಾರೆ.

ಸರ್ಕಾರದ ನಿರ್ದೇಶನದಂತೆ ರಾಮನಗರ ಜಿಲ್ಲೆಯಲ್ಲಿ 2023ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ರೈತರಿಗೆ ಡಿಜಿಟಲ್ ಬೆಳೆ ಸಮೀಕ್ಷೆ ಮಾಹಿತಿ ಮತ್ತು ಎಫ್.ಐ.ಡಿ ಹೊಂದಿರುವ ರೈತರ ಮಾಹಿತಿಯನ್ನಾಧರಿಸಿ ಪರಿಹಾರ ತಂತ್ರಾಂಶದ ಮೂಲಕ ಹಂತ ಹಂತವಾಗಿ ಪರಿಹಾರ ವಿತರಣೆ ಪ್ರಕ್ರಿಯೆ ಪ್ರಾರಂಭವಾಗಿದ್ದು ಅದರಂತೆ ಮೊದಲನೇ, ಎರಡನೇ ಹಾಗೂ ಮೂರನೇ ಹಂತಗಳಲ್ಲಿ ಒಟ್ಟು 59850 ರೈತರಿಗೆ 10.61 ಕೋಟಿ ರೂ.ಗಳ ಇನ್‌ಪುಟ್ ಸಬ್ಸಿಡಿಯನ್ನು ಜಮೆ ಮಾಡಲು ಅನುಮೋದನೆ ನೀಡಲಾಗಿದ್ದು ಸರ್ಕಾರದಿಂದ ನೇರವಾಗಿ ಆಧಾರ್ ಸಂಖ್ಯೆ ಜೋಡಣೆಯಾಗಿರುವ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಿರುತ್ತಾರೆ ಹಾಗೂ ಬಾಕಿ ಉಳಿದ ರೈತರಿಗೆ ಹಂತ ಹಂತವಾಗಿ ಪರಿಹಾರ ನೀಡುವುದು ಪ್ರಗತಿ ಹಂತದಲ್ಲಿದ್ದು ತುರ್ತಾಗಿ ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗೆ ಆಯಾ ತಹಶೀಲ್ದಾರ್ ಕಾರ್ಯಾಲಯಕ್ಕೆ ಭೇಟಿ ನೀಡುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಜೆಪಿ ರಾಮಮಂದಿರದ ಹೆಸರಿನಲ್ಲಿ ರಾಜಕಾರಣ ಮಾಡುತ್ತಿದೆ : ಮಾಜಿ ಸಚಿವ ಬಿ.ಸೋಮಶೇಖರ್ ಆರೋಪ

# ಅಭಿವೃದ್ಧಿಯಲ್ಲಿ ನಂಬರ್ ಒನ್ ಸ್ಥಾನಕ್ಕೆ ತೆಗೆದುಕೊಂಡು ಹೋಗುವೆ



**ಚಾಮರಾಜನಗರ:** ಬಿಜೆಪಿ ರಾಮಮಂದಿರದ ಹೆಸರಿನಲ್ಲಿ ರಾಜಕಾರಣ ಮಾಡುತ್ತಿದೆ ಎಂದು ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಹಾಗೂ ಮಾಜಿ ಸಚಿವ ಬಿ.ಸೋಮಶೇಖರ್ ಆರೋಪಿಸಿದರು.

ನಗರದ ಭುವನೇಶ್ವರಿ ವೃತ್ತದಲ್ಲಿರುವ ಕಾಂಗ್ರೆಸ್ ಪಕ್ಷದ ಹಳೆಯ ಕಚೇರಿಗೆ ಗುರುವಾರ ಅವರು ಭೇಟಿ ನೀಡಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಕಾಂಗ್ರೆಸ್ ಅಭಿವೃದ್ಧಿ ಹೆಸರಿನಲ್ಲಿ ರಾಜಕಾರಣ ಮಾಡಿದರೆ ಬಿಜೆಪಿ ರಾಮಮಂದಿರ ನಿರ್ಮಾಣ, ಹಿಂದೂ ಧಾರ್ಮಿಕ ಆಚರಣೆಯ ಹೆಸರಿನಲ್ಲಿ ಕೋಮುಗಲಭೆ ಸೃಷ್ಟಿಸಿ, ಧರ್ಮಧರ್ಮಗಳ ನಡುವೆ ಕಂದಕಗಳನ್ನು ಸೃಷ್ಟಿಸಿ ರಾಜಕಾರಣ ಮಾಡುತ್ತಿದೆ ಎಂದರು. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿ ನುಡಿದಂತೆ ನಡೆಯುವ ಮೂಲಕ ಜನರಿಗೆ ಉತ್ತಮ ಕೆಲಸ ಮಾಡುತ್ತಿದೆ ಆದರೆ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಭಿವೃದ್ಧಿ ಕೆಲಸವನ್ನು ಯಾವುದೇ ಮಾಡದೇ ಚುನಾವಣಾ ಸಂದರ್ಭದಲ್ಲಿ ರಾಮಮಂದಿರ ನಿರ್ಮಾಣವನ್ನು ಜನರಿಗೆ ಬಿತ್ತರಿಸುತ್ತಿದೆ. ಧಾರ್ಮಿಕ ಆಚರಣೆಯಲ್ಲಿ ಧರ್ಮ ಆಧಾರದಲ್ಲಿ ರಾಜಕೀಯ ಮಾಡಿ ಮೋಸ ಮಾಡುತ್ತಿದ್ದಾರೆ ಎಂದು ದೂರಿದರು.

ಸಂಸದ ಅನಂತಕುಮಾರ್ ಹೆಗಡೆ ಅವರು ಮುಖ್ಯಮಂತ್ರಿಗಳನ್ನು ಅವಹೇಳಕಾರಿ ಮಾತನಾಡಿರುವುದು ಬಹಳ ನೋವು ಉಂಟು ಮಾಡಿದೆ. ಇದು ಖಂಡನೀಯ. ಅವರ ವಿರುದ್ದ ಬಜೆಪಿಯವರು ಕ್ರಮ ತೆಗೆದುಕೊಳ್ಳಬೇಕಾಗಿತ್ತು ಆದರೆ ಮೀನಾಮೇಷ ಎಣಿಸುತ್ತಿದ್ದಾರೆ ಎಂದರು.

ಜೆ.ಎಚ್.ಪಟೇಲ್ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ನಾನು ಕೂಡು ಕಂದಾಯ ಇಲಾಖೆ ಸಚಿವರಾಗಿದ್ದು, ಹೊಸ ಜಿಲ್ಲೆಗಳಿಗೆ ಜಿಲ್ಲಾಧಿಕಾರಿಗಳ ಕಚೇರಿ ಮಾಡಿದೆ. ದಿವಂಗತ ಮಾಜಿ ಸಂಸದರಾದ ಆರ್.ಧ್ರುವನಾರಾಯಣ್ ಅವರು 2 ಅವಧಿಯಲ್ಲಿ ತುಂಬಾನೆ ಕೆಲಸ ಮಾಡಿದ್ದಾರೆ. ಆದರ ನಂತರ ಜಿಲ್ಲೆ ಅಭಿವೃದ್ದಿ ಕಾಣದೇ ಹಿಂದುಳಿದಿದೆ 10 ಹಿಂದುಳಿದಿರುವ ಜಿಲ್ಲೆಯಲ್ಲಿ ಚಾಮರಾಜನಗರ ಜಿಲ್ಲೆಯೂ ಕೂಡ ಒಂದಾಗಿದೆ ಆಗಾಗಿ ನಮ್ಮ ಅವಧಿಯಲ್ಲಿ ರಚನೆ ಮಾಡಿದ ಜಿಲ್ಲೆಯನ್ನು ಅಭಿವೃದ್ದಿಪಡಿಸುವ ನಿಟ್ಟಿನಲ್ಲಿ ಚಾಮರಾಜನಗರ ಲೋಕಸಭಾ ಚುನಾವಣೆಗೆ ನಾನೂ ಕೂಡ ಟಿಕೇಟ್ ಆಕಾಂಕ್ಷಿಯಾಗಿದ್ದೇನೆ. ನನಗೂ ರಾಜಕಾರಣ, ಅಭಿವೃದ್ದಿಯಲ್ಲಿ ಸಾಕಷ್ಟು ಅನುಭವವಿದ್ದು, ನಾನು ಸಂಸದನಾದರೆ ಜಿಲ್ಲೆಯನ್ನು ಅಭಿವೃದ್ಧಿಯಲ್ಲಿ ನಂಬರ್ ಒನ್ ಸ್ಥಾನಕ್ಕೆ ತೆಗೆದುಕೊಂಡು ಹೋಗುವೆ ಎಂದರು. ಕೇಂದ್ರದಲ್ಲಿ ದೊಡ್ಡದೊಡ್ಡ ಯೋಜನೆಗಳನ್ನು ತಂದು ಯುವಕರಿಗೆ ಉದ್ಯೋಗ ಕಲ್ಪಿಸಿಕೊಡಲು ಆದ್ಯತೆ ಕೊಡುತ್ತೇನೆ. ಅನೇಕ ಯುವಕರು ಉದ್ಯೋಗ ಇಲ್ಲದೆ ತೊಂದರೆಯಲ್ಲಿದ್ದಾರೆ. ದೊಡ್ಡದೊಡ್ಡ ಕಂಪನಿ, ಕಾರ್ಖಾನೆ ತಂದು ಉದ್ಯೋಗ ಕಲ್ಪಿಸಿಕೊಡಲಾಗುತ್ತದೆ ಆಗಾಗಿ ಪಕ್ಷದ ವರಿಷ್ಠರು, ಜಿಲ್ಲೆಯ ಜನತೆ ನನಗೊಂದು ಅವಕಾಶ ಕಲ್ಪಿಸಿಕೊಡುವಂತೆ ಮನವಿ ಮಾಡಿದರು. ನಾನು ನಾಲ್ಕು ಸಚಿವನಾಗಿದ್ದು, ನನ್ನ ಅವಧಿಯಲ್ಲಿ ಮಾಡಿರುವ ಕಾರ್ಯಕ್ರಮಗಳು ಇಡೀ ದೇಶದಲ್ಲೇ ಅನುಕರಣೇ ಮಾಡುವಂತ ಕಾರ್ಯಕ್ರಮಗಳು ಆಗಿವೆ. ಎಸ್ಎಸ್ಎಲ್‌ಸಿ ಅನುತ್ತೀರ್ಣವಾದ ವಿದ್ಯಾರ್ಥಿಗಳು ಸೆಪ್ಟೆಂಬರ್, ಅಕ್ಟೋಬರ್ ತಿಂಗಳಲ್ಲಿ ಪರೀಕ್ಷೆ ಬರೆಯಲು ಹೋಗುತ್ತಿದ್ದರು. ಇದರಿಂದ ತುಂಭಾ ವಿದ್ಯಾರ್ಥಿಗಳು ಅಲ್ಲಿಗೆ ಶಿಕ್ಷಣ ಮೊಟಕುಗೊಳಿಸುತ್ತಿದ್ದರು ಅದನ್ನು ಮನಗಂಡು ನಾನು 1988ರಲ್ಲಿ ಮೇ, ಜೂನ್ ತಿಂಗಳಲ್ಲೇ ಪರೀಕ್ಷೆ ಮಾಡಿ ಫಲಿತಾಂಶ ಬಂದು ಮಾರ್ಚ್ ತಿಂಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳೊಂದಿಗೆ ಓದುವ ಅವಕಾಶ ಮಾಡಿಕೊಟ್ಟಿದೆ ಈ ಕಾರ್ಯಕ್ರಮ ದೇಶದಲ್ಲೇ ಮಾದರಿ ಆಯಿತು. ಕಾಂಗ್ರೆಸ್ ಪಕ್ಷ ನನಗೆ ಅವಕಾಶ ಮಾಡಿಕೊಟ್ಟರೆ ಚಾಮರಾಜನಗರ ಜಿಲ್ಲೆಯನ್ನು ಅಭಿವೃದ್ದಿಯಲ್ಲಿ ನಂಬರ್ ಒನ್ ಸ್ಥಾನಕ್ಕೆ ತೆಗೆದುಕೊಂಡು ಹೋಗುವೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಛೇರ್ಮನ್ ಕಾಡಹಳ್ಳಿ ಮಹದೇವಪ್ಪ, ಅಮಚವಾಡಿ ಕಾಂತರಾಜು, ಪಾಪಣ್ಣ, ಚೆನ್ನಬಸವಣ್ಣ, ಜಯಕುಮಾರ್, ಶಿವಕುಮಾರ್ ಹಾಜರಿದ್ದರು.

## 21 ರಂದು ವಿದ್ಯುತ್ ವ್ಯತ್ಯಯ

**ಚಿಕ್ಕಬಳ್ಳಾಪುರ:** ಜ.21ರಂದು ಗೌರಿಬಿದನೂರು ಮತ್ತು ಮಿಟ್ಟೇಮರಿ 220/66/11 ಕೆ.ವಿ ವಿದ್ಯುತ್ ಸ್ವೀಕರಣಾ ಕೇಂದ್ರಗಳಲ್ಲಿ ಕವಿಪ್ರನಿನಿ ವತಿಯಿಂದ ನಿರ್ವಹಣಾ ಕಾಮಗಾರಿ ಕೈಗೊಂಡಿರುವುದರಿಂದ ಈ ವಿದ್ಯುತ್ ಸ್ವೀಕರಣಾ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಗೌರಿಬಿದನೂರು, ಅಲ್ಲೀಪುರ, ರಮಾಪುರ,ಕುಡುಮಲಕುಂಟೆ,ತೊಂಡೇಬಾವಿ, ಎ.ಸಿ.ಸಿ, ಇ.ಹೆಚ್.ಟಿ, ಮಂಚೇನಹಳ್ಳಿ, ವಿಧುರಾಶ್ವಥ, ಪೆರೇಸಂದ್ರ, ಮಂಡಿಕಲ್ಲು, ಗುಡಿಬಂಡೆ,ಡಿ.ಪಾಳ್ಯ, ವಾಟದಹೊಸಹಳ್ಳಿ,ಜಿ.ಕೊತ್ತೂರು, ಸೋಮೇನಹಳ್ಳಿ, ಬಾಗೇಪಲ್ಲಿ, ಸಾದಲಿ ಮಿಟ್ಟೇಮರಿ,ತಿಮ್ಮಂಪಲ್ಲಿ, ಸೋಮನಾಥಪುರ, ಚೇಳೂರು, ಪಾತಪಾಳ್ಯ,ಚಾಕವೇಲು, ಗೂಳೂರು, ಜೂಲಪಾಳ್ಯ 66/11 ಕೆ.ವಿ ಉಪ ವಿದ್ಯುತ್ ಕೇಂದ್ರಗಳಿಗೆ ಸದರಿ ದಿನಾಂಕದಂದು ಬೆಳಿಗ್ಗೆ 10:00. ರಿಂದ ಸಂಜೆ05:00 ಗಂಟೆಯ ವರೆಗೆ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದ್ದು, ಈ ವಿದ್ಯುತ್ ಉಪಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಗೌರಿಬಿದನೂರು, ಗುಡಿಬಂಡೆ, ಬಾಗೇಪಲ್ಲಿ ಪಟ್ಟಣಗಳು ಸೇರಿದಂತೆ ಈ ತಾಲ್ಲೂಕುಗಳ ಎಲ್ಲಾ ಗ್ರಾಮೀಣ ಪ್ರದೇಶಗಳಿಗೆ ಮತ್ತು ಚಿಕ್ಕಬಳ್ಳಾಪುರ ತಾಲ್ಲೂಕಿನ ಪೆರೇಸಂದ್ರ, ಮಂಡಿಕಲ್ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಿಗೆ ದಿನಾಂಕ 21-01-2024 ರಂದು ಬೆಳಿಗ್ಗೆ 10:00 ರಿಂದ ಸಂಜೆ 05:00 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಸುವಂತೆ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಬೆವಿಕಂ, ಚಿಕ್ಕಬಳ್ಳಾಪುರ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಕರ್ನಾಟಕ ಸರ್ಕಾರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪೋಸ್ಟ್ ಮೆಟ್ರಿಕ್ ಮೆರಿಟ್ ಕಂ-ಮಿನ್ಸ್ ಶುಲ್ಕಮರುಪಾವತಿ ವಿದ್ಯಾರ್ಥಿವೇತನಕ್ಕಾಗಿ ಪಿ.ಯು.ಸಿ, ಡಿಪ್ಲೋಮೊ, ತಾಂತ್ರಿಕ ಮತ್ತು ವೃತ್ತಿಪರ ಆನ್ ಲೈನ್ ಕೋರ್ಸ್, ಪದವೀಧರರು, ಮತ್ತು ಸ್ನಾತಕೋತ್ತರ ಪದವೀಧರರು ಓದುತ್ತಿರುವ ವಿದ್ಯಾರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ. ವಿದ್ಯಾರ್ಥಿಯು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು.(ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್,ಬೌದ್ಧ ಮತ್ತು ಪಾರ್ಶಿಯನ್),ಕರ್ನಾಟಕದ ನಿವಾಸಿಯಾಗಿರಬೇಕು, ಓದುತ್ತಿರುವ ಹಿಂದಿನ ವರ್ಷದಲ್ಲಿ ಕನಿಷ್ಠ 50% ಅಂಕಗಳನ್ನು ಗಳಿಸಿರಬೇಕು ಮತ್ತು ಕುಟುಂಬದ ಆದಾಯವು ಪೋಸ್ಟ್ ಮೆಟ್ರಿಕ್ ಗೆ 2.00 ಲಕ್ಷ ಮತ್ತು ಮೆರಿಟ್-ಕಂ-ಮಿನ್ಸ್ ವಿದ್ಯಾರ್ಥಿವೇತನಕ್ಕೆ 2.50 ಲಕ್ಷಗಳು ಮೀರಿರಬಾರದು. ಅನ್ ಲೈನ್ ನಲ್ಲಿ ಎಸ್.ಎಸ್.ಪಿ. ಪೋರ್ಟಲ್ https://SSP.Karnataka.gov.in/ ಮೂಲಕ ಅರ್ಜಿಸಲ್ಲಿಸಬಹುದು, ಅರ್ಜಿ ಸಲ್ಲಿಸಲು ಜನವರಿ 30 ಕೊನೆಯ ದಿನಾಂಕವಾಗಿರುತ್ತದೆ. ವಿದ್ಯಾರ್ಥಿಗಳು/ ಪೋಷಕರು ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್ ಸೈಟ್https://dom.karnataka.gov.in/chikkaballapura/public/ಅಥವಾ ಜಿಲ್ಲಾ ಅಧಿಕಾರಿಗಳ ಕಚೇರಿ,ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:ಎಸ್.ಎ-08, 2ನೇ ಮಹಡಿ, ಜಿಲ್ಲಾಧಿಕಾರಿಗಳ ಕಾರ್ಯಾಲಯ ,ಚಿಕ್ಕಬಳ್ಳಾಪುರ 08156-277049 ಅಥವಾ 08156-277049, 9731889639, 7204915866, 8867760346, 9739426396, 8123318947 ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟಿಕೆಟ್ ಇಲ್ಲದೆ ಪ್ರಯಾಣಿಸಿದ 3340 ಪ್ರಯಾಣಿಕರಿಗೆ ದಂಡ

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಡಿಸೆಂಬರ್ -2023ರ ಮಾಹೆಯಲ್ಲಿ ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ 43,863 ವಾಹನಗಳನ್ನು ತನಿಖೆಗೊಳಪಡಿಸಿ 3274 ಪ್ರಕರಣಗಳನ್ನು ಪತ್ತೆಹಚ್ಚಿ, 3340 ಟಿಕೆಟ್ ರಹಿತ ಪ್ರಯಾಣಿಕರಿಂದ 5,39,548/-ರೂ ಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿರುತ್ತಾರೆ. ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ 77,577/- ರೂ.ಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ ಹಾಗೂ ತಪ್ಪಿತಸ್ಥರ ವಿರುದ್ಧ ಇಲಾಖಾ ರೀತ್ಯಾ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗಿದೆ. ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು, ಬಸ್ಸಿನಲ್ಲಿ ಪ್ರಯಾಣಿಸುವಾಗ ಸರಿಯಾದ ಟಿಕೆಟ್/ ಪಾಸ್ ಪಡೆದು ಪ್ರಯಾಣ ಮಾಡುವಂತೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮುಖ್ಯ ಸಂಚಾರ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2023-24ನೇ ಜನವರಿ ಆವೃತ್ತಿಯ ಯುಜಿಸಿ ಅನುಮೋದಿತ ಹಾಗೂ ನ್ಯಾಕ್ A+ ಮಾನ್ಯತೆಯೊಂದಿಗೆ ವಿವಿಧ ಶಿಕ್ಷಣ ಕ್ರಮಗಳ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸ್ನಾತಕ/ಸ್ನಾತಕೋತ್ತರ ಪದವಿಗಳಾದ ಬಿ.ಎ., ಬಿ.ಕಾಂ.,(ಮೂರು ವರ್ಷ/ವಾರ್ಷಿಕ ಪರೀಕ್ಷೆ) ಬಿ.ಲಿಬ್.ಐ.ಎಸ್ಸಿ., ಬಿ.ಎಸ್ಸಿ., ಬಿ.ಸಿ.ಎ., ಬಿ.ಬಿ.ಎ., ಬಿ.ಎಸ್.ಡಬ್ಲ್ಯೂ., ಎಂ.ಎ., ಎಂ.ಕಾಂ., ಎಂ.ಬಿ.ಎ., ಎಂ.ಎಸ್. ಡಬ್ಲ್ಯೂ, ಎಂ.ಸಿ.ಎ., ಎಂ.ಲಿಬ್ .ಐ.ಎಸ್.ಸಿ., ಎಂ.ಎಸ್ಸಿ., ಪಿ.ಜಿ. ಡಿಪ್ಲೊಮಾ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್ಗಳಿಗೆ ಪ್ರವೇಶಾತಿಯು ಜ. 9 ರಿಂದ ಪ್ರಾರಂಭವಾಗಿದೆ. ಪ್ರವೇಶಾತಿ ಬಯಸುವ ವಿದ್ಯಾರ್ಥಿಗಳು ಕರಾಮುವಿಯ ಅಧಿಕೃತ ವೆಬ್‌ಸೈಟ್ www.ksoumysuru.ac.in ಮುಖಾಂತರ ಪ್ರವೇಶಾತಿ ಅರ್ಜಿಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳನ್ನು ಕರಾಮುವಿ ಪ್ರಾದೇಶಿಕ ಕೇಂದ್ರ, ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆ ರಾಮನಗರ, ಇಲ್ಲಿ ಸಲ್ಲಿಸಿ ಪ್ರವೇಶಾತಿ ಪಡೆಯಬಹುದಾಗಿರುತ್ತದೆ. ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಸಲ್ಲಿಸಲು ಸಾಧ್ಯವಾಗದ ವಿದ್ಯಾರ್ಥಿಗಳಿಗೆ, ಪ್ರಾದೇಶಿಕ ಕೇಂದ್ರದಲ್ಲೇ ಪ್ರವೇಶಾತಿ ಅರ್ಜಿಯನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ಹಾಕಿಕೊಡಲಾಗುವುದು. ಹೆಚ್ಚಿನ ಮಾಹಿತಿಗೆ 9964495936, 8861732487, 8660460261, 9743184848 9900356226 ಹಾಗೂ 8618501602 ಅನ್ನು ಸಂಪರ್ಕಿಸುವಂತೆ ಪ್ರಾದೇಶಿಕ ನಿರ್ದೇಶಕರಾದ ಡಾ.ಕೆ. ನಂದಕುಮಾರಿ ತಿಳಿಸಿದ್ದಾರೆ.

# ಎಸ್‌ಪಿಟಿ ಟ್ವಿಂಕಲ್ ಸ್ಟಾರ್ಸ್ ಶಿಕ್ಷಣ ಸಂಸ್ಥೆ 14ನೇ ವಾರ್ಷಿಕೋತ್ಸವ

**ದೊಡ್ಡಬಳ್ಳಾಪುರ:** ಪಟ್ಟಣ ತೇರಿನ ಬೀದಿಯಲ್ಲಿರುವ ಎಸ್ ಪಿ ಟಿ ಟ್ವಿಂಕಲ್ ಸ್ಟಾರ್ಸ್ ಶಿಕ್ಷಣ ಸಂಸ್ಥೆ ಇತ್ತೀಚೆಗೆ 14ನೇ ವಾರ್ಷಿಕೋತ್ಸವವನ್ನು ಸಮಾರಂಭದಲ್ಲಿ ದೀಪ ಬೆಳಗಿಸುವುದರೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಫ್ಟ್ ಇಂಡಿಯಾ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಎಚ್. ಎಸ್. ಮಧು,ಅವರು ಮಾತನಾಡಿ, ತಮ್ಮ ಭಾಷಣದಲ್ಲಿ ಭಾರತವು ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರ ಹಾಗಾಗಿ ವಿದ್ಯಾರ್ಥಿಗಳು ಉತ್ತಮ ವ್ಯಾಸಂಗದ ಕಡೆ ಹೆಚ್ಚು ಗಮನ ಹರಿಸಿ ಯಾವುದೇ ರಂಗದಲ್ಲಿ ಗಣನೀಯ ಸೇವೆ ಸಲ್ಲಿಸುವ ಅವಕಾಶ ನಿಮ್ಮದಾಗಿಸಿಕೊಳ್ಳಿ ಹಾಗೂ ವಿದ್ಯಾರ್ಥಿಗಳು ತಮ್ಮ ವ್ಯಾಸಂಗ ಪೂರ್ಣವಾದ ನಂತರ ವಿದೇಶಕ್ಕೆ ತೆರಳುವ ಅವಶ್ಯಕತೆ ಇಲ್ಲ ಬದಲಾಗಿ ನಮ್ಮ ದೇಶದಲ್ಲೇ ಸೇವೆ ಸಲ್ಲಿಸಿ ತಾಯ್ನಾಡಿನ ಋಣ ತೀರಿಸಬೇಕು ಎಂದು ತಿಳಿಸಿದರು.

ಮಂಜುನಾಥ್ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಇಂದಿನ ಶೈಕ್ಷಣಿಕ ವ್ಯವಸ್ಥೆ ಮತ್ತು ಅದರ ಉಪಯೋಗಗಳನ್ನು ತಿಳಿಸಿದರು ಹಾಗೂ ಪೋಷಕರು ಮಕ್ಕಳ ವಿದ್ಯಾಭ್ಯಾಸಕ್ಕೆ ಬೆನ್ನೆಲುಬಾಗಿ ನಿಲ್ಲಬೇಕೆಂದು ಕರೆ ನೀಡಿದರು.

ದೇವಾನಂದ್ ವೇದಿ ರವರು ಮಾತನಾಡಿ ವಿದ್ಯಾಬ್ಯಾಸ, ಕ್ರೀಡೆ, ಸಾಹಿತ್ಯ, ಕಲೆ - ಚಿತ್ರಕಲೆ, ಸುರಕ್ಷತೆ ಮತ್ತು ಆರೋಗ್ಯ ಎಲ್ಲದರ ಕಡೆ ಗಮನವಹಿಸಿ ತಮ್ಮ ತಮ್ಮ ಮುಂದಿನ ಜೀವನ ಶೈಲಿ ಸುಗಮವಾಗಿ ಅತ್ಯುತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಸಮಾರಂಭದಲ್ಲಿ ಮುಖ್ಯ ಅತಿಥಿಗಳನ್ನು ಸನ್ಮಾನಿಸಿ ಗೌರವಿಸಿದರು ಮತ್ತು ಎಲ್ಲಾ ಮುಖ್ಯ ಅತಿಥಿಗಳು ಸೇರಿ ಶಾಲೆಯ ಗೌರವಾನ್ವಿತ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಮಾಡಿರುವ ಸಾಧನೆಯನ್ನು ಸ್ಮರಿಸಿ ಅವರಿಗೆ ಶಾಲು ಹೊದಿಸಿ ಮೈಸೂರು ಪೇಟ ತೊಡಿಸಿ ಸನ್ಮಾನ ಮಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕಲಾ ಮತ್ತು ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು ಮತ್ತು ಶಾಲೆಯ ವಿದ್ಯಾರ್ಥಿಗಳಿಂದ ಸಂಗೀತ, ನೃತ್ಯ, ನಾಟಕ, ಯೋಗ ಪ್ರದರ್ಶನದೊಂದಿಗೆ ಕಾರ್ಯಕ್ರಮ ಅದ್ದೂರಿಯಿಂದ ನಡೆಯಿತು. ಈ ಸಂದರ್ಭದಲ್ಲಿ ಕಬ್ಬಲಗಿ,ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಮತ್ತು ಇತರೆ ಉಪಸ್ಥಿತರಿದ್ದರು.




### ಲಕ್ಷ್ಮೀ ವೆಂಕಟೇಶ್ವರಸ್ವಾಮಿ ಬ್ರಹ್ಮ ರಥೋತ್ಸವ ಅದ್ದೂರಿ

# ಕೆಂಗಲ್ ಆಂಜನೇಯಸ್ವಾಮಿ ಜಾತ್ರೆ

**ಚನ್ನಪಟ್ಟಣ :** ಶ್ರೀ ಕೆಂಗಲ್ ಆಂಜನೇಯಸ್ವಾಮಿ ಜಾತ್ರಾ ಮಹೋತ್ಸವ ಪ್ರಯುಕ್ತ ಶುಕ್ರವಾರ ಆಯೋಜಿಸಿದ್ದ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ಬ್ರಹ್ಮ ರಥೋತ್ಸವವು ಧಾರ್ಮಿಕ ವಿಧಾನಗಳು,ಶ್ರದ್ಧ ಭಕ್ತಿಯೊಂದಿಗೆ ವಿಜ್ರಂಭಣೆಯಿಂದ ಜರುಗಿತು.



ಶುಕ್ರವಾರ ಬೆಳಿಗ್ಗೆ 11.55 ರಿಂದ 12.55 ಗಂಟೆಯೊಳಗೆ ಸಲ್ಲುವ ಶುಭ ಅಭಿಜನ್ ಲಗ್ನದಲ್ಲಿ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿವರ ಬ್ರಹ್ಮ ರಥೋತ್ಸವ, ಮುತ್ತಿನ ಪಲ್ಲಕ್ಕಿ ಉತ್ಸವ ಹಾಗೂ ಹೂವಿನ ಪಲ್ಲಕ್ಕಿ ಉತ್ಸವ ಯಶಸ್ವಿಯಾಗಿ ನಡೆಯಿತು. ದೇವಸ್ಥಾನದ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ವಿ.ಬಿ.ಚಂದ್ರು ಆಡಳಿತ ಮಂಡಳಿ ಸದಸ್ಯರು ಹಾಗೂ ಅರ್ಚಕರು ಬ್ರಹ್ಮರಥೋತ್ಸವಕ್ಕೆ ಚಾಲನೆ ನೀಡಿದರು. ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಭಕ್ತಾಧಿಗಳು, ಬ್ರಹ್ಮ ರಥೋತ್ಸವಕ್ಕೆ ಬಾಳೆ ಹಣ್ಣು, ಹೂವು,ಜವನ ಎಸೆದು ಸಂಭ್ರಮಿಸಿದರು.



ಬ್ರಹ್ಮ ರೋಥೋತ್ಸವದ ಪ್ರಯುಕ್ತ ಆಯೋಜಿಸಿದ್ದ ವೀರಗಾಸೆ ಕುಣಿತ, ತಮಟೆ ಸೇವೆ, ಡೊಳ್ಳುಕುಣಿತ, ಪೂಜಾ ಕುಣಿತ,ಚಿಲಿಪಿಲಿ ಗೊಂಬೆಗಳ ಕುಣಿತ ಮುಂತಾದ ಜನಪದ ಕಲಾತಂಡಗಳ ಪ್ರದರ್ಶನ ಭಕ್ತಾಧಿಗಳನ್ನು ಆಕರ್ಷಿಸಿತು. ದೇವಸ್ಥಾನದಲ್ಲಿನ ಶ್ರೀ ಆಂಜನೇಯಸ್ವಾಮಿ ಮತ್ತು ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ದೇವರ ಮೂರ್ತಿಗೆ ಹೂವಿನಿಂದ ವಿಶೇಷ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಲಾಯಿತು. ದೇವಸ್ಥಾನದ ಒಳ ಆವರಣದ ಕಂಬ ಮತ್ತು ಮೇಲ್ಭಾಗವನ್ನು ಹೂವು, ವಿವಿಧ ಹಣ್ಣು ಹಾಗೂ ತರಕಾರಿಗಳಿಂದ ಅಲಂಕಾರ ಮಾಡಲಾಗಿತ್ತು. ಹೊರಭಾಗದಲ್ಲೂ ವಿಶೇಷವಾಗಿ ವಿದ್ಯುತ್ ಅಲಂಕಾರ ಮಾಡಲಾಗಿತ್ತು.

ಬ್ರಹ್ಮ ರಥೋತ್ಸವದಲ್ಲಿ ದೇವಸ್ಥಾನ ಪ್ರಧಾನ ಅರ್ಚಕರಾದ ರವೀಂದ್ರ, ಶರತ್ ಹಾಗೂ ಅರ್ಚಕರು, ದೇವಸ್ಥಾನದ ಮೇಲುಸ್ತುವಾರಿ ಸಮಿತಿ ಸದಸ್ಯರು ಭಾಗವಹಿಸಿ ರಥೋತ್ಸವದ ಯಶಸ್ಸಿಗೆ ಕೈಜೋಡಿಸಿ ಸಹಕರಿಸಿದರು.

ದೇವಾಲಯದ ಆಡಳಿತ ಮಂಡಳಿ ಮತ್ತು ಭಕ್ತಾಧಿಗಳು ಆಗಮಿಸಿದ ಭಕ್ತಾಧಿಗಳಿಗೆ ಪ್ರಸಾದ, ನೀರು ಮಜ್ಜಿಗೆ, ಪಾನಕ ವಿತರಿಸಿದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಪೊಲೀಸ್ ಬಂದೋ ಬಸ್ತ್ ವ್ಯವಸ್ಥೆ ಮಾಡಿದ್ದರು.

# ಭಗೀರಥ ಪ್ರೀಮಿಯರ್ ಲೀಗ್- ಸೀಸನ್2 ಗೆ ಚಾಲನೆ

**ಚಾಮರಾಜನಗರ:** ದೈಹಿಕ, ಮಾನಸಿಕವಾಗಿ ಶಕ್ತಿವಂತರಾಗಬೇಕಾದರೆ ಕ್ರೀಡೆ ಅವಶ್ಯಕವಾಗಿದೆ ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಭಗೀರಥ ಪ್ರೀಮಿಯರ್ ಲೀಗ್ -ಸೀಸನ್ 2ಗೆ ಬ್ಯಾಟ್ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಪ್ರತಿ ಗ್ರಾಮಾಂತರ ಪ್ರದೇಶಗಳಲ್ಲೂ ಕ್ರಿಕೆಟ್ ಆಟಗಾರರುವಿದ್ದು ಆಟವನ್ನು ಆಡುತ್ತಿದ್ದು, ಉತ್ತಮವಾದ ಕ್ರಿಕೆಟ್‌ಪಟುಗಳು ಹೊರಹೊಮ್ಮಿದ್ದಾರೆ. ಜಿಲ್ಲಾ ಮಟ್ಟದ ಕ್ರಿಕೆಟ್ ಪಂದ್ಯಾವಳಿಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸುತ್ತಿದ್ದಾರೆ. ಕ್ರೀಡೆಯು ದೈಹಿಕ, ಮಾನಸಿಕವಾಗಿ ಶಕ್ತಿಯುತರಾಗಬೇಕಾದರೆ ಸಹಕಾರಿಯಾಗಿದೆ . ಅ ನಿಟ್ಟಿನಲ್ಲಿ ಕ್ರೀಡೆ ನಮ್ಮೆಲ್ಲರಿಗೂ ಅವಶ್ಯಕವಾಗಿದೆ ಎಂದರು. ಕ್ರೀಡೆಯಲ್ಲಿ ಸೋಲು-ಗೆಲುವು ಸಾಮಾನ್ಯವಾಗಿದೆ. ಸೋತರು ದೃತಿಗೇಡದೆ ಮುಂದಿನ ದಿನಗಳಲ್ಲಿ ಹೆಚ್ಚಿನ ಅಭ್ಯಾಸ ಮಾಡಿ ಮುಂಬರುವ ಪಂದ್ಯಾವಳಿಯಲ್ಲಿ ಭಾಗವಹಿಸಿ ಗೆಲುವು ಸಾಧಿಸಬೇಕು. ಈ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾಗವಹಿಸಿರುವ ಎಲ್ಲಾ ಕ್ರಿಕೆಟ್ ಪಟುಗಳು ಕೂಡ ಜಿಲ್ಲೆಯಿಂದ ರಾಜ್ಯ ಮಟ್ಟಕ್ಕೆ , ರಾಜ್ಯದಿಂದ ರಾಷ್ಟ್ರಮಟ್ಟಕ್ಕೆ ಹೋಗುವಂತಾಗಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪಿ.ವೃಷಬೇಂದ್ರಪ್ಪ, ಯುವ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಸೂರ್ಯಬಾಲರಾಜ್, ಉಪ್ಪಾರ ಎಸ್‌ಸಿ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಬಾಗಳಿರೇವಣ್ಣ ಮಾತನಾಡಿದರು. ಕಾರ್ಯಕ್ರಮದಲ್ಲಿ ಅಯೋಜಕರಾದ ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷ ಸಿ.ಎ.ಮಹದೇವಶೆಟ್ಟಿ, ಪರಿಸರ ಪ್ರೇಮಿ ಸಿ.ಎಂ.ವೆಂಕಟೇಶ್, ಯುವಮೋರ್ಚಾ ನಗರ ಮಂಡಲ ಅಧ್ಯಕ್ಷ ಆನಂದಭಗೀರಥ, ಪ್ರಧಾನ ಕಾರ್ಯದರ್ಶಿ ಕೃಷ್ಣ, ಅಧ್ಯಕ್ಷ ರಾಜೇಂದ್ರ, ಭರತ್‌ಕುಮಾರ್, ಜಗ್ಗಣ್ಣ, ಅಜಯ್, ವೇಣುಗೋಪಾಲ್ ಹಾಗೂ ಕ್ರಿಕೆಟ್ ಆಟಗಾರರು ಹಾಜರಿದ್ದರು.



## ಶಾಸಕರಿಗೆ ಮನವಿ ಸಲ್ಲಿಕೆ

**ಚಾಮರಾಜನಗರ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಚಾಮರಾಜನಗರ ಜಿಲ್ಲಾ ಶಾಖೆಯಿಂದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಹಾಗೂ ಪದಾಧಿಕಾರಿಗಳು ಶಾಸಕರಿಗೆ ಮನವಿ ಸಲ್ಲಿಸಿ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದರು.

ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮಾತನಾಡಿ 6ನೇ ವೇತನ ಆಯೋಗದ ಸೌಲಭ್ಯಗಳನ್ನು ಜಾರಿಗೊಳಿಸಲು ಶುಕ್ರವಾರ ದಂದು ರಾಜ್ಯದ ನಿವೃತ್ತ ಮುಖ್ಯ ಕಾರ್ಯದರ್ಶಿಗಳಾದ ಸುಧಾಕರ್ ರಾವ್ ಅವರ ಅಧ್ಯಕ್ಷತೆಯಲ್ಲಿ 7ನೇ ವೇತನ ಆಯೋಗವನ್ನು ರಚಿಸಿ, 2ಬಾರಿ ವೇತನ ಆಯೋಗದ ಅವಧಿಯನ್ನು ವಿಸ್ತರಿಸುವ ಮೂಲಕ ಇಂದಿಗೆ 13 ತಿಂಗಳಾದರೂ ವರದಿಯನ್ನು ಸರ್ಕಾರಕ್ಕೆ ನೀಡಿರುವುದಿಲ್ಲ ಅಂದಿನ ಸರ್ಕಾರದ ಮುಖ್ಯ ಮಂತ್ರಿಗಳು ಈ ಹಿಂದೆ 6ನೆ ವೇತನ ಆಯೋಗವನ್ನು ರಚಿಸಿ, 8 ತಿಂಗಳ ಅಲ್ಪಾವಧಿಯಲ್ಲಿ ವರದಿಯನ್ನು ಆಯೋಗದಿಂದ ಪಡೆದು ವಿಳಮ್ಬವಿಲ್ಲದೇ ರಾಜ್ಯ ಸರ್ಕಾರಿ ನೌಕರರಿಗೆ ಅನುಕೂಲ ಮಾಡಿಕೊಟ್ಟಿದ್ದರು ಆದರೆ 7ನೇ ವೇತನ ಆಯೋಗದ ಅವದಿಯನ್ನು 2 ಬಾರಿ ವಿಸ್ತರಿಸಿರುವುದರಿಂದ ರಾಜ್ಯದ ಸರ್ಕಾರಿ ನೌಕರರಲ್ಲಿ ವೇತನ ಆಯೋಗದ ಜಾರಿಯ ಬಗ್ಗೆ ಅನಿಶ್ಚಿತತೆ ಉಂಟಾಗಿರುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರ 7ನೇ ವೇತನ ಆಯೋಗದಿಂದ ಶೀಘ್ರ ವರದಿ ಪಡೆದು ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆಗಳನ್ನು ಪೂರ್ಣ ಪ್ರಮಾಣದಲ್ಲಿ ಪರಿಷ್ಕರಿಸಿ ಆದೇಶ ಹೊರಡಿಸಬೇಕು. ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಬೇಕು. ಕರ್ನಾಟಕ ರಾಜ್ಯ ಆರೋಗ್ಯ ಸಂಜೀವಿನಿ ಯೋಜನೆ(ಕೆ.ಎ.ಎಸ್.ಎಸ್.) ಅನಿಷ್ಠಾನಗೊಳಿಸಬೇಕು ಎಂದು ಮನವಿ ಸಲ್ಲಿಸಿದರು. ಮನವಿ ನೀಡುವ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಪ್ರದಾನ ಕಾರ್ಯದರ್ಶಿ ಮಹದೇವಸ್ವಾಮಿ, ಉಪಾಧ್ಯಕ್ಷ ಮಲ್ಲಿಕಾರ್ಜುನ, ಆರ್.ಎನ್.ನಂಜುಂಡಸ್ವಾಮಿ, ಮಹದೇವಯ್ಯ(ಆಪುಮೇಸ್ಟ್ರು), ಶಿವಕುಮಾರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಎಸ್.ಮಾದಪ್ಪ, ಪ್ರದಾನ ಕಾರ್ಯದರ್ಶಿ ಮಹದೇವಸ್ವಾಮಿ, ಪ್ರದೀಪ್‌ಕುಮಾರ್, ಸೈಮನ್, ವಿವಿದ ಜಿಲ್ಲಾ ಸಂಘದ ಪದಾಧಿಕಾರಿಗಳು, ನಿರ್ದೇಶಕರುಗಳು, ವಿವಿಧ ಸಂಘಗಳಾ ಪದಾಧಿಕಾರಿಗಳು ಸರ್ಕಾರಿ ನೌಕರರು ಹಾಜರಿದ್ದರು.

## ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

**ಕೋಲಾರ:** 2019-20 ನೇ ಸಾಲಿನಿಂದ ಮೆಟ್ರಿಕ್ ನಂತರದ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಅದರಂತೆ 2023-24ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಿದ್ದು, ಪ್ರಸ್ತುತ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಕಳೆದ ಸಾಲಿಗೆ ಹೋಲಿಕೆ ಮಾಡಿದರೆ ಶೇ.45.33 ರಷ್ಟು ಮಾತ್ರ ಅರ್ಜಿಗಳು ಸ್ವೀಕೃತಿಯಾಗಿರುತ್ತವೆ. ಅದ್ದರಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಉತ್ತೇಜಿಸಲು ಹಾಗೂ ಸದರಿ ಕಾರ್ಯಕ್ರಮದಡಿ ಪ್ರಯೋಜನ ಪಡೆಯಲು ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿರುವ ಶಾಲಾ, ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನಃಪರಿವರ್ತನೆಯೇ ಜೈಲು ಶಿಕ್ಷೆ ಉದ್ದೇಶ



**ಚಾಮರಾಜನಗರ:** ಜೀವನ ಸುಧಾರಣೆ ಮತ್ತು ಮನಸ್ಸು ಪರಿವರ್ತನೆ ಉದ್ದೇಶದಿಂದ ಅಪರಾಧ ಪ್ರಕರಣಗಳ ತಪ್ಪಿತಸ್ಥರಿಗೆ ಜೈಲು ಶಿಕ್ಷೆ ವಿಧಿಸಲಾಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ ಅಭಿಪ್ರಾಯಪಟ್ಟರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜನಾರ್ದನ ಪ್ರತಿಷ್ಠಾನದ ವತಿಯಿಂದ ಗುರುವಾರ ನಗರದ ಜಿಲ್ಲಾ ಕಾರಾಗೃಹದಲ್ಲಿ ಹಮ್ಮಿಕೊಳ್ಳಲಾಗಿದ್ದ ಧಾರ್ಮಿಕ ಆಚರಣೆ ಹಾಗೂ ಕಾನೂನು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾನೂನಿನ ಬಗ್ಗೆ ಗೊತ್ತಿದ್ದೂ ತಪ್ಪು ಮಾಡಿರಬಹುದು ಅಥವಾ ಗೊತ್ತಿಲ್ಲದೆ ತಪ್ಪು ಮಾಡಿರಬಹುದು ಅಥವಾ ಬೇರೆ ಯಾರದೋ ತಪ್ಪಿಗೆ ನೀವು ಬಲಿಯಾಗಿರಬಹುದು. ಆದರೆ ಮನುಷ್ಯ ಸಾಯುವವರೆಗೂ ಕಾನೂನಿನ ಚೌಕಟ್ಟಿನೊಳಗೆ ಜೀವನ ಮಾಡಬೇಕು ಎಂದರು.

ನಮ್ಮ ಆತ್ಮಕ್ಕೆ ಶಾಂತಿ, ನೆಮ್ಮದಿ ಬೇಕು. ಮಠ ಮಂದಿರಗಳು, ಚರ್ಚ್, ಮಸೀದಿಗಳು ಸೇರಿದಂತೆ ಧಾರ್ಮಿಕ ಸಂಸ್ಥೆಗಳ ಮುಖ್ಯಸ್ಥರು ನೆಮ್ಮದಿ ನೀಡುವ ಕೆಲಸ ಮಾಡಬೇಕು? ಎಂದರು.

ಸೇವಾ ಭಾರತಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಾಸುದೇವರಾವ್ ಮಾತನಾಡಿ, ಯಾವುದೋ ಕ್ಷಣದಲ್ಲಿ ಮಾಡಿದ ತಪ್ಪಿನಿಂದ ಶಿಕ್ಷೆ ಅನುಭವಿಸುತ್ತಿದ್ದೀರಿ. ಭಗವಂತನಾದ ಶ್ರೀಕೃಷ್ಣನ ಕೂಡ ಜೈಲಿನಲ್ಲಿ ಹುಟ್ಟಿದಂತಹವನು. ಕಾರಾಗೃಹದಿಂದ ಹೊರ ಬಂದ ಮೇಲೆ ದುಷ್ಟರನ್ನು ಸಂಹಾರ ಮಾಡಿ ಒಳ್ಳೆಯವರನ್ನು ರಕ್ಷಣೆ ಮಾಡಿದ. ಅದೇ ರೀತಿ ನೀವು ಹೊರ ಬಂದ ಮೇಲೆ ಉತ್ತಮ ನಾಗರಿಕರಾಗಿ ಸತ್ಪ್ರಜೆಗಳಾಗಬೇಕು ಸಲಹೆ ನೀಡಿದರು.

ಜಿಲ್ಲಾ ಕಾರಾಗೃಹದ ಸೂಪರಿಂಟೆಂಡೆಂಟ್ ಶಿವಕುಮಾರ್, ಸೇವಾಭಾರತಿ ಶಿಕ್ಷಣ ಸಂಸ್ಥೆಯ ಅಡಳಿತಾಧಿಕಾರಿ ರಮೇಶ್, ಜನಾರ್ದನ ಪ್ರತಿಷ್ಠಾನದ ಅನಂತಪ್ರಸಾದ್, ಪ್ರಕಾಶ್ ಇದ್ದರು.

# ನೆನೆಗುದಿಗೆ ಬಿದ್ದಿದ್ದ ರಸ್ತೆ ಕಾಮಗಾರಿಗೆ ಚಾಲನೆ

**ಹನೂರು:** ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಕಾರಣಾಂತರಗಳಿಂದ ನೆನೆಗುದಿಗೆ ಬಿದ್ದಿದ್ದ ಕೆ.ಶಿಫ್ ರಸ್ತೆ ಕಾಮಗಾರಿ ಮರು ಪ್ರಾರಂಭಿಸಲು ಶಾಸಕ ಎಂ.ಆರ್. ಮಂಜುನಾಥ್ ಚಾಲನೆ ನೀಡಿದರು.

ಈ ವೇಳೆ ಸುದ್ದಿಗಾರರೊಡನೆ ಶಾಸಕ ಎಂ.ಆರ್. ಮಂಜುನಾಥ್ ಮಾತನಾಡಿ, ವೃತ್ತದಲ್ಲಿರುವ ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರ ಪ್ರತಿಮೆಯನ್ನು ಮೂಲೆಗುಂಪು ಮಾಡದೇ ಸೂಕ್ತ ಸ್ಥಾನಮಾನದಲ್ಲಿ ಸ್ಥಾಪಿಸುವ ಸಂಬಂಧ ಒತ್ತಾಯವಿದೆ. ವೃತ್ತ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಉಪ ನೊಂದಣಾಧಿಕಾರಿ ಕಛೇರಿ ಅಧಿಕಾರಿಗಳೊಡನೆ ಚರ್ಚಿಸಿ ಸಮುದಾಯದ ಮುಖಂಡರುಗಳ ಮನವೊಲಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕಾದ ಸೂಕ್ಷ್ಮ ವಿಚಾರವಾಗಿದೆ. ಸದ್ಯ ರಸ್ತೆ ಬದಿಯಲ್ಲಿ ಇಂಜಿನಿಯರ್ ಗಳು ಗೊತ್ತು ಮಾಡಲಾಗಿರುವ ಕಾಂಪೌಂಡ್ ಅಂಗಡಿ ಮುಂಗಟ್ಟುಗಳನ್ನು ತೆರವುಗೊಳಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಅಭಿವೃದ್ಧಿ ಕಾರ್ಯಕ್ಕೆ ಎಲ್ಲರೂ ಸಹಕರಿಸಿ ಎಂದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ವೈ.ಕೆ. ಗುರುಪ್ರಸಾದ್, ಪೊಲೀಸ್ ಇನ್ಸ್‌ಪೆಕ್ಟರ್ ಶಶಿಕುಮಾರ್, ಕೆಶಿಫ್ ಎಇಇ ರಾಜೇಶ್ ಮುನ್ನಿ, ಪಟ್ಟಣ ಪಂಚಾಯಿತಿ ಸದಸ್ಯ ಸಂಪತ್ ಕುಮಾರ್, ಮಹೇಶ್ ನಾಯಕ್, ಪಟ್ಟಣದ ದಲಿತ ಸಮುದಾಯದ ಯಜಮಾನರುಗಳು, ಮುಖಂಡರುಗಳು, ಯುವಕರು, ಸಾರ್ವಜನಿಕರು ಉಪಸ್ಥಿತರಿದ್ದರು.



### ಗೊಂದಲದಗೂಡಾಗಿಯೇ ಇರುವ ಪರಿಪೂರ್ಣ ವೃತ್ತ ನಿರ್ಮಾಣ ನೀಲನಕ್ಷೆ

ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಕೊಳ್ಳೇಗಾಲ, ಮೈಸೂರು ಇನ್ನಿತರಡೆ ನಗರ ಪ್ರದೇಶಗಳಲ್ಲಿ ಸರ್ಕಲ್ ಮಧ್ಯ ಭಾಗದಲ್ಲಿ ಬರುವ ಅಭಿಲಾಷೆ ಭೀಮ್ ರಾವ್ ಡಾ.ಅಂಬೇಡ್ಕರ್ ಅವರ ಅನುಯಾಯಿ, ಅಭಿಮಾನಿಗಳದ್ದಾಗಿದೆ. ಆದರೆ ಸರ್ಕಲ್ ನ ಎರಡು ಬದಿಯ ಪ್ರದೇಶಗಳ ಕಡೆ ಕಣ್ಣು ಹಾಯಿಸಿದರೆ ಪ್ರತಿಮೆ ರಸ್ತೆ ಸೆಂಟ್ರಲ್ಲಿ ಬರೋದಿಲ್ಲ ಎಂಬ ಜಿಜ್ಞಾಸೆಗೆ ಕಾರಣವಾಗಿದೆ. ವೃತ್ತದ ಒಂದು ಬದಿಯಲ್ಲಿನ ಆರೋಗ್ಯ ಇಲಾಖೆ, ಪೋಲಿಸ್ ಇಲಾಖೆ ಉಪನೋಂದಾಣಿ ಕಛೇರಿ ಭಾಗದಲ್ಲಿ ರಸ್ತೆ ಅಗಲೀಕರಣವನ್ನು ಕೈಗೊಳ್ಳಲಾಗುತ್ತಿದ್ದು, ಮತ್ತೊಂದು ಬದಿಯಲ್ಲಿ ಬರುವ ಅರಣ್ಯ ಇಲಾಖೆಯ ಕಾಂಪೌಂಡ್ ಬದಿಯಲ್ಲಿ ಯಾವುದೇ ಕಾಮಗಾರಿಯನ್ನು ಕೈಗೊಂಡಿಲ್ಲದೇ ಇರುವುದರಿಂದ ವೃತ್ತ ಹೇಗಾತ್ತೇ ಎಂಬ ಗೊಂದಲ ಮೂಡಿದೆ. ರಸ್ತೆ ಕಾಮಗಾರಿ ಒಂದಷ್ಟು ಮುಂದುವರಿದ ಬಳಿಕ ಸ್ಪಷ್ಟತೆ ಸಿಗಲಿದೆ. ಆ ನಂತರ ಯಾವ ಬೆಳವಣಿಗೆ ಆಗಲಿದೆ ಎಂಬುದನ್ನು ಕಾದು ನೋಡಬೇಕಾಗಿದೆ.

# ಸಂಜೆ ಟಿಪ್ಸ್



## ರಿವರ್ ಬೆಂಗಳೂರಿನಲ್ಲಿ ತನ್ನ ಮೊದಲ ಮಳಿಗೆ ಪ್ರಾರಂಭ

ಬೆಂಗಳೂರು ಮೂಲದ ವಿದ್ಯುಚ್ಚಾಲಿತ ವಾಹನ(ಇವಿ) ಉತ್ಪಾದಕ ರಿವರ್ ಜೆಪಿ ನಗರದಲ್ಲಿ ತನ್ನ ಮೊದಲ ಮಳಿಗೆ ಪ್ರಾರಂಭಿಸಿದೆ. ರಿವರ್ ಸ್ಟೋರ್ ಅನ್ನು ಗ್ರಾಹಕರಿಗೆ ಸ್ಥಳೀಯ ಉತ್ಪಾದನೆ, ಅಕ್ಸೆಸರೀಸ್ ಮತ್ತು ಮರ್ಕೆಂಡೈಸ್ ಒಳಗೊಂಡ ಎಲ್ಲ ರಿವರ್ ಕೊಡುಗೆಗಳ ನೇರ ವೀಕ್ಷಣೆಯನ್ನುನೀಡುವಂತೆ ರೂಪಿಸಿ ವಿನ್ಯಾಸಗೊಳಿಸಲಾಗಿದೆ. 3400 ಚದರ ಅಡಿ ವಿಸ್ತೀರ್ಣ ಹೊಂದಿರುವ ರಿವರ್ ಸ್ಟೋರ್ ಜೆಪಿ ನಗರವ ಪೂರ್ಣ ಪ್ರಮಾಣದ ಸೇವಾ ಕೇಂದ್ರವನ್ನೂ ಹೊಂದಿದೆ. ಸಹ-ಸಂಸ್ಥಾಪಕ ಮತ್ತು ಚೀಫ್ ಎಕ್ಸಿಕ್ಯೂಟಿವ್ ಆಫೀಸರ್ ಅರವಿಂದ್ ಮಣಿ, ‘‘ರಿವರ್ ಸ್ಟೋರ್ ನಮ್ಮ ಗ್ರಾಹಕ-ಪ್ರಥಮ ಕಾರ್ಯತಂತ್ರದಲ್ಲಿ ಪ್ರಮುಖ ಆಯಾಮವಾಗಿದೆ. ನಾವು ಮುಂದಿನ ಎರಡು ವರ್ಷಗಳಲ್ಲಿ 100ಕ್ಕೂ ಹೆಚ್ಚು ನಗರಗಳಿಗೆ ವಿಸ್ತರಿಸುವ ಯೋಜನೆ ಹೊಂದಿದ್ದು ಮಾರಾಟ ಹಾಗೂ ಸೇವೆಯಲ್ಲಿ ಮಹತ್ತರ ಗ್ರಾಹಕರ ಅನುಭವ ದೃಢೀಕರಿಸುತ್ತೇವೆ’’ ಎಂದರು. ಸಹ-ಸಂಸ್ಥಾಪಕ ಮತ್ತು ಚೀಫ್ ಪ್ರಾಡಕ್ಟ್ ಆಫೀಸರ್ ವಿಪಿನ್ ಜಾರ್ಜ್, ‘‘ರಿವರ್ ಸ್ಟೋರ್ ಅನ್ನು ಬ್ರಾಂಡ್ ರಿವರ್ ಕಥೆಯನ್ನು ಹೇಳಲು ಮತ್ತು ನಮ್ಮ ಉತ್ಪನ್ನಗಳನ್ನು ಸ್ಪರ್ಶಿಸಿ ಅನುಭವ ಪಡೆದುಕೊಳ್ಳಲು ವಿನ್ಯಾಸಗೊಳಿಸಲಾಗಿದೆ. ರಿವರ್ ಸ್ಟೋರ್ ನಮ್ಮ ಗ್ರಾಹಕರಿಗೆ ವಿನ್ಯಾಸಗೊಳಿಸಲಾದ ಬ್ರಾಂಡ್ ಅನುಭವದಲ್ಲಿ ಪ್ರಮುಖ ಆಯಾಮವಾಗಲಿದೆ’’ ಎಂದರು. ದಿ ರಿವರ್ ಸ್ಟೋರ್ ಜೆಪಿ ನಗರ, ನಂ.594, ನೆಲಮಹಡಿ, ಶ್ರೀನಿಧಿ ಇನ್ಫಿನಿಟಿ, 15ನೇ ಕ್ರಾಸ್ ರಸ್ತೆ, 1ನೇ ಹಂತ, ಜೆಪಿ ನಗರ, ಬೆಂಗಳೂರು-560078 ಇಲ್ಲಿದೆ. ರಿವರ್ ಬೆಂಗಳೂರಿನ ವಿದ್ಯುಚ್ಚಾಲಿತ ವಾಹನ (ಇವಿ) ಸ್ಟಾರ್ಟಪ್ ಆಗಿದೆ. ವಿನ್ಯಾಸ ಹಾಗೂ ತಂತ್ರಜ್ಞಾನಕ್ಕೆ ಹೆಚ್ಚು ಒತ್ತು ನೀಡಿರುವ ರಿವರ್ ಜನರ ಪ್ರತಿನಿತ್ಯದ ಜೀವನದ ಮೇಲೆ ಸಕಾರಾತ್ಮಕ ಪರಿಣಾಮ ಬೀರುವ ಉತ್ಪನ್ನಗಳನ್ನು ನಿರ್ಮಿಸುತ್ತದೆ.

## ಸೋರೆಕಾಯಿ ಪಾಯಸ

### ಪಾಕ ಶಾಲೆ



### ಮಾಡುವ ವಿಧಾನ

ಸೋರೆಕಾಯಿಯನ್ನು ಸಿಪ್ಪೆ ತೆಗೆದು ಅದನ್ನ ಹೆಚ್ಚಿ ಕುಕ್ಕರಿನಲ್ಲಿ ಬೇಯಿಸಿಕೊಳ್ಳಿ. ನಂತರ, ಬೆಂದ ಮೇಲೆ ಅದನ್ನ ತಣ್ಣಗಾಗುವವರೆಗೂ ಬಿಡಿ. ಬಳಿಕ ಮಿಕ್ಸಿಗೆ ಹಾಕಿ ರುಬ್ಬಿಟ್ಟುಕೊಳ್ಳಿ. ಇನ್ನೊಂದು ಕಡೆ ತೆಂಗಿನಕಾಯಿ ತುರಿಯನ್ನೂ ನುಣ್ಣಗೆ ರುಬ್ಬಿ. ಪಾತ್ರೆಯಲ್ಲಿ ರುಬ್ಬಿದ ಸೋರೆಕಾಯಿ, ತೆಂಗಿನ ತುರಿ, ಹಾಲು ಹಾಕಿ ಕುದಿಸಿ. ಒಂದು ಕುದಿಯ ನಂತರ ಅದಕ್ಕೆ ರುಚಿಗೆ ತಕ್ಕಷ್ಟು ಸಕ್ಕರೆ ಅಥವಾ ಬೆಲ್ಲ ಹಾಕಿ ಮತ್ತೊಮ್ಮೆ ಕುದಿಸಿ, ಏಲಕ್ಕಿ ಪುಡಿ ಸೇರಿಸಿ. ಬಿಸಿ ಬಿಸಿಯಾದ ಸೋರೆಕಾಯಿ ಪಾಯಸ ಸವಿದು ನೋಡಿ.

### ಬೇಕಾಗಿರುವ ಪದಾರ್ಥ

ಒಂದು ಚಿಕ್ಕ ಸೋರೆಕಾಯಿ, ಸಕ್ಕರೆ ಅಥವಾ ಬೆಲ್ಲ ಸಿಹಿಗೆ ತಕ್ಕಷ್ಟು, ತೆಂಗಿನಕಾಯಿ ತುರಿ, ಏಲಕ್ಕಿ-2 ರಿಂದ 3. ಹಾಲು -1 ಕಪ್.

## ಜೈ ಶ್ರೀರಾಮ್ ಎಂದು ಕ್ಷಮೆಯಾಚಿಸಿದ ಲೇಡಿ ಸೂಪರ್ ಸ್ಟಾರ್



ಅನ್ನಪೂರ್ಣಿ ಸಿನಿಮಾ ಶ್ರೀರಾಮನ ಕುರಿತಾದ ಹೇಳಿಕೆಯಿಂದಾಗಿ ವಿವಾದಕ್ಕೆ ಗುರಿಯಾಗಿತ್ತು. ಅಲ್ಲದೆ, ಚಿತ್ರವನ್ನು ಒಟಿಟಿ ಪ್ಲಾಟ್ ಫಾರ್ಮ್ನಿಂದ ತೆಗೆದುಹಾಕಲಾಗಿತ್ತು. ಇದೀಗ ಈ ಕುರಿತು ಕ್ಷಮೆಯಾಚಿಸಿರುವ ಲೇಡಿ ಸೂಪರ್ ಸ್ಟಾರ್ ನಟಿ ನಯನತಾರ, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.'ಜೈ ಶ್ರೀ ರಾಮ್'ಎಂಬ ಬರಹದ ಮೂಲಕ ಪೋಸ್ಟ್ ಅನ್ನು ಪ್ರಾರಂಭಿಸಿರುವ ನಯನತಾರಾ, ಒಂದು ಒಳ್ಳೆಯ ಸಂದೇಶವನ್ನು ಹಂಚಿಕೊಳ್ಳಲು ಪ್ರಯತ್ನಿಸುವಾಗ, ನಾವು ತಿಳಿಯದೆ ಯಾರನ್ನಾದರೂ ನೋಯಿಸಿರಬಹುದು, ಸೆನ್ಸಾರ್ ಮಾಡಿದ ಚಿತ್ರವನ್ನು ಔಖಿಖಿ ಪ್ಲಾಟ್ಫಾರ್ಮ್ನಿಂದ ತೆಗೆದುಹಾಕುವ ಬಗ್ಗೆ ಎಂದಿಗೂ ನಿರೀಕ್ಷಿಸಿರಲಿಲ್ಲ ಎಂದು ಹೇಳಿಕೊಂಡಿದ್ದಾರೆ. ಅಲ್ಲದೆ, ಯಾರ ಭಾವನೆಗಳಿಗೂ ಧಕ್ಕೆ ತರುವ ಪ್ರಯತ್ನ ಮಾಡಿಲ್ಲ ಎಂದು ನಯನತಾರಾ ಸ್ಪಷ್ಟಪಡಿಸಿದ್ದಾರೆ.ನಯನತಾರಾ ಅವರು ಸಮಸ್ಯೆಯ ಗಂಭೀರತೆಯನ್ನು ಸಂಪೂರ್ಣವಾಗಿ ಅರ್ಥಮಾಡಿಕೊಂಡಿದ್ದು, ನಾನು ದೇವರನ್ನು ನಂಬುತ್ತೇನೆ ಮತ್ತು ದೇಶಾದ್ಯಂತ ದೇವಾಲಯಗಳಿಗೆ ನಿಯಮಿತವಾಗಿ ಭೇಟಿ ನೀಡುವ ವ್ಯಕ್ತಿ ಎಂದು ಹೇಳಿದ್ದಾರೆ.. ಇನ್ನು ಮುಂದೆ ನನ್ನ ಕಡೆಯಿಂದ ಇಂತಹ ಸಮಸ್ಯೆಗಳು ಆಗುವುದಿಲ್ಲ ಎಂದು ಹೇಳಿರುವ ನಟಿ, ಯಾರಿಗಾದರೂ ನೋವಾಗಿದ್ದರೆ ಹೃದಯದಾಳದಿಂದ ಕ್ಷಮೆಯಾಚಿಸುತ್ತೇನೆ ಎಂದು ಕ್ಷಮೆ ಕೇಳಿದ್ದಾರೆ. ಅನ್ನಪೂರ್ಣಿ ಚಿತ್ರದ ಮೂಲಕ 'ಹಿಂದೂ ವಿರೋಧಿ' ಅಪಪ್ರಚಾರ ಮಾಡಲಾಗುತ್ತಿದೆ ಎಂದು ಕೆಲವು ಹಿಂದೂ ಸಂಘಟನೆಗಳು ಆರೋಪಿಸಿ ವಿವಾದ ಹುಟ್ಟು ಹಾಕಿದ್ದವು. ಸೋಷಿಯಲ್ ಮೀಡಿಯಾದಲ್ಲಿಯೂ ಈ ಕುರಿತು ಆಕ್ರೋಶ ವ್ಯಕ್ತವಾಗಿತ್ತು. ಇದರ ಬೆನ್ನಲ್ಲೆ ನೆಟ್ಫ್ಲಿಕ್ಸ್ ಕಳೆದ ವಾರ ಈ ಸಿನಿಮಾವನ್ನು ತೆಗೆದುಹಾಕಿತು. ಚಿತ್ರದ ಒಂದು ದೃಶ್ಯದಲ್ಲಿ ಅನ್ನಪೂರ್ಣಿ(ನಯನತಾರ)ಗೆ ಮಾಂಸ ತಿನ್ನುವಂತೆ ಒತ್ತಾಯಿಸಲಾಗುತ್ತದೆ. ಅಲ್ಲದೆ, ಶ್ರೀರಾಮನು ಮಾಂಸಾಹಾರವನ್ನೂ ಸೇವಿಸಿದ್ದನು ಮತ್ತು ಮಾಂಸಾಹಾರವನ್ನು ಸೇವಿಸುವುದು ಪಾಪವಲ್ಲ ಎಂದು ಉಲ್ಲೇಖಿಸಲಾಗಿತ್ತು.




## ಪೈಲ್ಸ್ ನಿವಾರಣೆಗೆ ಮನೆ ಮದ್ದು

### ಹೆಲ್ತ್ ಟಿಪ್ಸ್

ಪೈಲ್ಸ್ ಸಮಸ್ಯೆ ಒಮ್ಮೆ ಕಾಣಿಸಿಕೊಂಡರೆ ಇದಕ್ಕೆ ವೈದ್ಯರ ಚಿಕಿತ್ಸೆ ಅನಿವಾರ್ಯ. ಹೀಗಿದ್ದೂ ಕೆಲವು ಮನೆ ಮದ್ದುಗಳ ಮೂಲಕ ಇದರ ನೋವಿನ ತೀವ್ರತೆಯನ್ನು ಕಡಿಮೆ ಮಾಡಿಕೊಳ್ಳಬಹುದು.

ಪೈಲ್ಸ್ ಸಮಸ್ಯೆ ಇದ್ದವರು ನಾರಿನಂಶ ಹೆಚ್ಚಿರುವ ಆಹಾರಗಳನ್ನು ಹೆಚ್ಚು ಸೇವಿಸುವುದು ಬಹಳ ಮುಖ್ಯ. ತರಕಾರಿಗಳಲ್ಲಿ ಹಾಗೂ ಇಡೀ ಕಾಳುಗಳಲ್ಲಿ ನಾರಿನ ಅಂಶ ಹೆಚ್ಚಾಗಿರುತ್ತದೆ. ಹಾಗಾಗಿ ನಿತ್ಯ ಇವುಗಳನ್ನು ಆಹಾರ ಪದ್ಧತಿಯಲ್ಲಿ ಸೇರಿಸಿಕೊಳ್ಳಿ.

ಅರಿಶಿನಪುಡಿಗೆ ಕಾಲು ಚಮಚ ಸಾಸಿವೆ ಎಣ್ಣೆ, ಮೂರು ಹನಿಗಳಷ್ಟು ಈರುಳ್ಳಿ ರಸವನ್ನು ಬೆರೆಸಿ. ಈ ಪೇಸ್ಟನ್ನು ರಾತ್ರಿ ಮಲಗುವ ಸಂದರ್ಭದಲ್ಲಿ ಪೈಲ್ಸ್ ಉಂಟಾಗಿರುವ ಜಾಗಕ್ಕೆ ಹಚ್ಚಿ. ಇದರಿಂದ ನೋವು ಕಡಿಮೆಯಾಗುತ್ತದೆ. ಅಲೋವೆರಾ ಜೆಲ್ ಅನ್ನು ಇದೇ ರೀತಿ ಹಚ್ಚಿಕೊಳ್ಳಬಹುದು.

ನಿತ್ಯ ಆಹಾರದಲ್ಲಿ ಮೊಳಕೆ ಬರಿಸಿದ ಕಾಳುಗಳನ್ನು ಸೇವಿಸಿ. ಮೂಲಂಗಿ, ಹಸಿರು ಸೊಪ್ಪುಗಳನ್ನು ವಾರದಲ್ಲಿ ಮೂರು ಬಾರಿಯಾದರೂ ಮರೆಯದೆ ತಿನ್ನಿ. ಸಾಕಷ್ಟು ನೀರು ಕುಡಿಯಿರಿ. ಮಲಬದ್ಧತೆ ಉಂಟುಮಾಡುವ ಆಹಾರದಿಂದ ದೂರವಿರಿ.



## ಬೆಂಗಳೂರಿನಲ್ಲಿ BMW ಗಾಲ್ಫ್ ಕಪ್



BMW ಇಂಡಿಯಾ ತನ್ನ ಅತ್ಯಂತ ದೊಡ್ಡ ಅಮೆಚೂರ್ ಗಾಲ್ಫ್ ಟೂರ್ನಮೆಂಟ್ ನ ಭಾರತೀಯ ಆವೃತ್ತಿ- BMW ಗಾಲ್ಫ್ ಕಪ್ 2024 ಬೆಂಗಳೂರಿನಲ್ಲಿ ಪ್ರಾರಂಭವಾಗಿದೆ. ಈ ಅತ್ಯಂತ ನಿರೀಕ್ಷೆಯ ಗಾಲ್ಫ್ ಟೂರ್ನಮೆಂಟ್ ಚೆನ್ನೈ, ಬೆಂಗಳೂರು, ಹೈದರಾಬಾದ್, ಪುಣೆ, ಮುಂಬೈ, ಅಹಮದಾಬಾದ್, ನೊಯಿಡಾ, ಕೊಲ್ಕತಾ ಮತ್ತು ಗುರ್ ಗಾಂವ್ ಗಳ ಆಕರ್ಷಕ ಗಾಲ್ಫ್ ಕೋರ್ಸ್ ಗಳಲ್ಲಿ ನಡೆಯಲಿದೆ. ಪ್ರಾದೇಶಿಕ ಟೂರ್ನಮೆಂಟ್ ಗಳ ವಿಜೇತರು 2024 ರಲ್ಲಿ ನಂತರ ನಡೆಯುವ ರಾಷ್ಟ್ರೀಯ ಫೈನಲ್ಸ್ ನಲ್ಲಿ ಸ್ಪರ್ಧಿಸಲಿದ್ದಾರೆ. BMW ಗಾಲ್ಫ್ ಕಪ್ ವಿಶ್ವದ ಅತ್ಯಂತ ದೊಡ್ಡ ಅಮೆಚೂರ್ ಗಾಲ್ಫ್ ಟೂರ್ನಮೆಂಟ್ ಸರಣಿಯಾಗಿದ್ದು ಇದು ಇಪ್ಪತ್ತೈದು ವರ್ಷಗಳಿಗಿಂತ ಹೆಚ್ಚು ವರ್ಷಗಳಿಂದ ನಡೆಯುತ್ತಿದ್ದು ಈ ಬ್ರಿಟಿಷರ ಉಪಕ್ರಮವು ಅಂತಾರಾಷ್ಟ್ರೀಯ ಮಟ್ಟಕ್ಕೆ ಮುನ್ನಡೆಯುವ ಮುನ್ನ ತನ್ನದೇ ಆಗಿ ನಡೆಯುತ್ತಿತ್ತು. ಈ ಟೂರ್ನಮೆಂಟ್ ಯು.ಕೆ.ಯಲ್ಲಿ ಃಒಘಾ ಆಹ್ವಾನ ಟೂರ್ನಮೆಂಟ್ ಆಗಿ ಪ್ರಾರಂಭವಾಯಿತು. ಇದು ಈಗ ಜಾಗತಿಕ

ಸರಣಿಯಾಗಿ ಬೆಳೆದಿದ್ದು 1,000 ಅರ್ಹತೆಯ ಟೂರ್ನಮೆಂಟ್ ಗಳಲ್ಲಿ 50 ದೇಶಗಳ 100,000 ಆಟಗಾರರನ್ನು ಒಳಗೊಂಡಿರುತ್ತದೆ. ಪ್ರತಿ ದೇಶದ ಶ್ರೇಷ್ಠ ಆಟಗಾರರು ಇದರ ಪ್ರಮುಖಾಂಶವಾದ BMW ಗಾಲ್ಫ್ ಕಪ್ ವರ್ಲ್ಡ್ ಫೈನಲ್ ಗೆ ಅರ್ಹತೆ ಪಡೆಯುತ್ತಾರೆ. ಈ ವಿಶೇಷವಾದ, ಆಹ್ವಾನಿತರಿಗೆ ಮಾತ್ರದ ಕಾರ್ಯಕ್ರಮ BMW ಗಾಲ್ಫ್ ಕಪ್ 2024 ದೇಶದ ಮಾನ್ಯತೆ ಪಡೆದ ಗಾಲ್ಫ್ ಕ್ಲಬ್ ಗಳ ಸದಸ್ಯರಿಗೆ ಮುಕ್ತವಾಗಿರುತ್ತದೆ. ಟೂರ್ನಮೆಂಟ್ ಗಳು ಆಯಾ ಸ್ಥಳೀಯ ಗಾಲ್ಫ್ ಕ್ಲಬ್ ನಿಯಮಗಳಿಗೆ ಅನುಗುಣವಾಗಿ ನಡೆಯುತ್ತದೆ. ಲಾಯಲ್ಟಿ ಪ್ರೋಗ್ರಾಮ್ ಃಒಫಾ ಗ್ರಾಹಕರಿಗೆ ರಿವಾರ್ಡ್ ಗಳನ್ನು ನೀಡುತ್ತಿದ್ದು ಅವರಿಗೆ ವಿಶ್ವದ ಅತ್ಯಂತ ದೊಡ್ಡ ಅಮೆಚೂರ್ ಗಾಲ್ಫ್

ಟೂರ್ನಮೆಂಟ್ ಗಳಲ್ಲಿ ಒಂದಕ್ಕೆ ಅರ್ಹತೆ ಪಡೆಯುವ ಅವಕಾಶ ನೀಡುತ್ತದೆ. ಃಒಫಾ ಇಂಡಿಯಾ ಲೀಡರ್ಸ್ ಈ ಟೂರ್ನಮೆಂಟ್ ನಲ್ಲಿ ಭಾಗವಹಿಸಲು ಆಸಕ್ತಿ ಹೊಂದಿರುವ BMW ಮಾಲೀಕರಲ್ಲಿ ಅಮೆಚೂರ್ ಗಾಲ್ಫರ್ ಗಳನ್ನು ಗುರುತಿಸುತ್ತದೆ. ಭಾರತ ಗಾಲ್ಫ್ ಕಪ್ 2024ರ ವರ್ಲ್ಡ್ ಫೈನಲ್ ನಲ್ಲಿ 50 ಭಾಗವಹಿಸುವ ದೇಶಗಳಲ್ಲಿ ಒಂದಾಗಿದ್ದು ಇದು ಜಾಗತಿಕ ಸರಣಿಯಾಗಿದ್ದು 100,000 ಆಟಗಾರರನ್ನು ಒಳಗೊಂಡ 1,000 ಕ್ವಾಲಿಫೈಯಿಂಗ್ ಟೂರ್ನಮೆಂಟ್ ಗಳನ್ನು ಹೊಂದಿದೆ. BMW ಗಾಲ್ಫ್ ಕಪ್ ಅಮೆಚೂರ್ ಗಾಲ್ಫ್ ಟೂರ್ನಮೆಂಟ್ ಸರಣಿಯಾಗಿದ್ದು ಗ್ರಾಹಕರು, ಸಂಭವನೀಯರಿಗೆ ಮತ್ತು ಅಭಿಪ್ರಾಯ ಮೂಡಿಸುವ ನಾಯಕರಿಗೆ ವಿನ್ಯಾಸಗೊಳಿಸಲಾಗಿದೆ ಮತ್ತು ವಿಶೇಷ ಸಾಮಾಜಿಕ ಸಂವಹನದ ಸರಿಯಾದ ಮಿಶ್ರಣ ನೀಡುತ್ತದೆ. BMW ಗಾಲ್ಫ್ ಕಪ್ ಮೂರು ವಿಭಾಗಗಳನ್ನು ಹೊಂದಿದೆ, ಂ (12ರವರೆಗಿನ ಹ್ಯಾಂಡಿಕ್ಯಾಪ್ಸ್ ಗೆ), ಃ (13-28ರ ಹ್ಯಾಂಡಿಕ್ಯಾಪ್ಸ್ ಗೆ) ಮತ್ತುಲೇಡೀಸ್ ಕ್ಯಾಟಗರಿ (28ರವರೆಗಿನ ಹ್ಯಾಂಡಿಕ್ಯಾಪ್ಸ್ ಗೆ). ವೈಯಕ್ತಿಕ ಹ್ಯಾಂಡಿಕ್ಯಾಪ್ ವಿಭಾಗಗಳ ವಿಜೇತರು, ರನ್ನರ್-ಅಪ್ ಮತ್ತುದ್ವಿತೀಯ ರನ್ನರ್ ಅಪ್ ನ್ಯಾಷನಲ್ ಫೈನಲ್‌ಗೆ ಅರ್ಹತೆ ಪಡೆಯುತ್ತಾರೆ. ನ್ಯಾಷನಲ್ ಫೈನಲ್ ನಲ್ಲಿ ಪ್ರತಿ ಮೂರು ಹ್ಯಾಂಡಿಕ್ಯಾಪ್ ವಿಭಾಗಗಳ ವಿಜೇತರು ಃಒಫಾಗಾಲ್ಫ್ ಕಪ್ ನ ವರ್ಲ್ಡ್ ಫೈನಲ್ ನಲ್ಲಿ ಭಾಗವಹಿಸಲು ಅರ್ಹತೆ ಪಡೆಯುತ್ತಾರೆ.

## ಕೊತ್ತಂಬರಿ ಸೊಪ್ಪಿನ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್

ಬೆಳ್ಳಗಾಗಬೇಕೆಂಬುದು ಬಹುತೇಕರ ಬಯಕೆ. ಅದಕ್ಕಾಗಿ ಇನ್ನಿಲ್ಲದ ಪ್ರಯತ್ನ ಮಾಡುವವರನ್ನು ನೋಡಿರುತ್ತೀರಿ. ದುಬಾರಿ ಕ್ರೀಮ್ ಗಳಿಗೆ ದುಡ್ಡು ಸುರಿದು ಫಲಿತಾಂಶ ಸಿಗದೆ ಕೈ ಸುಟ್ಟುಕೊಂಡಿರುತ್ತಾರೆ. ಕೊತ್ತೊಂಬರಿ ಸೊಪ್ಪಿನ ಫೇಸ್ ಪ್ಯಾಕ್ ಮಾಡಿಕೊಂಡರೆ ಹೊಳೆಯುವ ಮುಖ ಪಡೆದುಕೊಳ್ಳಬಹುದು. ನೈಸರ್ಗಿಕವಾಗಿ ಸಿಗುವ ಈ ಸೊಪ್ಪಿನಿಂದ ಮನೆಯಲ್ಲೇ ಫೇಸ್ ಪ್ಯಾಕ್ ತಯಾರಿಸಬಹುದು. ಎಲ್ಲ ವಿಧದಿಂದ ಕೊತ್ತಂಬರಿ ಸೊಪ್ಪನ್ನು ಬಳಸಬಹುದು. ಆದರೆ ಸೂಕ್ಷ್ಮ ವಿಧದ ಚರ್ಮ ಹೊಂದಿದವರು ಇದನ್ನು ಬಳಸುವಾಗ ಎಚ್ಚರ ವಹಿಸಬೇಕು. ಮೊಡವೆ ಕಪ್ಪುಕಲೆ ಮತ್ತು ಸೋಂಕುಗಳಿಗೆ ಈ ಕೊತ್ತೊಂಬರಿ ಸೊಪ್ಪು ಲಾಭದಾಯಕ. ಕೊತ್ತಂಬರಿ ಸೊಪ್ಪನ್ನು ಚೆನ್ನಾಗಿ ತೊಳೆದು ಮಿಕ್ಸಿಗೆ ಹಾಕಿ ನುಣ್ಣಗೆ ರುಬ್ಬಿ. ಬಳಿಕ ಅದಕ್ಕೆ 5 ರಿಂದ 6 ಚಮಚ ಟೊಮೊಟೊ ರಸ ಮತ್ತು ನಿಂಬೆರಸ ಹಾಗೂ ಅರ್ಧ ಚಮಚ ಮುಲ್ತಾನಿ ಮಿಟ್ಟಿಯನ್ನು ಸೇರಿಸಿ ಚೆನ್ನಾಗಿ ಕಲಸಿ ಫೇಸ್ ಪ್ಯಾಕ್ ತಯಾರಿಸಿ. ಅದನ್ನು ಮುಖಕ್ಕೆ ಹಚ್ಚಿಕೊಳ್ಳಿ. ಅದು ಒಣಗಿದ ಬಳಿಕ ತಣ್ಣೀರಿನಿಂದ ತೊಳೆಯಿರಿ. ಹೀಗೆ ವಾರದಲ್ಲಿ ಒಮ್ಮೆ ಮಾಡುವುದರಿಂದ ಹೊಳೆಯುವ ತ್ವಚೆ ನಿಮ್ಮದಾಗುತ್ತದೆ.



## ರಾಶಿ ಭವಿಷ್ಯ

ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆಧ್ಯಾತ್ಮಿಕ ಚಿಂತನೆಗಳು, ಧರ್ಮ ಕಾರ್ಯಗಳಲ್ಲಿ ಆಸಕ್ತಿ, ದೂರ ಪ್ರಯಾಣ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ವೃಷಭ:** ಸ್ಥಿರಾಸ್ತಿ ವಾಹನದಿಂದ ತೊಂದರೆಗಳು, ಮಾನಸಿಕ ಒತ್ತಡ ಸೋಲು ನಷ್ಟ, ವಿದ್ಯಾಭ್ಯಾಸದಲ್ಲಿ ಅಡೆತಡೆಗಳು, ಉದ್ಯೋಗ ಒತ್ತಡಗಳು.

**ಮಿಥುನ:** ಪ್ರಯಾಣ ಮಾಡುವಿರಿ, ದಾಂಪತ್ಯ ಕಲಹಗಳು, ಅಹಂಭಾವದ ನಡವಳಿಕೆ, ಧೈರ್ಯದಿಂದ ಮುನ್ನುಗ್ಗುವ ದಿವಸ.

**ಕಟಕ:** ಉದ್ಯೋಗ ಅನುಕೂಲ, ನೇರ ನಡೆ ನುಡಿಗಳು, ಷೇರು ವ್ಯವಹಾರದಲ್ಲಿ ಸಮಸ್ಯೆ, ವಿದ್ಯಾಭ್ಯಾಸದಲ್ಲಿ ಅಡೆತಡೆ.

**ಸಿಂಹ:** ಆರ್ಥಿಕ ಅನುಕೂಲ, ಸಂತಾನದಿಂದ ಅನುಕೂಲ, ಮೋಜು ಮಸ್ತಿಯಿಂದ ಸಮಸ್ಯೆ, ದೈವಿಕ ಆಚರಣೆ.

**ಕನ್ಯಾ:** ಮಾನಸಿಕ ಒತ್ತಡಗಳು, ಸ್ಥಿರಾಸ್ತಿ ವಾಹನಕ್ಕಾಗಿ ಖರ್ಚು, ಧರ್ಮಕಾರ್ಯದಲ್ಲಿ ನಿರಾಸಕ್ತಿ, ಗುಪ್ತ ಚಟುವಟಿಕೆಗಳು.

**ತುಲಾ:** ಬಂಧುಗಳಿಂದ ಲಾಭ, ಪತ್ರ ವ್ಯವಹಾರದಲ್ಲಿ ಪ್ರಗತಿ, ಪ್ರಯಾಣದಲ್ಲಿ ಕಾರ್ಯಜಯ, ಜ್ಞಾನ ಸಂಪಾದನೆಯ ಆಸಕ್ತಿ.

**ವೃಶ್ಚಿಕ:** ಉದ್ಯೋಗದಲ್ಲಿ ಅನುಕೂಲ, ರಾಜಕಾರಣಿಗಳಿಂದ ಅನುಕೂಲ, ಆರ್ಥಿಕ ಪ್ರಗತಿ, ಮಾತಿನಿಂದ ತೊಂದರೆ.

**ಧನಸ್ಸು:** ದೂರದೃಷ್ಟಿಯ ಯೋಜನೆ, ಆಧ್ಯಾತ್ಮಿಕ ಚಟುವಟಿಕೆ, ಉನ್ನತ ವಿದ್ಯೆಗೆ ಉತ್ತಮ ಅವಕಾಶ, ಸರ್ಕಾರದಿಂದ ಅನುಕೂಲ.

**ಮಕರ:** ಮಾಂಗಲ್ಯ ದೋಷಗಳು, ಕೋರ್ಟ್ ಕೇಸ್ ಚಿಂತೆ, ಭವಿಷ್ಯದ ಭರವಸೆ ಕಳೆದುಕೊಳ್ಳುವಿರಿ, ಸಂಗಾತಿಯೊಂದಿಗೆ ವೈರತ್ವ.

**ಕುಂಭ:** ಸಂಗಾತಿಯಿಂದ ಲಾಭ, ಶುಭಕಾರ್ಯ ಪ್ರಯತ್ನ, ನೇರ ನಡೆ ನುಡಿಯಿಂದ ವಿರೋಧಗಳು, ವ್ಯವಹಾರದಲ್ಲಿ ಇರುಸು ಮುರುಸು.

**ಮೀನ:** ಉದ್ಯೋಗದಲ್ಲಿ ಅನುಕೂಲ, ವ್ಯಾಧಿಗಳಿಂದ ಗುಣಮುಖ, ಶತ್ರುಗಳೊಂದಿಗೆ ಜಯ, ಸರ್ಕಾರಿ ಕೆಲಸದಲ್ಲಿ ಪ್ರಗತಿ.

## ಪೆಂಗ್ವಿನ್ ಜಾಗೃತಿ ದಿನ




ಕಪ್ಪು ಬಿಳಿ ಬಣ್ಣದ ಹಾರಲಾಗದ ಜಲ ಪಕ್ಷಿ ಪೆಂಗ್ವಿನ್. ನೋಡಲು ಮುದ್ದಾಗಿರುವ ಪೆಂಗ್ವಿನ್ ಪಕ್ಷಿಗಳು ನಡೆಯುವುದೂ ಚೆಂದ. ಅವು ಹಕ್ಕಿ ಕುಟುಂಬದ ಭಾಗವೆಂದು ಪರಿಗಣಿಸಿದ್ದರೂ ಅವುಗಳಿಗೆ ಹಾರಲು ಸಾಧ್ಯವಿಲ್ಲ. ಅವು ತಮ್ಮ ರೆಕ್ಕೆಗಳನ್ನು ನೀರಿನೊಳಗೆ ಈಜಲು ಫ್ಲಿಪ್ಪರ್ಗಳಾಗಿ ಬಳಸುತ್ತವೆ ಹಾಗೂ ಅದ್ಭುತವಾಗಿ ಈಜುತ್ತವೆ. ಜೆಂಟೋ ಎಂಬ ಪೆಂಗ್ವಿನ್ ಗಂಟೆಗೆ 35 ಕಿಲೋಮೀಟರ್ ವೇಗದಲ್ಲಿ ಈಜಬಲ್ಲದು. ಪೆಂಗ್ವಿನ್ಗಳು ದಕ್ಷಿಣಾರ್ಧ ಗೋಳದಲ್ಲಿ ಅದರಲ್ಲೂ ಅಂಟಾರ್ಟಿಕಾದಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ, ನ್ಯೂಜಿಲ್ಯಾಂಡ್, ಚಿಲಿ, ಪೆರು, ಫಾಕ್ಲ್ಯಾಂಡ್ ದ್ವೀಪಗಳು ಮತ್ತು ಗ್ಯಾಲಪಗೋಸ್ ದ್ವೀಪಗಳಲ್ಲಿಯೂ ಇವು ವಾಸಿಸುತ್ತವೆ. ಪೆಂಗ್ವಿನ್ಗಳು ತಮ್ಮ ಜೀವಿತಾವಧಿಯ ಸುಮಾರು ಅರ್ಧಭಾಗವನ್ನು ಭೂಮಿಯ ಮೇಲೆ ಕಳೆದರೆ, ಉಳಿದರ್ಧ ಭಾಗವನ್ನು ನೀರಿನಲ್ಲಿ ಕಳೆಯುತ್ತವೆ. ಪೆಂಗ್ವಿನ್ಗಳಲ್ಲಿ ಹಲವಾರು ಪ್ರಭೇದಗಳಿವೆ. ಹವಾಮಾನ ವೈಪರಿತ್ಯದಿಂದಾಗಿ ಪೆಂಗ್ವಿನ್ ಆವಾಸ ಸ್ಥಾನಗಳು ಕಣ್ಮರೆಯಾಗುತ್ತಿದೆ. ಇದರಿಂದ ಅಪರೂಪದ ಪೆಂಗ್ವಿನ್ಗಳು ಇಂದು ಅಳಿವಿನಂಚಿನಲ್ಲಿದೆ. ಪೆಂಗ್ವಿನ್ ಆವಾಸಸ್ಥಾನಗಳ ಸಂರಕ್ಷಣೆಗೆ ಅಂತಾರಾಷ್ಟ್ರೀಯ ಗಮನವನ್ನು ತರುವ ಉದ್ದೇಶದಿಂದ ಜನವರಿ 20ರಂದು ಪೆಂಗ್ವಿನ್ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ. ಈ ದಿನವನ್ನು ಅನೇಕ ಖಾಸಗಿ ಸಂಘ ಸಂಸ್ಥೆಗಳು ಪೆಂಗ್ವಿನ್ ಸಂರಕ್ಷಿಸುವಲ್ಲಿ ಮಾನವ ಚಟುವಟಿಕೆಯು ಹೇಗೆ ಪರಿಣಾಮಕಾರಿಯಾಗಿದೆ ಎಂದು ತಿಳಿಸಲು, ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಹಲವಾರು ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತದೆ. ಪೆಂಗ್ವಿನ್ಗಳ ಸಂಖ್ಯೆ ಕುಗ್ಗಲು ನಿಜವಾದ ಕಾರಣ ಇನ್ನೂ ತಿಳಿದುಬಂದಿಲ್ಲವಾದರೂ, ಪೆಂಗ್ವಿನ್ಗಳ ಸಂಖ್ಯೆ ಭೂಮಿಯಿಂದ ಕಣ್ಮರೆಯಾಗುತ್ತಿರುವ ರೀತಿ ಆತಂಕಕಾರಿಯಾಗಿದೆ. ಹವಾಮಾನ ಬದಲಾವಣೆ, ಜಾಗತಿಕ ತಾಪಮಾನ ಮತ್ತು ಅವುಗಳ ಆವಾಸಸ್ಥಾನಕ್ಕಾಗಿ ಬದಲಾಗುತ್ತಿರುವ ಪರಿಸರಗಳು ಕೆಲವು ಕಾರಣಗಳಾಗಿವೆ. 1972 ರಲ್ಲಿ, ಕ್ಯಾಲಿಫೋರ್ನಿಯಾದ ಅಲಮೊಗೊರ್ಡೊದ ಗೆರ್ರಿ, ವ್ಯಾಲೇಸ್ ಅವರ ಪತ್ನಿ ಅಲೆಟಾ ಅವರ ಕ್ಯಾಲೆಂಡರ್ನಲ್ಲಿ ಪೆಂಗ್ವಿನ್ ಜಾಗೃತಿ ದಿನದ ಘಟನೆಯನ್ನು ಬರೆದರು. ಅಂದಿನಿಂದ, ಈ ದಿನವನ್ನು ಆಚರಿಸಲಾಗುತ್ತದೆ.

# ಕಾಡು ಆನೆಗಳ ಸೆರೆ ನಿಲ್ಲಿಸಲು ಒತ್ತಾಯ

**ಬೆಂಗಳೂರು:** ಕಾಡು ಆನೆಗಳನ್ನು ಸೆರೆಹಿಡಿಯುವುದನ್ನು ಕರ್ನಾಟಕ ಸರ್ಕಾರ ತಕ್ಷಣವೇ ನಿಲ್ಲಿಸಬೇಕು ಮತ್ತು ಸಮಗ್ರ ಕ್ರಿಯಾ ಯೋಜನೆಯನ್ನು ಜಾರಿಗೆ ತರಬೇಕು ಎಂದು ಸೆಂಟರ್ ಫಾರ್ ರಿಸರ್ಚ್ ಆನ್ ಆನಿಮಲ್ ರೈಟ್ಸ್ (CRAR) ಮತ್ತು ಫೆಡರೇಶನ್ ಆಫ್ ಇಂಡಿಯನ್ ಅನಿಮಲ್ ಪ್ರೊಟೆಕ್ಷನ್ ಆರ್ಗನೈಸೇಷನ್ಸ್ (FIAPO) ಒತ್ತಾಯಿಸಿದೆ. ಮಾನವ–ಆನೆ ಸಂಘರ್ಷಕ್ಕೆ ಪರಿಹಾರವಾಗಿ ಪರ್ಯಾಯ ಕ್ರಮದ ಬಗ್ಗೆ ಚಿಂತಿಸುವಂತೆ ಸೂಚಿಸಿದೆ.

ಹಾಸನ–ಕೊಡಗು ಪ್ರದೇಶದಲ್ಲಿನ ಮಾನವ–ಆನೆ ಸಂಘರ್ಷಕ್ಕೆ ಪರಿಹಾರವಾಗಿ ಕರ್ನಾಟಕ ಅರಣ್ಯ ಇಲಾಖೆಯು 40–50 ಕಾಡು ಆನೆಗಳನ್ನು ಸೆರೆಹಿಡಿಯಲು ಯೋಜಿಸಿದೆ ಎಂದು ಕಾರ್ಯಕರ್ತರು ವರದಿ ಮಾಡಿದ ಹೊಸ ಮಾಹಿತಿಯ ಹಿನ್ನೆಲೆಯಲ್ಲಿ ಈ ಮನವಿ ಇಟ್ಟಿದೆ. ಸುಮಾರು 17 ಆನೆಗಳನ್ನು ಸೆರೆಹಿಡಿದು ಅರಣ್ಯ ಶಿಬಿರಗಳಿಗೆ ಕಳುಹಿಸುವ ಸಾಧ್ಯತೆಯಿದೆ ಮತ್ತು ಹೆಚ್ಚಿನ ಸಂಖ್ಯೆಯ ಹೆಣ್ಣು ಆನೆಗಳನ್ನು ಸೆರೆಹಿಡಿದು ಸ್ಥಳಾಂತರಿಸುವ ಸಾಧ್ಯತೆಯ ಕುರಿತು ಮೂಲ ವರದಿಗಳು ಬಹಿರಂಗಪಡಿಸಿವೆ.

''ಕಾಡಿನಿಂದ ಆನೆಗಳನ್ನು ಸೆರೆಹಿಡಿಯುವುದು, ವನ್ಯಜೀವಿ ಸಂರಕ್ಷಣಾ ತಿದ್ದುಪಡಿ ಕಾಯ್ದೆಯ 11 ನೇ ಪರಿಚ್ಛೇದದಲ್ಲಿ ನೀಡಿರುವ ಅಸಾಧಾರಣ ಅಧಿಕಾರದ ಬಳಕೆ, ಮುಗ್ಧ ಕಾಡು ಆನೆಗಳ (ಸಂರಕ್ಷಿತ ವೇಳಾಪಟ್ಟಿ I ಜಾತಿ)



ಸಾವಿಗೆ ಕಾರಣವಾಗುತ್ತದೆ ಮತ್ತು ಇದನ್ನು ತಕ್ಷಣವೇ ನಿಲ್ಲಿಸಬೇಕು,'' ಎಂದು ವಕೀಲ–ಕಾರ್ಯಕರ್ತ ಮತ್ತು ಅಖಂಖ ಸಂಸ್ಥಾಪಕ ಅಲೋಕ್ ಹಿಸರ್ವಾಲಾ ಹೇಳಿದ್ದಾರೆ. ಕರ್ನಾಟಕವು ದೇಶದಲ್ಲೇ ಅತಿ ಹೆಚ್ಚು ಸೆಕ್ಷನ್ 11 ರಲ್ಲಿ ಕಾಡು ಆನೆಗಳನ್ನು ಸೆರೆಹಿಡಿಯುತ್ತದೆ. ಮಾನವ–ಆನೆ ಸಂಘರ್ಷಕ್ಕೆ ಪರಿಹಾರವಾಗಿ ಸೆರೆ ಹಿಡಿಯುವ ಕ್ರಮ ಅವೈಜ್ಞಾನಿಕ, ಪರಿಣಾಮಕಾರಿಯಲ್ಲದ ಕಾರಣ ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಕಾಡಾನೆಗಳ ಸಾವಿಗೆ ಕಾರಣವಾಗಿದೆ. 2023 ರಲ್ಲಿ ಸೆರೆಹಿಡಿಯುವ ಸಮಯದಲ್ಲಿ ಮೂರು ಆನೆಗಳು ಸಾವನ್ನಪ್ಪಿವೆ. ಈ ಸೆರೆಗಳು ಪ್ರಶ್ನಾತೀತವಾಗಿವೆ ಮತ್ತು ಇದರಿಂದ ಧೈರ್ಯಗೊಂಡ ಕರ್ನಾಟಕ ಸರ್ಕಾರವು ಕಾಡು ಆನೆಗಳನ್ನು ನಿರ್ಭಯವಾಗಿ ಸೆರೆಹಿಡಿಯುವ ಹಾದಿಯಲ್ಲಿ ಮುಂದುವರಿಯುತ್ತಿದೆ ಎಂದು ಅಖಂಖ ಖಂಡಿಸಿದೆ. ಹಲವಾರು ವೈಜ್ಞಾನಿಕ ಅಧ್ಯಯನಗಳು ಸೆರೆಹಿಡಿಯುವಿಕೆ ಮತ್ತು ಸ್ಥಳಾಂತರವು ಕಾಡಾನೆಗಳ ಹಾವಳಿ ತಡೆಹಿಡಿಯಲು ಕಾರ್ಯತಂತ್ರವಾಗಿ ಕಾರ್ಯನಿರ್ವಹಿಸುವುದಿಲ್ಲ ಎಂದು ತೋರಿಸಿವೆ. ಆನೆಗಳು ಯಾವಾಗಲೂ ತಮ್ಮ ಮನೆಯ ವ್ಯಾಪ್ತಿಗೆ ಹಿಂತಿರುಗುತ್ತವೆ. ಸೆರೆಹಿಡಿಯುವಿಕೆ ಸಾಮಾನ್ಯ ಜನರನ್ನು ಸಮಾಧಾನಪಡಿಸಲು ಹೆಚ್ಚು ಸಂವೇದನಾಶೀಲ ಮಾರ್ಗವಾಗಿದೆ ಆದರೆ ಶಾಂತಿಯುತ ಸಹಬಾಳ್ವೆಯನ್ನು ಇದು ಖಚಿತಪಡಿಸುವುದಿಲ್ಲ. ಅರಣ್ಯ ಭೂಮಿಯ ಮೇಲಿನ ವಾಣಿಜ್ಯ ಅತಿಕ್ರಮಣಗಳು, ವಿಶೇಷವಾಗಿ ಆನೆ ಕಾರಿಡಾರ್, ಮಾನವ ಆನೆ ಸಂಘರ್ಷಕ್ಕೆ ಪ್ರಮುಖ ಕಾರಣವಾಗಿದೆ. ಹುಲಿ ಸಂರಕ್ಷಿತ ಪ್ರದೇಶಗಳಂತೆ ಆನೆ ಮೀಸಲು ಪ್ರದೇಶಗಳನ್ನು ಕಾನೂನುಬದ್ಧವಾಗಿ ಸಂರಕ್ಷಿತ ಪ್ರದೇಶಗಳೆಂದು ಗುರುತಿಸಬೇಕು. 2013 ರ ಹೈಕೋರ್ಟ್ ಆದೇಶದ ನಂತರ 10 ವರ್ಷಗಳ ನಂತರವೂ, ಕರ್ನಾಟಕ ಅರಣ್ಯ ಕಾಯ್ದೆಯ ಸೆಕ್ಷನ್ 17 ರ ಅಡಿಯಲ್ಲಿ ಆನೆ ಕಾರಿಡಾರ್ಗಳೊಳಗಿನ ಅಧಿಸೂಚಿತ ಅರಣ್ಯ ಪ್ರದೇಶಗಳನ್ನು ಮೀಸಲು ಅರಣ್ಯ ಎಂದು ಘೋಷಿಸಲು ಸರ್ಕಾರ ವಿಫಲವಾಗಿದೆ ಎಂದು ಫೆಡರೇಶನ್ ಆಫ್ ಇಂಡಿಯನ್ ಆನಿಮಲ್ ಪ್ರೊಟೆಕ್ಷನ್ ಆರ್ಗನೈಸೇಶನ್ಸ್ ಸಿಇಒ ಭಾರತಿ ರಾಮಚಂದ್ರನ್ ಹೇಳಿದ್ದಾರೆ.

## 1818ನೇ ಇಸವಿಯ ಸೀತಾರಾಮ ನಾಣ್ಯ ಪತ್ತೆ




**ಚಿಕ್ಕಮಗಳೂರು:** ರಾಮ, ಸೀತೆ, ಲಕ್ಷ್ಮಣ, ಹನುಮ ಇರುವ 50 ಗ್ರಾಂ ತೂಕವಿರುವ ಹಳೆಯ ಕಾಲದ ನಾಣ್ಯವೊಂದು ಪತ್ತೆಯಾಗಿದೆ. ಚಿಕ್ಕಮಗಳೂರಿನ ಬಾಳೆಹೊನ್ನೂರಿನ ಸುನೀಲ್ ಎಂಬುವರ ಮನೆಯಲ್ಲಿ ಈ ನಾಣ್ಯ ಸಿಕ್ಕಿದೆ. ಇಂದಿಗೂ ನಾಣ್ಯಕ್ಕೆ ಪೂಜೆ ನಡೆಯುತ್ತಿದೆ. 1818ನೇ ಇಸವಿಯ ರಾಮ, ಸೀತೆ, ಲಕ್ಷ್ಮಣ ಹಾಗೂ ಆಂಜನೇಯನ ನಾಣ್ಯ ಇದಾಗಿದ್ದು, ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿ ಆಡಳಿತದ ನಾಣ್ಯವಾಗಿದೆ. ನಾಣ್ಯದ ಒಂದು ಭಾಗದಲ್ಲಿ ರಾಮಸೀತೆಯ ಭಾವಚಿತ್ರವಿದ್ದು, ಮತ್ತೊಂದು ಭಾಗದಲ್ಲಿ ಯಕೆ ಆಫ್ ಅಣ್ಣ ಎಂದು ನಮೂದಿಸಲಾಗಿದೆ. ಸುನೀಲ್ ಕುಟುಂಬ ಅನಾದಿ ಕಾಲದಿಂದಲೂ ನಾಣ್ಯವನ್ನ ರಕ್ಷಣೆ ಮಾಡಿ ಪೂಜೆ ಮಾಡಿಕೊಂಡು ಬರರುತ್ತಿದ್ದಾರೆ. ಹಾಗಾಗಿ ಆ ನಾಣ್ಯಕ್ಕೆ ಸುಮಾರು 206 ವರ್ಷವಾಗಿದೆ.

## 22ರಂದು ಜಾಮಿಯಾ ಇಸ್ಲಾಮಿಯಾ ವಿವಿಗೆ ರಜೆ



**ನವದೆಹಲಿ:** ದೆಹಲಿಯ ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾನಿಲಯವು ಅಯೋಧ್ಯೆಯಲ್ಲಿ ರಾಮ್ ಲಲ್ಲಾ ಪ್ರಾಣ್ ಪ್ರತಿಷ್ಠಾ ನಿಮಿತ್ತ ಜನವರಿ 22 ರಂದು ಮಧ್ಯಾಹ್ನ 2:30 ರವರೆಗೆ ಅರ್ಧ ದಿನ ಮುಚ್ಚಿರುತ್ತದೆ. JMI ವಿಶ್ವವಿದ್ಯಾನಿಲಯ ಮತ್ತು ಜಾಮಿಯಾ ಶಾಲೆಗಳನ್ನು ಒಳಗೊಂಡಂತೆ ಅದರ ನಿರ್ವಹಣೆಯ ಸಂಸ್ಥೆಗಳು/ಕೇಂದ್ರಗಳು/ಕಚೇರಿಗಳನ್ನು ಜನವರಿ 22 ರಂದು ಅರ್ಧ ದಿನ (ಮಧ್ಯಾಹ್ನ 2.30 ರವರೆಗೆ) ಮುಚ್ಚಲಾಗುವುದು ಎಂದು ಉಪಕುಲಪತಿ ಸುತ್ತೋಲೆ ಹೊರಡಿಸಿದ್ದಾರೆ. ಪ್ರಾಣ ಪ್ರತಿಷ್ಠಾ ಕಾರ್ಯಕ್ರಮವು ಜನವರಿ 22 ರಂದು ನಡೆಯಲಿದೆ. ಮಹಾಮಸ್ತಕಾಭಿಷೇಕ ಸಮಾರಂಭವು ಮಧ್ಯಾಹ್ನ 12.20 ಕ್ಕೆ ಪ್ರಾರಂಭವಾಗಿ 1 ಗಂಟೆಗೆ ಕೊನೆಗೊಳ್ಳುವ ನಿರೀಕ್ಷೆಯಿದೆ. ನಂತರ ಮೋದಿ ಅವರು ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸರ್ಕಾರಿ ನೌಕರರು ದೂರದರ್ಶನದಲ್ಲಿ ಕಾರ್ಯಕ್ರಮ ವೀಕ್ಷಿಸಲು, ಸ್ಥಳೀಯ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅನುಕೂಲವಾಗುಂತೆ ಹಲವಾರು ರಾಜ್ಯಗಳು ಜ. 22ರಂದು ಅರ್ಧ ದಿನ, ಕೆಲವೆಡೆ ಇಡೀ ದಿನ ಸಾರ್ವಜನಿಕ ರಜೆ ಘೋಷಿಸಿವೆ.

## ಮತ್ತೆ ಆಕ್ಟಿವ್ ಆದ ವಿಕ್ರಮ್ ಲ್ಯಾಂಡರ್



**ದೆಹಲಿ:** ಚಂದ್ರಯಾನ–3 ಮಿಷನ್ ಮತ್ತೊಂದು ಯಶಸ್ಸು ಸಾಧಿಸಿದೆ. ಮೊದಲ ಬಾರಿಗೆ ಚಂದ್ರನ ದಕ್ಷಿಣ ದಿಕ್ಕಿನಲ್ಲಿ ಲ್ಯಾಂಡ್ ಆಗಿದ್ದ ವಿಕ್ರಮ್ ಲ್ಯಾಂಡರ್ ಮತ್ತೆ ಆಯಕ್ಟಿವ್ ಆಗಿದೆ. ಬರೋಬ್ಬರಿ 135 ದಿನಗಳ ಬಳಿಕ ವಿಕ್ರಮ್ ಲ್ಯಾಂಡರ್ ಮತ್ತೆ ತನ್ನ ಕಾರ್ಯ ಆರಂಭಿಸಿರೋದನ್ನ ಇಸ್ರೋ ಹಾಗೂ ನಾಸಾ ವಿಜ್ಞಾನಿಗಳು ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ. 2023ರ ಆಗಸ್ಟ್ 23ರಲ್ಲಿ ಚಂದ್ರನ ದಕ್ಷಿಣ ಧ್ರುವದಲ್ಲಿ ವಿಕ್ರಮ್ ಲ್ಯಾಂಡರ್ ಯಶಸ್ವಿಯಾಗಿ ಲ್ಯಾಂಡ್ ಆಗಿತ್ತು. ಇದಾದ ಮೇಲೆ ವಿಶೇಷ ಫೋಟೋ ಹಾಗೂ ಮಾಹಿತಿಗಳನ್ನು ಇಸ್ರೋಗೆ ರವಾನೆ ಮಾಡಿತ್ತು. 2023ರ ಸೆಪ್ಟೆಂಬರ್ 2ರಂದು ವಿಕ್ರಮ್ ಲ್ಯಾಂಡರ್ ಹಾಗೂ ಪ್ರಜ್ಞಾನ್ ರೋವರ್ನಿಂದ ಯಾವುದೇ ಸಿಗ್ನಲ್ ಹಾಗೂ ಸಂದೇಶಗಳು ಬಂದಿರಲಿಲ್ಲ. ವಿಕ್ರಮ್ ಲ್ಯಾಂಡರ್ ಸಂಪೂರ್ಣ ನಿದ್ರೆಗೆ ಜಾರಿದೆ ಎಂದೇ ಇಸ್ರೋ ಘೋಷಣೆ ಮಾಡಿತ್ತು. ಆದ್ರೆ 135 ದಿನಗಳ ಬಳಿಕ ವಿಕ್ರಮ್ ಲ್ಯಾಂಡರ್ ಮತ್ತೆ ತನ್ನ ಕಾರ್ಯ ಆರಂಭಿಸಿದೆ ಅನ್ನೋದೇ ವಿಶೇಷವಾಗಿದೆ. ಚಂದ್ರನ ದಕ್ಷಿಣ ದಿಕ್ಕಿನಲ್ಲಿ ಲ್ಯಾಂಡ್ ಆಗಿರುವ ವಿಕ್ರಮ್ ಲ್ಯಾಂಡರ್ ಅನ್ನು ನಾಸಾದ ಆರ್ಬಿಟರ್ ಟಚ್ ಮಾಡಿದೆ. ಇದರಿಂದ ವಿಕ್ರಮ್ ಲ್ಯಾಂಡರ್ ಚಂದ್ರನ ಮೇಲಿಂದ ತನ್ನ ಜಾಗ ಗುರುತಿಸುವಿಕೆಯ ಕಾರ್ಯವನ್ನು ಆರಂಭಿಸಿದೆ ಎಂದು ಇಸ್ರೋ ಹೇಳಿದೆ.

## ನಮ್ಮ ಸರ್ಕಾರ ಶ್ರೀರಾಮನಿಂದ ಪ್ರೇರಿತವಾಗಿದೆ: ಪ್ರಧಾನಿ ಮೋದಿ

**ಮುಂಬೈ:** ತಮ್ಮ ಸರ್ಕಾರವು ಭಗವಾನ್ ರಾಮನ ಪ್ರಾಮಾಣಿಕತೆಯೊಂದಿಗೆ ಆಡಳಿತದ ತತ್ವಗಳಿಂದ ಪ್ರೇರಿತವಾಗಿದೆ ಮತ್ತು ಜ.22 ರಂದು ರಾಮಜ್ಯೋತಿಯನ್ನು ಬೆಳಗಿಸಬೇಕೆಂದು ಜನರನ್ನು ಒತ್ತಾಯಿಸಿದರು, ಇದು ಅವರ ಜೀವನದಿಂದ ಬಡತನವನ್ನು ತೊಡೆದುಹಾಕಲು ಸ್ಫೂರ್ತಿಯಾಗಿದೆ ಎಂದು ಪ್ರಧಾನಿ ಮೋದಿ ಅವರು ಒತ್ತಿಹೇಳಿದರು. ಮೋದಿಯವರ ಗ್ಯಾರಂಟಿ ಎಂದರೆ ಗ್ಯಾರಂಟಿ ಪುರಿ ಹೋನೆ ಕಿ ಗ್ಯಾರಂಟಿ. ಭಗವಾನ್ ರಾಮನು ನಮಗೆ ಮಾಡಿದ ಬದ್ಧತೆಗಳನ್ನು ಗೌರವಿಸಲು ಕಲಿಸಿದನು ಮತ್ತು ನಾವು ಬಡವರ ಕಲ್ಯಾಣ ಮತ್ತು ಅವರ ಸಬಲೀಕರಣಕ್ಕಾಗಿ ನಾವು ನಿಗದಿಪಡಿಸಿದ ಎಲ್ಲಾ ಗುರಿಗಳನ್ನು ಪೂರೈಸುತ್ತಿದ್ದೇವೆ ಎಂದು ಅವರು ಹೇಳಿದರು. ಬಳಿಕ ರಾಜ್ಯದಲ್ಲಿ ಸುಮಾರು 2,000 ಕೋಟಿ ರೂಪಾಯಿ ಮೌಲ್ಯದ 8 ಅಮೃತ್ (ಪುನರುಜ್ಜೀವನ ಮತ್ತು ನಗರ ಪರಿವರ್ತನೆಗಾಗಿ ಅಟಲ್ ಮಿಷನ್) ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಮಹಾರಾಷ್ಟ್ರದ ಸೊಲ್ಲಾಪುರದಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಿದರು.

ಮಹಾರಾಷ್ಟ್ರದಲ್ಲಿ PMAY-Urban ಅಡಿಯಲ್ಲಿ ಪೂರ್ಣಗೊಂಡ 90,000 ಕ್ಕೂ ಹೆಚ್ಚು ಮನೆಗಳನ್ನು ಅವರು ಲೋಕಾರ್ಪಣೆ ಮಾಡಿದರು.

**ಜ.22 ರಂದು ರಾಮಜ್ಯೋತಿ ಬೆಳಗಿಸಬೇಕೆಂದು ಮನವಿ**



## ರಾಮಜನ್ಮಭೂಮಿ ಐತಿಹಾಸಿಕ ತೀರ್ಪು ನೀಡಿದ ನ್ಯಾಯಮೂರ್ತಿಗಳಿಗೆ ಆಹ್ವಾನ



**ನವದೆಹಲಿ:** ಅಯೋಧ್ಯೆಯ ರಾಮಜನ್ಮಭೂಮಿ ವಿವಾದಕ್ಕೆ ಸಂಬಂಧಿಸಿ ಮಹತ್ವದ ತೀರ್ಪು ನೀಡಿದ ಸಂವಿಧಾನ ಪೀಠದ ಐವರು ನ್ಯಾಯಮೂರ್ತಿಗಳು ಹಾಗೂ ಸುಪ್ರೀಂ ಕೋರ್ಟ್ನ ಹಾಲಿ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅವರಿಗೆ ಜ. 22ರಂದು ನಡೆಯಲಿರುವ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್ ಆಹ್ವಾನ ನೀಡಿದೆ. 2019ರ ನ. 9ರಂದು ಐತಿಹಾಸಿಕ ತೀರ್ಪು ನೀಡಿದ ಮುಖ್ಯ ನ್ಯಾಯಮೂರ್ತಿಯಾಗಿದ್ದ ಹಾಲಿ ರಾಜ್ಯಸಭಾ ಸದಸ್ಯ ರಂಜನ್ ಗೊಗೊಯ್, ನ್ಯಾ. ಎಸ್.ಎ.ಬೊಬ್ಡೆ, ನ್ಯಾ. ಅಶೋಕ್ ಭೂಷಣ್ ಹಾಗೂ ನ್ಯಾ. ಎಸ್.ಅಬ್ದುಲ್ ನಜೀರ್ ಅವರನ್ನು ಟ್ರಸ್ಟ್ ಆಹ್ವಾನಿಸಿದೆ. ವಿವಾದಿತ ಸ್ಥಳದಲ್ಲಿ ರಾಮಮಂದಿರ ನಿರ್ಮಾಣಕ್ಕೆ ಸರ್ಕಾರ ರಚಿಸಿದ ಟ್ರಸ್ಟ್‌ಗೆ ಈ ತೀರ್ಪು ಪ್ರೇರಣೆಯಾಯಿತು. ಜತೆಗೆ ಅಯೋಧ್ಯೆಯಲ್ಲೇ ಮಸೀದಿ ನಿರ್ಮಾಣಕ್ಕೆ 5 ಎಕರೆ ಜಾಗವನ್ನು ನೀಡುವಂತೆ ಸುಪ್ರೀಂ ಕೋರ್ಟ್ ಸರ್ಕಾರಕ್ಕೆ ಆದೇಶಿಸಿತ್ತು. ರಾಮಮಂದಿರದಲ್ಲಿ ಜ. 22ರಂದು ನಡೆಯಲಿರುವ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ನ್ಯಾಯಾಂಗಕ್ಕೆ ಸೇರಿದ 50 ಪ್ರಮುಖರನ್ನು ಆಹ್ವಾನಿಸಲಾಗಿದೆ. ನ್ಯಾಯಾಧೀಶರು, ಪ್ರಮುಖ ವಕೀಲರು. ರಾಮಲಲಾ ಪರ ವಕೀಲ ಕೆ. ಪರಸರಣ್, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಮಾಜಿ ಅಟಾರ್ನಿ ಜನರಲ್ ಕೆ.ಕೆ. ವೇಣುಗೋಪಾಲ್ ಹೆಸರು ಆಹ್ವಾನಿತರ ಪಟ್ಟಿಯಲ್ಲಿದೆ.

## 'ಜೈಶ್ ಭಯೋತ್ಪಾದಕ ಶಿಬಿರ'ದ ತುಣುಕು ಬಿಡುಗಡೆಗೊಳಿಸಿದ ಇರಾನ್

**ಪಾಕಿಸ್ತಾನ:** ಪಾಕಿಸ್ತಾನದ ಬಲೂಚಿಸ್ತಾನದಲ್ಲಿ ದಾಳಿ ನಡೆಸಿದ ಸ್ಥಳದ ವೀಡಿಯೊವನ್ನ ಇರಾನ್ ಬಿಡುಗಡೆ ಮಾಡಿದೆ. ಈ ವೀಡಿಯೊ ಡ್ರೋನ್ ತುಣುಕಾಗಿದ್ದು, ಅದರಲ್ಲಿ ಭಯೋತ್ಪಾದಕ ನೆಲೆಗಳು ಇರುವ ಸ್ಥಳವನ್ನ ತೋರಿಸಲಾಗುತ್ತಿದೆ. ಈ ಪ್ರದೇಶವು ಬೆಟ್ಟಗಳ ನಡುವಿನ ಕಿರಿದಾದ ಕಣಿವೆಗಳಲ್ಲಿದೆ. ಈ ವೀಡಿಯೊದಲ್ಲಿ, ಭಯೋತ್ಪಾದಕರು ಶಸ್ತ್ರಾಸ್ತ್ರಗಳೊಂದಿಗೆ ತರಬೇತಿ ಪಡೆಯುತ್ತಿರುವುದನ್ನ ತೋರಿಸಲಾಗಿದೆ. ಭಯೋತ್ಪಾದಕರು ಕಿರಿದಾದ ಕಣಿವೆಗಳಲ್ಲಿ ವಾಸಿಸುತ್ತಿದ್ದಾರೆ, ಅಲ್ಲಿ ಯಾರೂ ಸುಲಭವಾಗಿ ಕಾಣುವುದಿಲ್ಲ. ಈ ಎಲ್ಲಾ ಅಡಗುತಾಣಗಳನ್ನ ಜೈಶ್ ಅಲ್–ಅದ್ಲ್ ಭಯೋತ್ಪಾದಕರಿಗೆ ಸೇರಿದ್ದು, ಡ್ರೋನ್ ತುಣುಕು ಬಿಡುಗಡೆಯಾದ ಕೂಡಲೇ ವೈರಲ್ ಆಗಿದೆ. ಆಶ್ಚರ್ಯಕರವಾಗಿ, ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯು ಇರಾನ್ನ ಕಣ್ಗಾವಲು ಡ್ರೋನ್'ನ್ನ ಹಿಡಿಯಲು ಸಾಧ್ಯವಾಗಲಿಲ್ಲ. ಇರಾನಿನ ಡ್ರೋನ್ಗಳು ಬಲೂಚಿಸ್ತಾನವನ್ನ ಪ್ರವೇಶಿಸಿ ಬೇಹುಗಾರಿಕೆಯ ನಂತರ ಹಿಂತಿರುಗಿದವು. ಅದರ ನಂತರ, ಈ ಸ್ಥಳಗಳ ನಿಖರವಾದ ಸ್ಥಳದ ಸಹಾಯದಿಂದ, ಇರಾನ್ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಆತ್ಮಾಹುತಿ ಡ್ರೋನ್ಗಳ ಮೇಲೆ ದಾಳಿ ಮಾಡಿತು. ಇದಕ್ಕೂ ಮುನ್ನ ಇರಾನ್ ಸಿರಿಯಾದಲ್ಲಿನ ಇಸ್ಲಾಮಿಕ್ ಸ್ಟೇಟ್ ನೆಲೆಗಳ ಮೇಲೆ ಮತ್ತು ಇರಾಕ್ನಲ್ಲಿರುವ ಇಸ್ರೇಲಿ ಗೂಢಚಾರ ಸಂಸ್ಥೆ ಮೊಸ್ಸಾದ್ ನೆಲೆಗಳ ಮೇಲೆ ದಾಳಿ ನಡೆಸಿತ್ತು.

## ಅಪರಾಧಿ ರಾಮ್ ರಹೀಮ್‌ಗೆ ಮತ್ತೆ ಪೆರೋಲ್!!

**ದೆಹಲಿ:** ಇಬ್ಬರು ಮಹಿಳಾ ಶಿಷ್ಯೆಯರ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ 20 ವರ್ಷಗಳ ಜೈಲು ಶಿಕ್ಷೆ ಅನುಭವಿಸುತ್ತಿರುವ ಡೇರಾ ಸಚ್ಚಾ ಸೌದಾ ಪ್ರಮುಖ ಗುರ್ಮೀತ್ ರಾಮ್ ರಹೀಮ್ ಸಿಂಗ್ ಗೆ 50 ದಿನಗಳ ಪೆರೋಲ್ ನೀಡಲಾಗಿದೆ. ಈ ಹಿಂದೆ ನವೆಂಬರ್ 2023 ರಲ್ಲಿ 21 ದಿನಗಳ ಪೆರೋಲ್ನಲ್ಲಿ ಜೈಲಿನಿಂದ ಬಿಡುಗಡೆ ಮಾಡಲಾಗಿತ್ತು. ಕಳೆದ ವರ್ಷ ಮೂರು ಬಾರಿ ಪೆರೋಲ್ ನೀಡಲಾಗಿತ್ತು ಎಂಬುದು ಗಮನಾರ್ಹ ವಿಚಾರವಾಗಿದ್ದು, 4 ವರ್ಷಗಳಲ್ಲಿ 9 ನೇ ಪೆರೋಲ್ ಪಡೆದಿದ್ದು, ಹಲವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಪಂಜಾಬ್, ಹರಿಯಾಣ, ಹಿಮಾಚಲ ಪ್ರದೇಶ ಮತ್ತು ಉತ್ತರ ಪ್ರದೇಶದಲ್ಲಿ ಸಾವಿರಾರು ಅನುಯಾಯಿಗಳನ್ನು ಹೊಂದಿರುವ 56 ವರ್ಷದ ರಾಮ್ ರಹೀಮ್, ಅನಾರೋಗ್ಯದಿಂದ ಬಳಲುತ್ತಿರುವ ತನ್ನ ತಾಯಿಯನ್ನು ಭೇಟಿ ಮಾಡಲು ಮನವಿ ಸೇರಿದಂತೆ ವಿವಿಧ ಕಾರಣಗಳಿಗಾಗಿ ಹಲವಾರು ಬಾರಿ ಪೆರೋಲ್ನಲ್ಲಿ ಜೈಲಿನಿಂದ ಬಿಡುಗಡೆಗೊಂಡಿದ್ದಾರೆ. ಶಿಷ್ಯರಯರಿಬ್ಬರ ಮೇಲೆ ಅತ್ಯಾಚಾರವೆಸಗಿದ್ದಕ್ಕಾಗಿ 2017 ರಲ್ಲಿ 20 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿತ್ತು ನಂತರ ಪತ್ರಕರ್ತ ರಾಮ್ ಚಂದರ್ ಛತ್ರಪತಿ ಮತ್ತು 2002 ರಲ್ಲಿ ಡೇರಾ ಮ್ಯಾನೇಜರ್ ರಂಜಿತ್ ಸಿಂಗ್ ಅವರ ಹತ್ಯೆಗಳು ಸೇರಿದಂತೆ ಎರಡು ಕೊಲೆ ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆಯನ್ನುನೀಡಲಾಗಿದೆ.



## ಖೇಲೋ ಇಂಡಿಯಾ ಯೂತ್ ಗೇಮ್ಸ್ ಉದ್ಘಾಟಿಸಿದ ಪ್ರಧಾನಿ ಮೋದಿ

**ಚೆನ್ನೈ:** ಚೆನ್ನೈನ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ಯೂತ್ ಗೇಮ್ಸ್ 2023 ಅನ್ನು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಉದ್ಘಾಟಿಸಿದರು.

ಈ ವೇಳೆ ಸುಮಾರು 250 ಕೋಟಿ ರೂ.ಗಳ ಪ್ರಸಾರ ವಲಯದ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ದೇಶಾದ್ಯಂತದಿಂದ ಚೆನ್ನೈಗೆ ಬಂದಿರುವ ಎಲ್ಲಾ ಕ್ರೀಡಾಪಟುಗಳು ಮತ್ತು ಕ್ರೀಡಾ ಪ್ರೇಮಿಗಳಿಗೆ ನನ್ನ ಶುಭಾಶಯಗಳನ್ನ ಕೋರುತ್ತೇನೆ. ಒಟ್ಟಾಗಿ, ನೀವು 'ಏಕ್ ಭಾರತ್ ಶ್ರೇಷ್ಠ ಭಾರತ್'ನ ನಿಜವಾದ ಸ್ಫೂರ್ತಿಯನ್ನ ಪ್ರದರ್ಶಿಸುತ್ತಿದ್ದೀರಿ. ತಮಿಳುನಾಡಿನ ಬೆಚ್ಚಗಿನ ಜನರು, ಸುಂದರವಾದ ತಮಿಳು ಭಾಷೆ, ಸಂಸ್ಕೃತಿ ಮತ್ತು ಪಾಕಪದ್ಧತಿ ಖಂಡಿತವಾಗಿಯೂ ನಿಮಗೆ ಮನೆಯಲ್ಲಿರುವಂತೆ ಮಾಡುತ್ತದೆ ಎಂದರು.



## ಭಾರತದಲ್ಲಿ ವಿಶ್ವಸುಂದರಿ ಸ್ಪರ್ಧೆ

**ದೆಹಲಿ:** 28 ವರ್ಷಗಳ ಬಳಿಕ ವಿಶ್ವಸುಂದರಿ ಸ್ಪರ್ಧೆಯನ್ನು ಆಯೋಜಿಸುವ ಅವಕಾಶ ಭಾರತಕ್ಕೆ ಲಭಿಸಿದೆ. ಇದು 71 ನೇ ವಿಶ್ವಸುಂದರಿ ಸ್ಪರ್ಧೆಯಾಗಿದ್ದು, ಈ ಬಗ್ಗೆ ಮಿಸ್ ವರ್ಲ್ಡ್ ನ ಅಧಿಕೃತ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದೆ.

'ಭಾರತವನ್ನು ಮಿಸ್ ವರ್ಲ್ಡ್ ಗೆ ಆತಿಥ್ಯ ವಹಿಸುವ ದೇಶವೆಂದು ಹೆಮ್ಮೆಯಿಂದ ಘೋಷಿಸಿದ್ದು, ಎಲ್ಲೆಡೆ ಉತ್ಸಾಹ ತುಂಬಿದೆ.

ಸೌಂದರ್ಯ, ವೈವಿಧ್ಯತೆ ಮತ್ತು ಸಬಲೀಕರಣದ ಆಚರಣೆಗಾಗಿ ಜಗತ್ತು ಕಾಯುತ್ತಿದೆ. ಅದ್ಭುತ ಪ್ರಯಾಣಕ್ಕೆ ಸಿದ್ಧರಾಗಿ' ಎಂದು ಮಿಸ್ ವರ್ಲ್ಡ್ ಅಧ್ಯಕ್ಷೆ ಜೂಲಿಯಾ ಮೊರ್ಲಿ ಅಃಇ ಬರೆದು, ಹಂಚಿಕೊಂಡಿದ್ದಾರೆ.

ನವದೆಹಲಿಯ ಭಾರತ್ ಮಂಟಪಮ್ ಮತ್ತು ಮುಂಬೈನ ಬೆರಗುಗೊಳಿಸುವ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್ ನಲ್ಲಿ ಫೆಬ್ರವರಿ 18 ರಿಂದ ಮಾರ್ಚ್ 9 ರ ನಡುವೆ, ಈ ಸ್ಪರ್ಧೆ ನಡೆಯಲಿದೆ ಎಂದು ತಿಳಿದುಬಂದಿದೆ.



## ರಿಲಯನ್ಸ್ ಇಂಡಸ್ಟ್ರೀಸ್ ಡಿಸೆಂಬರ್ ತ್ರೈಮಾಸಿಕ ನಿವ್ವಳ ಲಾಭ ಶೇ 11 ಏರಿಕೆ

**ಮುಂಬೈ:** ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ನಿಂದ ಹಣಕಾಸು ವರ್ಷ 24ರ ಮೂರನೇ ತ್ರೈಮಾಸಿಕವಾದ ಅಕ್ಟೋಬರ್ ನಿಂದ ಡಿಸೆಂಬರ್ ತನಕದ ಹಣಕಾಸು ಫಲಿತಾಂಶವನ್ನು ಶುಕ್ರವಾರದಂದು ಪ್ರಕಟಿಸಲಾಗಿದೆ. ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದಲ್ಲಿ ಶೇ 11ರಷ್ಟು ನಿವ್ವಳ ಲಾಭ ಹೆಚ್ಚಾಗಿ, 19,641 ಕೋಟಿ ರೂಪಾಯಿ ಬಂದಿದೆ. ತೈಲ ಹಾಗೂ ಅನಿಲ ವ್ಯವಹಾರದಲ್ಲಿ ಇದುವರೆಗಿನ ಅತಿ ಹೆಚ್ಚಿನ ಪ್ರಮಾಣದ ತ್ರೈಮಾಸಿಕ ಆದಾಯ ಈ ಬಾರಿ ಬಂದಿದೆ. ಕಾರ್ಯಾಚರಣೆ ಮೂಲಕ ಬರುವಂಥ ಆದಾಯದಲ್ಲಿ ಶೇಕಡಾ 3ರಷ್ಟು ಹೆಚ್ಚಳವಾಗಿದ್ದು, ರೂ. 2.48 ಲಕ್ಷ ಕೋಟಿ ಬಂದಿದೆ. ರಿಲಯನ್ಸ್ ಸಮೂಹದ ಅನಿಲ ಹಾಗೂ ತೈಲ ಸೆಗ್ಮೆಂಟ್ ನಿಂದ ಬರುವ ತ್ರೈಮಾಸಿಕ ಆದಾಯವು ಶೇ 50ರಷ್ಟು ಹೆಚ್ಚಾಗಿದ್ದು, 6,719 ಕೋಟಿ ರೂಪಾಯಿ ಬಂದಿದೆ.

ತೈಲ ಮತ್ತು ಅನಿಲ ವಿಭಾಗವು ತನ್ನ ಅತ್ಯಧಿಕ ತ್ರೈಮಾಸಿಕ




ಇಬಿಐಟಿಡಿಎ ಅನ್ನು ಈ ಬಾರಿ ತಂದಿದೆ. ಕೆಜಿ ಡಿ6 (ಏಉ ಆ6) ಈಗ ಭಾರತದ ಅನಿಲ ಉತ್ಪಾದನೆಯಲ್ಲಿ ಶೇ 30ರಷ್ಟು ಕೊಡುಗೆ ನೀಡುತ್ತಿದೆ ಎಂದು ಈ ಬಾರಿ ನಿಮ್ಮ ಗಮನ ಸೆಳೆಯಲು ನನಗೆ ಸಂತೋಷವಾಗುತ್ತದೆ. ನಾಳೆ ಹಸಿರು ಮತ್ತು ಸ್ವಚ್ಛ ಇಂಧನದ ಕಡೆಗೆ ಅದರ ಪರಿವರ್ತನೆಗೆ ಉತ್ತೇಜನ ನೀಡುತ್ತಿದೆ,'' ಎಂದು ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಡಿ. ಮುಕೇಶ್ ಅಂಬಾನಿ ಹೇಳಿದರು.

ರಿಲಯನ್ಸ್‌ನ ಔ2ಅ (ತೈಲದಿಂದ ರಾಸಾಯನಿಕ ತನಕ) ವಿಭಾಗದ ತ್ರೈಮಾಸಿಕ ಆದಾಯವು ವರ್ಷದಿಂದ ವರ್ಷಕ್ಕೆ ಶೇ 2.4ರಷ್ಟು ಕುಸಿದು, 1,41,096 ಕೋಟಿ ರೂಪಾಯಿಗೆ ಕುಸಿದಿದೆ. ಯೋಜಿತ ನಿರ್ವಹಣೆಯಿಂದ ಉತ್ತೇಜಿತವಾದ ತೈಲ ವ್ಯಾಪಾರದ ಗಳಿಕೆಯಲ್ಲಿನ ದೌರ್ಬಲ್ಯವನ್ನು ರೀಟೇಲ್ ಮತ್ತು ಟೆಲಿಕಾಂ ವಿಭಾಗದಲ್ಲಿನ ಆದಾಯದ ಸ್ಥಿರತೆಯಿಂದ ಸರಿದೂಗಿಸಲಾಗಿದೆ. ರಿಲಯನ್ಸ್ ರೀಟೇಲ್ ಈ ಬಾರಿ ದಾಖಲೆಯ ಹೆಚ್ಚಿನ ತ್ರೈಮಾಸಿಕ ಆದಾಯವಾಗಿ ರೂ. 83,063 ಕೋಟಿ ದಾಖಲಿಸಿದೆ, ಇದು ದಿನಸಿ, ಫ್ಯಾಷನ್ ಮತ್ತು ಲೈಫ್ ಸ್ಟೈಲ್ ಮತ್ತು ಗ್ರಾಹಕ ಎಲೆಕ್ಟ್ರಾನಿಕ್ಸ್ ವ್ಯವಹಾರಗಳ ನೇತೃತ್ವದಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ಶೇ 22.8ರಷ್ಟು ಹೆಚ್ಚಳವಾಗಿದೆ. ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಈ ತ್ರೈಮಾಸಿಕದಲ್ಲಿ ನಿವ್ವಳ ಲಾಭವು ಶೇ 31.9 ರಷ್ಟು ಏರಿಕೆಯಾಗಿ 3,165 ಕೋಟಿ ರೂಪಾಯಿ ತಲುಪಿದೆ.

## ತಾಯಿ ಹಾಲುಣಿಸುತ್ತಿದ್ದ ವೇಳೆ ಉಸಿರುಗಟ್ಟಿ ಮಗು ಸಾವು

**ಚೀನಾ:** ತಾಯಿಯೊಬ್ಬಳು ಮಗುವಿಗೆ ಹಾಲುಣಿಸುತ್ತಿರುವ ವೇಳೆ, ಮಗು ಉಸಿರುಗಟ್ಟಿ ಸಾವನ್ನಪ್ಪಿದ ಘಟನೆ, ಚೀನಾದ ಹಾಂಗ್ಕಾಂಗ್‌ನಲ್ಲಿ ನಡೆದಿದೆ.11 ತಿಂಗಳ ಮಗುವಿಗೆ 25 ವರ್ಷದ ತಾಯಿ ಹಾಲುಣಿಸುತ್ತಿದ್ದು, ಈ ವೇಳೆ ಮಗು ಪ್ರಜ್ಞೆ ತಪ್ಪಿದೆ, ಆಗ ತಾಯಿ ಮಗುವಿನ ಬೆನ್ನಿಗೆ ತಟ್ಟಿದ್ದಾಳೆ. ಮಗು ಯಾವುದೇ ರೆಸ್ಪಾನ್ಸ್ ಕೊಡದಿದ್ದಾಗ, ಆಸ್ಪತ್ರೆಗೆ ಕರೆದೊಯ್ದಿದ್ದಾಳೆ. ಆದರೆ ಆದಗಲೇ ಮಗು ಸಾವನ್ನಪ್ಪಿದೆ. ಎರಡು ದಿನಗಳಿಂದ ಮಗುವಿಗೆ ಶೀತ, ಕೆಮ್ಮು ಇದ್ದ ಕಾರಣಕ್ಕೆ ಮಗುವಿನಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆಯಾಗಿದೆ. ಅಲ್ಲದೇ, ಮಗುವಿಗೆ ಹಾಲು ನುಂಗುವ ಸಾಮರ್ಥ್ಯ ಕ್ಷೀಣಿಸಿದೆ. ಈ ಕಾರಣಕ್ಕೆ, ಮಗು ಪ್ರಜ್ಞೆ ತಪ್ಪಿ ಸಾವನ್ನಪ್ಪಿರಬಹುದು ಎಂದು ಅಂದಾಜಿಸಲಾಗಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## 'ಬೆಂಕಿ' ಸಾಂಗ್ ಕೇಳಿ ಸಂಭ್ರಮಿಸಿದ ತನಿಷಾ ಕುಪ್ಪಂಡ

ಬಿಗ್ ಬಾಸ್ ಮನೆಯಿಂದ ಕಣ್ಣೀರು ಹಾಕುತ್ತಲೇ ಹೊರ ಬಂದ ನಟಿ ತನಿಷಾ ಕುಪ್ಪಂಡ, ಇದೀಗ ತನ್ನ ಬಗ್ಗೆ ಮೂಡಿ ಬಂದಿರುವ ಬೆಂಕಿ ಸಾಂಗ್ ಕೇಳಿ ಸಂಭ್ರಮಿಸುತ್ತಿದ್ದಾರೆ. ಸಾಂಗ್ ನೋಡಿದ ಬಳಿಕ ವಿಡಿಯೋವೊಂದನ್ನು ಮಾಡಿರುವ ಅವರು, ತುಂಬಾ ನೋವಿನಿಂದಲೇ ನಾನು ಬಿಗ್ ಬಾಸ್ ಮನೆಯಿಂದ ಆಚೆ ಬಂದೆ. ಆದರೆ, ನನ್ನ ಬಗ್ಗೆ ಸಾಂಗ್ ಮಾಡಿದ್ದು ಕೇಳಿ ತುಂಬಾನೇ ಖುಷಿ ಆಗುತ್ತಿದೆ. ನನಗೂ ಫ್ಯಾನ್ಸ್ ಇದ್ದಾರೆ ಎಂದು ನೋಡಿ ಸಂತಸವಾಯಿತು ಎಂದಿದ್ದಾರೆ.

ಬಿಗ್ ಬಾಸ್ ಮನೆಯಲ್ಲಿ ತಮ್ಮದೇ ಆದ ರೀತಿಯಲ್ಲಿ ಆಟವಾಡಿದ್ದರು ತನಿಷಾ. ಅವರ ಆಟಕ್ಕೆ ಬೆರಗಾಗಿ ಅವರನ್ನು ಬೆಂಕಿ ಎಂದು ಕರೆಯಲಾಗುತ್ತಿತ್ತು. ಬೆಂಕಿಯಂತೆ ಪರ್ಫಾರ್ಮೆನ್ಸ್ ಕೊಡ್ತಿರುವ ಬೋಲ್ಡ್ ಬ್ಯೂಟಿ ತನಿಷಾ ಕುಪ್ಪಂಡ ಕನ್ನಡ ಬಿಗ್ ಬಾಸ್ ಸೀಸನ್ 10ರ ಪ್ರಬಲ ಸ್ಪರ್ಧಿಯಾಗಿದ್ದರು. ಸಖತ್ ಫೈಟ್ ಕೊಡ್ತಿರುವ ಪೆಂಟಗನ್ ಸುಂದರಿ ಬಗ್ಗೆ ಹಾಡೊಂದನ್ನು ಮಾಡಿ ರಿಲೀಸ್ ಮಾಡಲಾಗಿತ್ತು.



'ಬೆಂಕಿ ಬಂತೋ' ಎಂಬ ಹಾಡಿಗೆ ಶಮಂತ್ ನಾಗಾರಾಜ್ ಕ್ಯಾಚಿ ಮ್ಯಾಚಿ ಪದ ಸೇರಿಸಿ ಸಾಹಿತ್ಯ ಬರೆದಿದ್ದರೆ, ಶಶಾಂಕ್ ಶೇಷಗಿರಿ ಈ ಜಬರ್ದಸ್ತ್ ಗಾನಬಜಾನಕ್ಕೆ ಧ್ವನಿಯಾಗುವುದರ ಜೊತೆಗೆ ಮ್ಯೂಸಿಕ್ ಕಿಕ್ ಕೊಟ್ಟಿದ್ದಾರೆ. ತನಿಷಾ ಕುಪ್ಪಂಡ ಎನರ್ಜಿ, ಸ್ಟೈಲ್, ಮಾತಿಗೆ ನಿಂತ್ರೆ ಎದುರಾಳಿಗೆ ಠಕ್ಕರ್ ಕೊಡುವ ಆಕೆಯ ಗುಣವನ್ನು ವರ್ಣಿಸುವ ಹಾಡು ಇದಾಗಿದೆ. ಈಕೆಯೇ ಬಿಗ್ ಬಾಸ್ ಬೆಂಕಿ ಚೆಂಡು ಎಂಬುದೇ ಹಾಡಿನ ಹೈಲೆಟ್ಸ್ ಆಗಿದೆ. 'ಮಂಗಳಗೌರಿ' ಸೀರಿಯಲ್‌ನಲ್ಲಿ ಖಳನಾಯಕಿಯಾಗಿ ಕಾಣಿಸಿಕೊಂಡಿದ್ದ ತನಿಷಾ ಕುಪ್ಪಂಡ, ಆ ನಂತ್ರ 'ಪೆಂಟಗನ್' ಸಿನಿಮಾ ಮೂಲಕ ಬೆಳ್ಳಿಪರದೆಗೂ ಎಂಟ್ರಿ ಕೊಟ್ಟರು. ನಂತರ ಕೋಮಲ್ ಅವರ 'ಉಂಡೆನಾಮ' ಚಿತ್ರದಲ್ಲೂ ಕಾಣಿಸಿಕೊಂಡರು ತನಿಷಾ ಇನ್ನು ಅನೇಕ ಹೊಸ ಹೊಸ ಪ್ರಾಜೆಕ್ಟ್ ನಲ್ಲಿ ಬ್ಯುಸಿಯಾಗಿರುವ ಈ ಬೋಲ್ಡ್ ಬ್ಯೂಟಿ ಇದೀಗ ಬಿಗ್ ಬಾಸ್ ಮನೆಯಿಂದ ಮಿಡ್ ವೀಕ್ ಎಲಿಮಿನೇಟ್ ಆಗಿ ಆಚೆ ಬಂದಿದ್ದಾರೆ.

## ರಶ್ಮಿಕಾ ಜೊತೆಗಿನ ನಿಶ್ಚಿತಾರ್ಥ ವಿಚಾರ

### ಕೊನೆಗೂ ಮೌನ ಮುರಿದ ದೇವರಕೊಂಡ



ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಅವರು ಫೆಬ್ರವರಿಯಲ್ಲಿ ನಿಶ್ಚಿತಾರ್ಥ ಮಾಡಿಕೊಳ್ಳುತ್ತಾರೆ ಎನ್ನುವ ಸುದ್ದಿ ಇತ್ತೀಚೆಗೆ ಹರಿದಾಡಿತ್ತು. ಈ ವಿಚಾರವಾಗಿ ವಿಜಯ್ ದೇವರಕೊಂಡ ಟೀಂ ಸ್ಪಷ್ಟನೆ ನೀಡಿತ್ತು. ಇದು ಸುಳ್ಳು ಎಂದು ಸ್ಪಷ್ಟಪಡಿಸಿತ್ತು. ಈಗ ಸ್ವತಃ ವಿಜಯ್ ದೇವರಕೊಂಡ ಅವರು ಇದಕ್ಕೆ ಸ್ಪಷ್ಟನೆ ನೀಡಿದ್ದಾರೆ. ಅವರು ಕೂಡ ಇದೇ ಮಾತನ್ನು ಮತ್ತೊಮ್ಮೆ ಹೇಳಿದ್ದಾರೆ. ವಿಜಯ್ ದೇವರಕೊಂಡ ಗಮನ ಸಂಪೂರ್ಣವಾಗಿ ಚಿತ್ರರಂಗದ ಮೇಲಿದೆ.

ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಒಟ್ಟಿಗೆ ವಾಸವಿದ್ದಾರೆ, ಒಟ್ಟಿಗೆ ಸುತ್ತಾಡುತ್ತಿದ್ದಾರೆ ಎಂಬುದಕ್ಕೆ ಹಲವು ಸಾಕ್ಷಿಗಳು ಸಿಕ್ಕಿವೆ. ಆದರೆ, ಇದನ್ನು ಒಪ್ಪಿಕೊಳ್ಳೋಕೆ ಅವರು ರೆಡಿ ಇಲ್ಲ. 'ನಾವು ಬೆಸ್ಟ್ ಫ್ರೆಂಡ್ಸ್' ಎಂದೇ ಹೇಳುತ್ತಾ ಬರುತ್ತಿದ್ದಾರೆ. 'ಜನವರಿಯಲ್ಲಿ ಇವರ ಎಂಗೇಜ್ ಮೆಂಟ್ ನಡೆಯಲಿದೆ' ಎಂದು ವರದಿ ಆಗಿತ್ತು. ಇದಕ್ಕೆ ಸ್ಪಷ್ಟನೆ ಸಿಕ್ಕಿದೆ. ಅವರು ಈ ಬಗ್ಗೆ ಮಾತನಾಡಿದ್ದಾರೆ.

'ನಾನು ಫೆಬ್ರವರಿಯಲ್ಲಿ ನಿಶ್ಚಿತಾರ್ಥವಾಗಲೀ, ಮದುವೆ ಆಗಲೀ ಆಗುತ್ತಿಲ್ಲ. ಮಾಧ್ಯಮದವರು ಎರಡು ವರ್ಷಕ್ಕೊಮ್ಮೆ ನನಗೆ ಮದುವೆ ಮಾಡಲು ಬಯಸುತ್ತಾರೆ ಅನಿಸುತ್ತಿದೆ. ಪ್ರತಿ ವರ್ಷ ಈ ವದಂತಿ ಕೇಳುತ್ತೇನೆ. ಅವರು ನನಗೆ ಮದುವೆ ಮಾಡಿಸಲು ಕಾಯುತ್ತಿರುತ್ತಾರೆ' ಎಂದಿದ್ದಾರೆ ವಿಜಯ್ ದೇವರಕೊಂಡ. ಈ ಮೂಲಕ ಅವರು ವದಂತಿಗೆ ಬ್ರೇಕ್ ಹಾಕಿದ್ದಾರೆ.

ಕಳೆದ ವರ್ಷ ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಮಾಲ್ಡೀವ್ಸ್ ಗೆ ಒಟ್ಟಾಗಿ ತೆರಳಿದ್ದರು ಎನ್ನಲಾಗಿದೆ. ಹೊಸ ವರ್ಷವನ್ನು ಅವರು ಒಟ್ಟಾಗಿ ಆಚರಿಸಿದ್ದಾರೆ ಎನ್ನುವ ಸುದ್ದಿಯೂ ಇದೆ. ಆದರೆ, ಇದನ್ನು ಅವರು ಅಲ್ಲಗಳೆಯುತ್ತಲೇ ಬರುತ್ತಿದ್ದಾರೆ.

ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಅವರು 'ಗೀತ ಗೋವಿಂದಂ' ಹಾಗೂ 'ಡಿಯರ್ ಕಾಮ್ರೇಡ್' ಸಿನಿಮಾದಲ್ಲಿ ಒಟ್ಟಾಗಿ ನಟಿಸಿದ್ದಾರೆ. ಅವರು ಮತ್ತೆ ಒಟ್ಟಾಗಿ ತೆರೆ ಹಂಚಿಕೊಳ್ಳಬೇಕು ಎಂಬುದು ಎಲ್ಲರ ಆಸೆ. ಅವರು ನಟಿಸುತ್ತಿರುವ 'ಫ್ಯಾಮಿಲಿ ಸ್ಟಾರ್' ಸಿನಿಮಾದಲ್ಲಿ ರಶ್ಮಿಕಾ ವಿಶೇಷ ಸಾಂಗ್ ನಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ.

## ರಾಜವರ್ಧನ್ ನಟನೆಯ ಪ್ರಣಯಂ ಚಿತ್ರದ ಟ್ರೈಲರ್ ರಿಲೀಸ್



ಪಲ್ಲಕ್ಕಿ, ಗಣಪ, ಪಾರಿಜಾತದಂಥ ಅದ್ಭುತ ಚಿತ್ರಗಳನ್ನು ನೀಡಿದ ಪರಮೇಶ್ ಅವರೀಗ ಮತ್ತೊಂದು ಇನ್ ಟೆನ್ಸ್ ಲವ್ ಸ್ಟೋರಿಯನ್ನು ಪ್ರಣಯಂ ಚಿತ್ರದ ಮೂಲಕ ಪ್ರೇಕ್ಷಕರಿಗೆ ನೀಡಲಿದ್ದಾರೆ. ಮನಸ್ವಿ ವೆಂಚರ್ಸ್ ಹಾಗೂ ಪಿಟು ಪ್ರೊಡಕ್ಷನ್ಸ್ ಬ್ಯಾನರ್ ಅಡಿ ಪರಮೇಶ್ ಅವರೇ ಕಥೆ ಬರೆದು ನಿರ್ಮಿಸಿರುವ ಈ ಚಿತ್ರಕ್ಕೆ ಎಸ್. ದತ್ತಾತ್ರೇಯ ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಬಿಚ್ಚುಗತ್ತಿ ಖ್ಯಾತಿಯ ನಟ ರಾಜವರ್ಧನ್, ನೈನಾ ಗಂಗೂಲಿ ಚಿತ್ರದ ನಾಯಕ, ನಾಯಕಿಯಾಗಿ ಅಭಿನಯಿಸಿದ್ದಾರೆ. ಈ ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಮಾಜಿ ಉಪ ಮೇಯರ್ ಮೋಹನ್ ರಾಜು ಟ್ರೈಲರ್ ರಿಲೀಸ್ ಮಾಡಿ ಈ ಟೈಟಲ್ ಕನ್ನಡದ ಜೊತೆ ತೆಲುಗು ಭಾಷೆಗೂ ಹತ್ತಿರವಾಗುವಂತಿದೆ. ಹಾಡು, ಕಾನ್ಸೆಪ್ಟ್ ಎರಡೂ ಚೆನ್ನಾಗಿದೆ ಎಂದು ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ಚಿತ್ರದಲ್ಲಿ ಜಯಂತ್ ಕಾಯ್ಕಿಣಿ ಅವರು 3 ಹಾಡುಗಳನ್ನು ಬರೆದಿದ್ದು, ಮನೋಮೂರ್ತಿ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. ವಿ.ನಾಗೇಶ್ ಆಚಾರ್ಯ ಅವರ ಕ್ಯಾಮೆರಾ ವರ್ಕ್ ಚಿತ್ರಕ್ಕಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಗೀತ ನಿರ್ದೇಶಕ ಮನೋಮೂರ್ತಿ ಚಿತ್ರದಲ್ಲಿ 5 ಹಾಡಿದ್ದು, ಕ್ಯಾಮೆರಾ ವರ್ಕ್ ಅದ್ಭುತವಾಗಿ ಮೂಡಿಬಂದಿದೆ. ಪ್ರಣಯಂ ಅಂದ್ರೆ ಲವ್, ಅದನ್ನಿಲ್ಲಿ ಡಿಫರೆಂಟಾಗಿ ಹೇಳಿದ್ದಾರೆ. ಖಂಡಿತ ಈ ವರ್ಷದ ಮೊದಲ ಹಿಟ್ ಸಿನಿಮಾ ಆಗುತ್ತೆ ಎಂದರು. ನಂತರ ಜಯಂತ್ ಕಾಯ್ಕಿಣಿ ಮಾತನಾಡಿ ಪರಮೇಶ್ ತುಂಬಾ ಜೋಶ್ ಇರುವಂಥ ಪ್ರೊಡ್ಯೂಸರ್ ಸಿನಿಮಾಗಾಗಿ ತುಂಬಾ ಕಷ್ಟಪಡುತ್ತಾರೆ. ಮನೋಮೂರ್ತಿ ಹಾಗೂ ನಮ್ಮ ದಾಂಪತ್ಯಕ್ಕೆ 17 ವರ್ಷ ಆಯ್ತು. ಆಗಿದ್ದ ಕುತೂಹಲ, ಚಡಪಡಿಕೆ ಈಗಲೂ ಇದೆ. ಹಿಂದೆ ಪರಮೇಶ್ ಅವರ ಕರಿಯ, ಗಣಪ, ಪಾರಿಜಾತ ಚಿತ್ರಗಳಿಗೂ ನಾನೇ ಸಾಂಗ್ ಬರೆದಿದ್ದೆ. ಇದರಲ್ಲಿ 3 ಹಾಡನ್ನು ಬರೆದಿದ್ದೇನೆ ಎಂದು ಹೇಳಿದರು. ನಿರ್ದೇಶಕ ದತ್ತಾತ್ರೇಯ ಮಾತನಾಡುತ್ತ ನಾನು ಈ ಸ್ಕ್ರಿಪ್ಟ್ ಮಾಡಿಕೊಂಡು ಬಂದಾಗ ನಿರ್ಮಾಪಕರು ತುಂಬಾ ಚೆನ್ನಾಗಿ ಬಂದಿದೆ ಎಂದು ಖುಷಿಯಿಂದ ಹಗ್ ಮಾಡಿದರು. ಸುಮಾರು ಲೊಕೇಶನ್‌ಗಳನ್ನು ನೋಡಿ ಕೊನೆಗೆ ಮಡಿಕೇರಿಯಲ್ಲಿ ನಮಗೆ ಬೇಕಾದ ಲೊಕೇಶನ್ ಸಿಕ್ತು. ಎಲ್ಲಾ ಲೆಜೆಂಡರಿಗಳ ಸಹಕಾರದಿಂದ ಸಿನಿಮಾ ಅದ್ಭುತವಾಗಿ ಬಂದಿದೆ. ನಾಗೇಶ್ ನನಗೆ ಇನ್ನೊಂದು ಕಣ್ಣಿದ್ದ ಹಾಗೆ. ತುಂಬಾ ಚೆನ್ನಾಗಿ ಶೂಟ್ ಮಾಡಿಕೊಟ್ಟಿದ್ದಾರೆ. ಎಲ್ಲರೂ ಸೇರಿ ಒಳ್ಳೆಯ ಸಿನಿಮಾ ಕೊಟ್ಟಿದ್ದೇವೆ. ಜನ ಇಷ್ಟಪಡುತ್ತಾರೆಂಬ ವಿಶ್ವಾಸವಿದೆ ಎಂದು ಹೇಳಿದರು.

ನಾಯಕ ರಾಜವರ್ಧನ್ ಮಾತನಾಡುತ್ತ ಬಿಚ್ಚುಗತ್ತಿಗೂ ಮುಂಚೆಯೇ ಪರಮೇಶ್ ಈ ಕಥೆಯನ್ನು ಹೇಳಿದರು .ಇವತ್ತಿನ ಫ್ಯಾಮಿಲಿಗಳಲ್ಲಿ ಈ ಥರದ ಘಟನೆಗಳು ನಡೆಯುತ್ತಲೇ ಇವೆ. ಅಂಥಾ ಒಂದು ಸ್ಟ್ರಾಂಗ್ ಕಂಟೆಂಟ್ ಇಟ್ಟುಕೊಂಡು ನಾವೀ ಸಿನಿಮಾ ಮಾಡಿದ್ದೇವೆ. ಬಿ.ಸಿ. ಸೆಂಟರ್ ಆಡಿಯನ್ಸ್ ಗಳಿಗೆ ಬೇಕಾದ ಕಾನ್ಸೆಪ್ಟ್ ಚಿತ್ರದಲ್ಲಿದೆ. ಆಗಿನ್ನೂ ವಿದೇಶದಿಂದ ಬರುವ ಗೌತಂ ಎಂಬ ಪಾತ್ರ ಮಾಡಿದ್ದೇನೆ. ಆತ 5-10 ದಿನದಲ್ಲಿ ಸ್ವಂತ ರಿಲೇಶನ್ ನಲ್ಲೇ ಹುಡುಗಿಯೊಬ್ಬಳನ್ನು ಮದುವೆಯಾಗ್ತಾನೆ. ಆನಂತರ 15-20 ದಿನಗಳಲ್ಲಿ ನಡೆಯುವ ಕಥೆ, ನನ್ನದು ತುಂಬಾ ಇನ್ ಟೆನ್ಸಿವ್ ಆಗಿರುವ ಪಾತ್ರ. ಮನೋಮೂರ್ತಿ, ಜಯಂತ್ ಕಾಯ್ಕಿಣಿ ಅವರಂಥ ಲೆಜೆಂಡರಿಗಳ ಜೊತೆ ಕೆಲಸ ಮಾಡಿದ್ದು ನನ್ನ ಅದೃಷ್ಟ ಎಂದರು.

ನಿರ್ಮಾಪಕ ಪರಮೇಶ್ ಮಾತನಾಡುತ್ತಾ, ನಾನು ಈವರೆಗೆ 9 ಸಿನಿಮಾ ಮಾಡಿದ್ದೇನೆ. ಆದರೂ ಗಾಂಧಿನಗರದಲ್ಲಿ ಪ್ರೊಡ್ಯೂಸರ್ ಗೆ ನೆಲೆಯೆ ಇಲ್ಲದಾಗಿದೆ. ನಮ್ಮದು ತುಂಬಾ ಕ್ರಿಟಿಕಲ್ ಫೀಲ್ಡ್. ಈಗ ಸಿನಿಮಾ ಹೇಗೋ ಮಾಡಿಬಿಡಬಹುದು. ರಿಲೀಸ್ ಮಾಡೋದು ತುಂಬಾ ಕಷ್ಟ. ರಿಲೀಸ್ ಡೇಟ್ ಅನೌನ್ಸ್ ಮಾಡಲಿಕ್ಕೇ ಭಯವಾಗುತ್ತೆ. ಬಿಡುಗಡೆಗೇ 2ಕೋಟಿ ಬೇಕಾಗುತ್ತೆ, ಎಲ್ಲಿಂದ ತರೋದು. ಹಾಗೂ, ರಿಲೀಸ್ ಮಾಡಲು ಮೂರು ಸಲ ಟ್ರೈ ಮಾಡಿದೆ. ಆಗಲಿಲ್ಲ. ಈಗ ಧೈರ್ಯ ಮಾಡಿದ್ದೇನೆ. ಇಂಡಸ್ಟ್ರಿಗೆ ಒಂದೊಳ್ಳೆ ಸಿನಿಮಾ ಕೊಟ್ಟಿದ್ದೇನೆ. ಜನ ಕೈ ಹಿಡಿಯುತ್ತಾರೆಂಬ ನಂಬಿಕೆಯಿದೆ ಎಂದರು.

ಚಿಕ್ಕಮಗಳೂರು, ಮಡಿಕೇರಿಯಂಥ ಸುಂದರ ಲೊಕೇಶನ್ ಗಳಲ್ಲಿ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಝುಂಕಾರ್ ಮ್ಯೂಸಿಕ್ ಈ ಚಿತ್ರದ ಹಾಡುಗಳನ್ನು ಹೊರತಂದಿದೆ. ಕುನಾಲ್ ಗಾಂಜಾವಾಲ, ಶ್ರೇಯಾ ಘೋಷಾಲ್ ಇತರರು ದನಿಯಾಗಿದ್ದಾರೆ. ಚಿತ್ರದಲ್ಲಿ ಗೋವಿಂದೇಗೌಡ, ಮಂಥನ, ಪ್ರಶಾಂತ್, ಸಮೀಕ್ಷಾ, ಪ್ರಿಯಾ ತರುಣ್ ಉಳಿದ ಪಾತ್ರಗಳಲ್ಲಿ ನಟಿಸಿದ್ದಾರೆ. ಮನೋಮೂರ್ತಿ ಅವರ ಸಂಗೀತ ನಿರ್ದೇಶನ, ವಿ. ನಾಗೇಶ್ ಆಚಾರ್ಯ ಅವರ ಛಾಯಾಗ್ರಹಣ. ಮದನ್ ಹರಿಣಿ ಅವರ ನೃತ್ಯ ನಿರ್ದೇಶನ, ಥ್ರಿಲ್ಲರ್ ಮಂಜು, ಮಾಸ್ ಮಾದ ಅವರ ಸಾಹಸ ನಿರ್ದೇಶನ ಪ್ರಣಯಂ ಚಿತ್ರಕ್ಕಿದೆ.

## ವಿಂಡೀಸ್ ವಿರುದ್ಧ 10 ವಿಕೆಟ್‌ಗಳ ಸುಲಭ ಜಯ ಸಾಧಿಸಿದ ಆಸ್ಟ್ರೇಲಿಯಾ



ಎರಡು ಪಂದ್ಯಗಳ ಟೆಸ್ಟ್ ಸರಣಿಗಾಗಿ ಆಸ್ಟ್ರೇಲಿಯಾ ಪ್ರವಾಸ ಮಾಡಿರುವ ವೆಸ್ಟ್ ಇಂಡೀಸ್ ತಂಡ ಮೊದಲ ಟೆಸ್ಟ್ ಪಂದ್ಯದಲ್ಲಿ 10 ವಿಕೆಟ್‌ಗಳ ಹೀನಾಯ ಸೋಲು ಅನುಭವಿಸಿದೆ. ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ 188 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿದರೆ, ಆತಿಥೇಯ ಆಸ್ಟ್ರೇಲಿಯಾ ಮೊದಲ ಇನ್ನಿಂಗ್ಸ್‌ನಲ್ಲಿ 283 ರನ್ ಕಲೆಹಾಕಿತು. ಎರಡನೇ ಇನ್ನಿಂಗ್ಸ್ ಆರಂಭಿಸಿದ ವಿಂಡೀಸ್ ಪಡೆ ಕೇವಲ 120 ರನ್‌ಗಳಿಗೆ ಆಲೌಟ್ ಆಗಿ ಆಸೀಸ್‌ಗೆ 26 ರನ್ ಗಳ ಟಾರ್ಗೆಟ್ ನೀಡಿತು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ಯಾವುದೇ ವಿಕೆಟ್ ನಷ್ಟವಿಲ್ಲದೆ ಗೆಲುವಿನ ದಡ ಸೇರಿತು. ಮೊದಲ ಪಂದ್ಯ ಕೇವಲ ಮೂರು ದಿನಗಳಲ್ಲಿ ಮುಗಿದಿದ್ದು, ಎರಡನೇ ಪಂದ್ಯ ಜನವರಿ 25ರಿಂದ ಆರಂಭವಾಗಲಿದೆ.

**ತತ್ತರಿಸಿದ ವಿಂಡೀಸ್ ಇನ್ನಿಂಗ್ಸ್:** ಪಂದ್ಯದಲ್ಲಿ ಟಾಸ್ ಸೋತ ವಿಂಡೀಸ್‌ಗೆ ಬ್ಯಾಟಿಂಗ್ ನಲ್ಲಿ ವಿಶೇಷವಾದುದನ್ನು ಮಾಡಲು ಸಾಧ್ಯವಾಗಲಿಲ್ಲ. ಕಿರ್ಕ್ ಮೆಕೆಂಜಿ ವಿಂಡೀಸ್ ಪರ ಗರಿಷ್ಠ 50 ರನ್ ಗಳಿಸಿದರು. ಇವರನ್ನು ಹೊರುಪಡಿಸಿ ಶಮರ್ ಜೋಸೆಫ್ 26 ರನ್, ಕೆಮರ್ ರೋಚ್ ಔಟಾಗದೆ 17 ರನ್ ಕಲೆಹಾಕಿದರು. ಉಳಿದಂತೆ ಅಲ್ಜಾರಿ ಜೋಸೆಫ್ 14 ರನ್, ನಾಯಕ ಕ್ರೇಗ್ ಬ್ರೈತ್‌ವೈಟ್ ಮತ್ತು ಎಲಿಕ್ ಅತಾನಾಜೆ ಇಬ್ಬರೂ ತಲಾ 13 ರನ್, ಕೇವಮ್ ಹಾಡ್ಜ್ 12 ರನ್ ತೇಜ್‌ನಾರಾಯಣ್ ಚಂದ್ರಪಾಲ್ ಮತ್ತು ಜೋಶುವಾ ಡಾ ಸಿಲ್ವಾ ಇಬ್ಬರೂ ತಲಾ 6 ರನ್ ಗಳಿಸಿದರು. ಜಸ್ಟಿನ್ ಗ್ರೀವ್ 5 ಮತ್ತು ಗುಡಾಕೇಶ್ ಮೋತಿ 1 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಆಸ್ಟ್ರೇಲಿಯಾ ಪರ ಜೋಶ್ ಹೇಜಲ್‌ವುಡ್ ಮತ್ತು ನಾಯಕ ಪ್ಯಾಟ್ ಕಮಿನ್ಸ್ ತಲಾ 4 ವಿಕೆಟ್ ಪಡೆದರೆ, ಮಿಚೆಲ್ ಸ್ಟಾರ್ಕ್ ಮತ್ತು ನಾಥನ್ ಲಿಯಾನ್ ಇಬ್ಬರೂ ತಲಾ 1 ವಿಕೆಟ್ ಕಳೆದುಕೊಂಡರು.

**ಶತಕ ಸಿಡಿಸಿದ ಹೆಡ್:** ಇದಕ್ಕೆ ಉತ್ತರವಾಗಿ ಆಸ್ಟ್ರೇಲಿಯಾ ಮೊದಲ ಇನಿಂಗ್ಸ್‌ನಲ್ಲಿ 283 ರನ್ ಗಳಿಸಿತ್ತು. ಆಸ್ಟ್ರೇಲಿಯ ಪರ ಟ್ರಾವಿಸ್ ಹೆಡ್ 119 ರನ್‌ಗಳ ಶತಕದ ಇನ್ನಿಂಗ್ಸ್ ಆಡಿದರು. ಟ್ರಾವಿಸ್ ತಮ್ಮ ಇನ್ನಿಂಗ್ಸ್‌ನಲ್ಲಿ 134 ಎಸೆತಗಳನ್ನು ಎದುರಿಸಿ 12 ಬೌಂಡರಿ ಮತ್ತು 3 ಸಿಕ್ಸರ್‌ಗಳನ್ನು ಬಾರಿಸಿದರು. ಇವರನ್ನು ಹೊರತುಪಡಿಸಿ ಉಸ್ಮಾನ್ ಖವಾಜಾ 45 ರನ್, ನಾಥನ್ ಲಿಯಾನ್ 24 ರನ್‌ಗಳ ಕೊಡುಗೆ ನೀಡಿದರು. ಅಂತಿಮವಾಗಿ ಆಸ್ಟ್ರೇಲಿಯಾ ಮೊದಲ ಇನ್ನಿಂಗ್ಸ್‌ನಲ್ಲಿ 95 ರನ್‌ಗಳ ಮುನ್ನಡೆ ಸಾಧಿಸಿತು. ವಿಂಡೀಸ್ ಪರ ಶಮರ್ ಜೋಸೆಫ್ ಚೊಚ್ಚಲ ಪಂದ್ಯದಲ್ಲೇ 5 ವಿಕೆಟ್ ಪಡೆದರೆ, ಕೆಮರ್ ರೋಚ್ ಮತ್ತು ಜಸ್ಟಿನ್ ಗ್ರೀವ್ಸ್ ತಲಾ 2 ವಿಕೆಟ್ ಪಡೆದರು. ಅಲ್ಜಾರಿ ಜೋಸೆಫ್ 1 ವಿಕೆಟ್ ಉರುಳಿಸಿದರು.

**ಆಸ್ಟ್ರೇಲಿಯಾಕ್ಕೆ ಗೆಲುವಿನ ಆರಂಭ:** ವಿಂಡೀಸ್ ಎರಡನೇ ಇನ್ನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾಕ್ಕಿಂತ 25 ರನ್ ಗಳಿಸಲಷ್ಟೇ ಸಾಧ್ಯವಾಯಿತು. ಆದ್ದರಿಂದ ಆಸ್ಟ್ರೇಲಿಯಾ ಗೆಲುವಿಗೆ 26 ರನ್ ಗಳ ಸುಲಭದ ಸವಾಲು ಸಿಕ್ಕಿತು. ಈ ಸವಾಲನ್ನು ಆಸ್ಟ್ರೇಲಿಯಾ ಸುಲಭವಾಗಿ ಪೂರ್ಣಗೊಳಿಸಿತು. ಉಸ್ಮಾನ್ ಖವಾಜಾ 9 ರನ್ ಗಳಿಸಿ ರಿಟೈರ್ಡ್ ಹರ್ಟ್ ಆದರೆ, ಸ್ಟೀವನ್ ಸ್ಮಿತ್ 11 ರನ್ ಮತ್ತು ಮಾರ್ನಸ್ ಲಬುಶೇನ್ 1 ರನ್ ಗಳಿಸಿ ಅಜೇಯರಾಗಿ ಉಳಿದರು.

## ಏಕಾಏಕಿ ನಾಯಕತ್ವದಿಂದ ಕೆಳಗಿಳಿದ ಗ್ಲೆನ್ ಮ್ಯಾಕ್ಸ್‌ವೆಲ್..!



ಆಸ್ಟ್ರೇಲಿಯದಲ್ಲಿ ನಡೆಯುತ್ತಿರುವ ಈ ಆವೃತ್ತಿಯ ಬಿಗ್ ಬ್ಯಾಷ್ ಟಿ20 ಲೀಗ್ ಇದೀಗ ಅಂತಿಮ ಹಂತವನ್ನು ತಲುಪಿದೆ. ಏತನ್ಮಧ್ಯೆ, ಮೆಲ್ಬೋರ್ನ್ ಸ್ಟಾರ್ಸ್ ತಂಡದ ನಾಯಕರಾಗಿದ್ದ ಆಸ್ಟ್ರೇಲಿಯಾದ ಸ್ಟಾರ್ ಆಟಗಾರ ಗ್ಲೆನ್ ಮ್ಯಾಕ್ಸ್‌ವೆಲ್ ತಂಡದ ಅವಮಾನಕರ ಪ್ರದರ್ಶನದ ನಂತರ ನಾಯಕತ್ವದಿಂದ ಕೆಳಗಿಳಿಯಲು ನಿರ್ಧರಿಸಿದ್ದಾರೆ.

2018ರಲ್ಲಿ ಈ ತಂಡದ ನಾಯಕತ್ವದ ಜವಾಬ್ದಾರಿಯನ್ನು ವಹಿಸಿಕೊಂಡಿದ್ದ ಮ್ಯಾಕ್ಸ್‌ವೆಲ್ ತಂಡದ ಕಳಪೆ ಪ್ರದರ್ಶನದ ಹೊಣೆ ಹೊತ್ತು ನಾಯಕತ್ವದಿಂದ ಕೆಳಗಿಳಿಯಲು ಮುಂದಾಗಿದ್ದಾರೆ. ಈ ಸೀಸನ್‌ನ ಲೀಗ್ ಹಂತದಲ್ಲಿ ಮ್ಯಾಕ್ಸ್‌ವೆಲ್ ತಂಡವು ಪಾಯಿಂಟ್ ಪಟ್ಟಿಯಲ್ಲಿ ಆರನೇ ಸ್ಥಾನವನ್ನು ಗಳಿಸಿದ್ದು, ಇದು ತಂಡದ ನಿರಸ ಪ್ರದರ್ಶನಕ್ಕೆ ಸಾಕ್ಷಿಯಾಗಿದೆ.

ಈ ಆವೃತ್ತಿಯ ಬಿಗ್ ಬ್ಯಾಷ್‌ಲೀಗ್‌ನಲ್ಲಿ ಮೆಲ್ಬೋರ್ನ್ ಸ್ಟಾರ್ಸ್ ತಂಡದ ಪಯಣವನ್ನು ನಾವು ನೋಡಿದರೆ, ಆಡಿರುವ 10 ಪಂದ್ಯಗಳ ಪೈಕಿ ಈ ತಂಡ 6 ಪಂದ್ಯಗಳಲ್ಲಿ ಸೋಲನ್ನು ಎದುರಿಸಿದರೆ, ಕೇವಲ 4 ಪಂದ್ಯಗಳಲ್ಲಿ ಮಾತ್ರ ಗೆಲುವು ಸಾಧಿಸಿದೆ.

Cricket.com AU ನ ವರದಿಯ ಪ್ರಕಾರ, ಗ್ಲೆನ್ ಮ್ಯಾಕ್ಸ್‌ವೆಲ್ ನಾಯಕತ್ವದಿಂದ ಕೆಳಗಿಳಿಯುವ ನಿರ್ಧಾರವನ್ನು ತಮ್ಮ ತಂಡದ ಆಟಗಾರರಿಗೆ ತಿಳಿಸಿದ್ದಾರೆ ಎಂದು ವರದಿಯಾಗಿದೆ. ಆದರೆ ಮ್ಯಾಕ್ಸ್‌ವೆಲ್ ಮುಂದಿನ ಸೀಸನ್‌ನಿಂದ ತಂಡದಲ್ಲಿ ಕೇವಲ ಆಟಗಾರನಾಗಿ ಆಡಲಿದ್ದಾರೆ ಎಂದು ವರದಿಯಾಗಿದೆ.

ಹೋಬರ್ಟ್ ಹರಿಕೇನ್ಸ್ ತಂಡದ ವಿರುದ್ಧ 7 ರನ್ ಅಂತರದ ಸೋಲಿನ ನಂತರ ಮ್ಯಾಕ್ಸ್‌ವೆಲ್ ಈ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ಈ ಸೀಸನ್‌ನಲ್ಲಿ ತಂಡವು ಸತತ ನಾಲ್ಕು ಪಂದ್ಯಗಳನ್ನು ಗೆಲ್ಲುವ ಮೂಲಕ ಪ್ಲೇಆಫ್ ರೇಸ್ ಅನ್ನು ಜೀವಂತವಾಗಿರಿಸಿಕೊಂಡಿತ್ತು. ಆದರೆ ಲೀಗ್ ಹಂತದ ಕೊನೆಯ 3 ಪಂದ್ಯಗಳನ್ನು ಸೋಲುವ ಮೂಲಕ ತಂಡವು ಲೀಗ್ ಹಂತದಲ್ಲೇ ಟೂರ್ನಿಯಿಂದ ಹೊರಬಿದ್ದಿದೆ.

ಈ ಆವೃತ್ತಿಯ ಬಿಗ್ ಬ್ಯಾಷ್ ಲೀಗ್ ನ, ಲೀಗ್ ಹಂತದ ಪಂದ್ಯಗಳು ಮುಗಿದ ನಂತರ, ಪ್ಲೇಆಫ್ ಪಂದ್ಯಗಳು ಜನವರಿ 19 ರಿಂದ ಪ್ರಾರಂಭವಾಗುತ್ತವೆ. ಈ ಬಾರಿ ಬ್ರಿಸ್ಬೇನ್ ಹೀಟ್, ಸಿಡ್ನಿ ಸಿಕ್ಸರ್ಸ್, ಪರ್ತ್ ಸ್ಕಾರ್ಚರ್ಸ್ ಮತ್ತು ಅಡಿಲೇಡ್ ಸ್ಟ್ರೈಕರ್ಸ್ ತಂಡಗಳು ಮುಂದಿನ ಹಂತಕ್ಕೆ ಆಯ್ಕೆಯಾಗಿವೆ. ಇದರಲ್ಲಿ ಮೊದಲ ಕ್ವಾಲಿಫೈಯರ್ ಪಂದ್ಯ ಬ್ರಿಸ್ಬೇನ್ ಹೀಟ್ ಮತ್ತು ಸಿಡ್ನಿ ಸಿಕ್ಸರ್ಸ್ ನಡುವೆ ನಡೆದರೆ, ನಾಕೌಟ್ ಪಂದ್ಯ ಪರ್ತ್ ಸ್ಕಾರ್ಚರ್ಸ್ ಮತ್ತು ಅಡಿಲೇಡ್ ಸ್ಟ್ರೈಕರ್ಸ್ ನಡುವೆ ನಡೆಯಲಿದೆ. ಈ ಋತುವಿನ ಪ್ರಶಸ್ತಿ ಪಂದ್ಯ ಜನವರಿ 24 ರಂದು ನಡೆಯಲಿದೆ.

## ಕುಟುಂಬ ಸಹಿತ ನಾನು ಅಯೋಧ್ಯೆಗೆ ಹೋಗುತ್ತೇನೆ



**ಹಾಸನ:** ಕುಟುಂಬ ಸಹಿತವಾಗಿ ನಾನು ಅಯೋಧ್ಯೆ ರಾಮ ಮಂದಿರಕ್ಕೆ ಹೋಗುತ್ತೇನೆ ಎಂದು ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್‌ಡಿ ದೇವೇಗೌಡ ಹೇಳಿದರು. ಹಾಸನದಲ್ಲಿ ಮಾತನಾಡಿದ ಅವರು, ನಾನು, ನನ್ನ ಪತ್ನಿ, ಮಗ ಹೆಚ್‌ಡಿ ಕುಮಾರಸ್ವಾಮಿ ಮತ್ತು ಅವರ ಪತ್ನಿ ಹಾಗೂ ನಿಖಿಲ್ ಹೋಗುತ್ತೇವೆ ಎಂದರು.

ಜನವರಿ 22ಕ್ಕೆ ವಿಶೇಷ ವಿಮಾನ ಮಾಡಿದ್ದಾರೆ. ಅದರಲ್ಲೆ ಅಯೋಧ್ಯೆಗೆ ಹೋಗುತ್ತೇವೆ. ಸಂಜೆ ಒಕ್ಕಲಿಗರ ಒಂದು ಸಮಾವೇಶ ಇದೆ. ಎಸ್ ಎಂ ಕೃಷ್ಣ, ಡಿಕೆ ಶಿವಕುಮಾರ್, ನಾನು ನಮ್ಮ ಸ್ವಾಮಿಜಿ ಎಲ್ಲರೂ ಭಾಗಿಯಾಗುತ್ತೇವೆ ಎಂದರು.

ಮೀಸಲಾತಿ ಬಗ್ಗೆ ತಮ್ಮ ಅಧಿಕಾರವಧಿಯಲ್ಲಿ ಕೈಕೊಂಡ ತೀರ್ಮಾನಗಳ ಬಗ್ಗೆ ದೇವೇಗೌಡರು ಸ್ಮರಿಸಿದರು. ರಾಜ್ಯ ಸರ್ಕಾರ ಒಳ ಮೀಸಲಾತಿ ಬಗ್ಗೆ ಸಚಿವ ಸಂಪುಟ ಸಭೆ ನಿರ್ಣಯ ಮಾಡಿ ಕೇಂದ್ರಕ್ಕೆ ಕಳಿಸಿದೆ. ಒಕ್ಕಲಿಗರಿಗೆ ಕೊಟ್ಟಿದ್ದ ಮೀಸಲಾತಿ ಕೋಟಾ ಕಡಿಮೆ ಮಾಡಿ ಮುಸ್ಲಿಂರಿಗೆ ಕೊಟ್ಟಿದ್ದು ನಾನು ಎಂದು ಹೆಚ್‌ಡಿ ದೇವೇಗೌಡರು ಹೇಳಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಸಂವಿದಾನ ಕೊಟ್ಟ ಮೀಸಲಾತಿ ಭರ್ತಿಮಾಡಲು ಆಗದಿದ್ದಾಗ ಉದ್ಯೋದದಲ್ಲಿ ಪದೋನ್ನತಿ ಬಗ್ಗೆ ಜಾರಿ ಮಾಡಲು ಕೇಳಿದರು. ಶೇಕಡಾ 15 ಎಸ್‌ಸಿಗಳಿಗೆ, ಶೇಕಡಾ 3 ಎಸ್ ಟಿಗಳಿಗೆ ಮೀಸಲಾತಿ ಇತ್ತು. ಆದರೆ ಉದ್ಯೋಗದಲ್ಲಿ ಈ ಮೀಸಲಾತಿ ಪ್ರಮಾಣ ತಲುಪದೆ ಹೋದಾಗ ನಾನು ಅದನ್ನ ಶೇಕಡಾ 15 ರಿಂದ 18ಕ್ಕೆ ಮತ್ತು ಶೇಕಡಾ 3 ರಿಂದ 5ಕ್ಕೆ ಏರಿಸಿದೆ. ಇದೆಲ್ಲವನ್ನೂ ಕೂಡ ನಾನು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಮಾಡಿದ್ದು ಎಂದರು.

ಅಂದು ಶೇಕಡಾ 23 ರಷ್ಟು ತೀರ್ಮಾನ ಮಾಡಿದ್ದು ಈಗಲೂ ಜಾರಿಯಲ್ಲಿ ಇದೆ. ಒಳ ಮೀಸಲಾತಿ ಬಗ್ಗೆ ಈಗ ಸರ್ಕಾರ ಕೇಂದ್ರಕ್ಕೆ ಕಳಿಸಿದೆ. ಇಷ್ಟು ವರ್ಷ ಕೆಲವೇ ಕೆಲವು ಕುಟುಂಬಗಳು ಫಲ ಅನುಭವಿಸಿವೆ. ನಾವು ಮಾಡಿರುವ ಜಾತಿಗಳಲ್ಲಿ ಕೆಲವೇ ಕೆಲವು ಕುಟುಂಬಗಳು ಈ ಮೀಸಲಾತಿಯ ಫಲ ಅನುಭವಿಸಿವೆ ಎಂದರು.

ನಮ್ಮ ಅವದಿಯಲ್ಲಿ ತಿಪ್ಪೇಸ್ವಾಮಿ ಅವರು ಒಳ ಮೀಸಲಾತಿ ಬಗ್ಗೆ ಖಾಸಗಿ ನಿರ್ಣಯ ಮಂಡಿಸಿದ್ದರು. ಅಂದು ಖರ್ಗೆ ಅವರು ವಿಪಕ್ಷದ ನಾಯಕರಾಗಿದ್ದರು. ಅವರು ತಮ್ಮ ಸೀಟ್‌ನಿಂದ ನೆಗೆದು ಬಂದು ಆ ನಿರ್ಣಯ ಪ್ರತಿಯನ್ನ ಹರಿದು ಹರಿದು ಅವರ ಮುಖಕ್ಕೆ ಎಸೆದಿದ್ದರು. ಇವತ್ತು ಒಳ ಮೀಸಲಾತಿ ಬಗ್ಗೆ ಚರ್ಚೆ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ದೇವೇಗೌಡರು ಮಾಡಿದ ಕೆಲಸವನ್ನು ಮರೆ ಮಾಚೊಕೆಲಸವನ್ನು ಇಷ್ಟು ದಿನ ಮಾಡಿದ್ದೀರಿ. ಈ ಜಿಲ್ಲೆಯ ಉಸ್ತುವಾರಿ ಮಂತ್ರಿ ರಾಜಣ್ಣ. ಚುನಾವಣೆ ಮುಗಿಯುವ ವೇಳೆಯಲ್ಲಿ ನನಗೆ ಜ್ವರ ಬಂದು ಮಲಗಿದ್ದೆ. ಆಗ ಅವರು ನೀವು ಬಂದರೆ ನಾನು ಗೆಲ್ಲುತ್ತೇನೆ, ಇಲ್ಲವಾದರೆ ಗೆಲ್ಲಲ್ಲ ಎಂದಿದ್ದರು. ಅವರು ಜನರಲ್ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದ್ದರು. ಆಗ ಅವರು 700ಕ್ಕೂ ಹೆಚ್ಚು ಮತಗಳಿಂದ ಗೆದ್ದರು ಎಂದರು.

ರಾಜಣ್ಣರ ಬಗ್ಗೆ ನನಗೆ ತುಂಬಾ ಗೌರವ ಇದೆ. ನಾನು ತುಮಕೂರಿನಿಂದ ಸ್ಪರ್ದೆ ಮಾಡಿದಾಗ ನೀವು ಮುದ್ದು ಹನುಮೇಗೌಡರ ಸ್ಥಾನ ಕಿತ್ತುಕೊಂಡ್ರಿ ಅಂತಾ ಬಹಿರಂಗ ಸಭೆಯಲ್ಲಿ ಹೇಳಿದ್ದರು ಎಂದು ಹೇಳುವ ಮೂಲಕ 2019 ರ ಲೋಕಸಭಾ ಚುನಾವಣಾ ಸಂದರ್ಭದಲ್ಲಿ ರಾಜಣ್ಣ ಮಾತನಾಡಿದ್ದ ಬಗ್ಗೆ ದೇವೇಗೌಡರು ಬೇಸರ ವ್ಯಕ್ತಪಡಿಸಿದರು.

ಲೋಕಸಭೆ ಚುನಾವಣೆಗೆ ಕರ್ನಾಟಕದಲ್ಲಿ ಬಿಜೆಪಿ ಜೊತೆ ಜೆಡಿಎಸ್ ಮೈತ್ರಿ ಮಾಡಿಕೊಂಡಿದೆ. ಸೀಟು ಹಂಚಿಕೆ ಚರ್ಚೆ ನಡೆಯುತ್ತಿದ್ದು, ನಾಲ್ಕೈದು ಸ್ಥಾನಗಳು ನೀಡುವಂತೆ ಜೆಡಿಎಸ್ ಮನವಿ ಮಾಡಿದೆ. ಈ ಬಗ್ಗೆ ಮಾತನಾಡಿದ ದೇವೇಗೌಡರು, ನಮಗೆ ನಾಲ್ಕು ಸೀಟ್ ಕೊಡುತ್ತಾರೋ ಮೂರು ಕೊಡುತ್ತಾರೋ ಗೊತ್ತಿಲ್ಲ ಎಂದರು.

ಕುಮಾರಸ್ವಾಮಿ ಸರ್ಕಾರ ತೆಗೆದಿದ್ದು ಯಾರು, 13 ತಿಂಗಳಿಗೆ ನನ್ನನ್ನು ಪ್ರದಾನ ಮಂತ್ರಿ ಸ್ಥಾನದಿಂದ ಕೆಳಗಿಳಿಸಿದ್ದು ಯಾರು ಎಂದು ಹೇಳುವ ಮೂಲಕ ಕಾಂಗ್ರೆಸ್ ವಿರುದ್ಧ ಅಸಾಮಾಧಾನ ಜೊರಹಾಕಿದ ದೇವೇಗೌಡರು, ನನ್ನ ರಾಜಕೀಯ ಜೀವನದಲ್ಲಿ 60 ವರ್ಷ ದುಡಿದಿದ್ದೇನೆ. ಯಾವ ಯಾವ ಸಮುದಾಯಕ್ಕೆ ಮೀಸಲಾತಿ ಲಾಭ ಆಗಿದೆ. ಇದರ ಲಾಭವನ್ನು ಯಾರು ಪಡೆದಿದ್ದಾರೆ ಎಂಬುದರ ಬಗ್ಗೆ ಚರ್ಚೆ ಆಗಬೇಕು ಎಂದು ಒತ್ತಾಯಿಸಿದರು.

ಒಳ ಮೀಸಲಾತಿ ವಿಚಾರವನ್ನು ಕೇಂದ್ರಕ್ಕೆ ಹೊತ್ತುಹಾಕೊ ಕೆಲಸ ಮಾಡಿದಾರೆ. ಇದನ್ನೇ ಮುಂದಿಟ್ಟು ಈ ಚುನಾವಣೆಯಲ್ಲಿ ಹೋರಾಟ ಮಾಡುತ್ತೇನೆ. ನಾನು ಚುನಾವಣೆಗೆ ಸ್ಪರ್ಧೆ ಮಾಡುವ ಪ್ರಶ್ನೆ ಇಲ್ಲ ಎಂದು ಮತ್ತೊಮ್ಮೆ ಸ್ಪಷ್ಟಪಡಿಸಿದರು.

## ಒಕ್ಕಲಿಗರ ಬೆಂಬಲ ಇದ್ರೆ ಮತ್ತಷ್ಟು ಎತ್ತರಕ್ಕೆ ಬೆಳೆಯಬಹುದು: ಡಿಕೆಶಿ

**ಬೆಂಗಳೂರು:** ಒಕ್ಕಲಿಗ ಸಮುದಾಯದ ಸಹಕಾರದಿಂದ ನಾನು ಇಲ್ಲಿವರೆಗೆ ಬಂದಿದ್ದೇನೆ. ನಿಮ್ಮೆಲ್ಲರ ಬೆಂಬಲ ಇದ್ದರೆ ನಾನು ಇನ್ನೂ ಎತ್ತರಕ್ಕೆ ಹೋಗುತ್ತೇನೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.



ಬೆಂಗಳೂರು ಅರಮನೆ ಮೈದಾನದಲ್ಲಿ ನಡೆದ ಒಕ್ಕಲಿಗ ಉದ್ಯಮಿಗಳ ಎಕ್ಸ್‌ಪೋದಲ್ಲಿ ಮಾತನಾಡಿದ ಅವರು, ನನಗೆ ಬೇಕಾದಷ್ಟು ಏಟು ಬಿದ್ದಿದೆ. ನಾನು ಕನಕಪುರದ ಕಲ್ಲು ಮಣ್ಣಿನಿಂದ ಬಂದಿದ್ದೇನೆ. ಕಲ್ಲು ಪ್ರಕೃತಿ, ಕೆತ್ತಿದರೆ ಆಕೃತಿ, ಪೂಜಿಸಿದರೆ ಸಂಸ್ಕೃತಿ, ಏಟು ಬಿದ್ದು ಬಿದ್ದು ಈ ಹಂತಕ್ಕೆ ಬಂದಿದ್ದೇನೆ. ನೀವು ತಿರುಪತಿ ತಿಮ್ಮಪ್ಪನ ಹಾಗೇ ಒಂದೇ ಕಡೆ ಇರಬಾರದು. ಎರಡೂ ಕಡೆ ಇರಬೇಕು, ನೀವು ಬೆಳೆಯಬೇಕು ಬೇರೆಯವರನ್ನೂ ಬೆಳೆಸಬೇಕು ಎಂದಿದ್ದಾರೆ.

ಮೂರು 'ಕೆ'ಗಳನ್ನು ನಮ್ಮ ಸಮಾಜ ಸದಾ ನೆನಪಿಸಿಕೊಳ್ಳಬೇಕು. ಬೆಂಗಳೂರು ನಿರ್ಮಾತೃ ಕೆಂಪೇಗೌಡ, ವಿಧಾನಸೌಧ ನಿರ್ಮಾತೃ ಕೆಂಗಲ್ ಹನುಮಂತಯ್ಯ, ಬೆಂಗಳೂರಿಗೆ ಹೊಸ ರೂಪ ನೀಡಿದ ಎಸ್.ಎಂ ಕೃಷ್ಣ ಅವರನ್ನು ಮರೆಯಬಾರದು. ಸಮುದಾಯದವರ ನಡುವೆ ಶೇರಿಂಗ್ ಕೇರಿಂಗ್ ಇರಬೇಕು ಎಂದಿದ್ದಾರೆ.

ಸಮುದಾಯದ ಜನ ಗಟ್ಟಿ ಧ್ವನಿಯಲ್ಲಿ ಮಾತನಾಡಬೇಕು. ನನ್ನನ್ನು ಸೇರಿದಂತೆ ಯಾರೇ ತಪ್ಪು ಮಾಡಿದರೂ ತಿದ್ದಿ ಹೇಳಬೇಕು. ಯಾರು ಏನು ಮಾಡೋಕ್ಕಾಗಲ್ಲ ಗಟ್ಟಿಯಾಗಿ ಮಾತನಾಡಬೇಕು. ಈ ಬಗ್ಗೆ ನಿರ್ಮಲಾನಂದ ಶ್ರೀಗಳಿಗೆ ನಾನು ಹೇಳ್ತಾ ಇರುತ್ತೇನೆ ಎಂದಿದ್ದಾರೆ.

ಒಕ್ಕಲಿಗರ ಸಂಘದವರು ಬರೀ ಜೇನು ತಿನ್ನೋದಲ್ಲ. ಅದನ್ನೆಲ್ಲಾ ಕಡಿಮೆ ಮಾಡಿಸಿದ್ದೇವೆ. ಇನ್ನೂ 3-4 ಮೆಡಿಕಲ್ ಕಾಲೇಜ್ ಮಾಡಿ ಎಂದು ಹೇಳಿದ್ದೇನೆ. ಮತ್ತೆ ಗಲಾಟೆ ಮಾಡಿಕೊಂಡರೆ ನನ್ನ ಅವಧಿಯಲ್ಲೇ ಒಕ್ಕಲಿಗರ ಸಂಘಕ್ಕೆ ಅಡ್ಮಿನಿಸ್ಟ್ರೇಟರ್ ಹಾಕ್ತಿನಿ. ಜೊತೆಗೂಡುವುದು ಆರಂಭ, ಜೊತೆಗೂಡಿ ಚರ್ಚಿಸುವುದು ಪ್ರಗತಿ, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸಿಗೆ ದಾರಿಯಾಗಿದೆ. ಈ ಕಾರ್ಯಕ್ರಮಕ್ಕೆ ಬೇಗನೇ ಚಾಲನೆ ಕೊಡಬೇಕಿತ್ತು. ತಡ ಆಗಿದೆ, ಪರವಾಗಿಲ್ಲ ಆದರೂ ಚಾಲನೆ ಸಿಕ್ಕಿದೆ. ನಾವೆಲ್ಲಾ ಒಕ್ಕಲು ತನ ಮಾಡುವವರು ಒಂದಾಗಬೇಕಿದೆ ಎಂದಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com